RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 81 ಪುಟ: 06 ಗುರುವಾರ 20-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



'ಬಿಲ್ಲಾ ರಂಗ ಭಾಷಾ' ಸಿನಿಮಾ ಶುರು

ತಮ್ಮದೇ ದಾಖಲೆ ಮುರಿದ ಸಾಯಿ ಪಲ್ಲವಿ-ನಾಗ ಚೈತನ್ಯ

ಘೋಷಾಲ್ ಹಾರ್ಟ್ ಓಲ್ಡ್ ↘ ಪುಟ 6

## ಸಿಎಂ ರೇಖಾಗುಪ್ತ ಸಂಪುಟಕ್ಕೆ 6 ಮಂದಿ ಸಚಿವರು; ಪ್ರಮಾಣ ಬೋಧಿಸಿದ ಲೆಫ್ಟಿನೆಂಟ್ ಗೌರ್ನರ್

# ದೆಹಲಿ ಗದ್ದುಗೆ ಏರಿದ ಬಿಜೆಪಿ

**ನವದೆಹಲಿ:** ರಾಷ್ಟ್ರ ರಾಜಧಾನಿ ನವದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಮೊದಲ ಬಾರಿಗೆ ಶಾಲಿಮಾರ್ ಬಾಗ್ ಕ್ಷೇತ್ರದ ಶಾಸಕಿಯಾಗಿ ಆಯ್ಕೆಯಾಗಿರುವ ರೇಖಾ ಗುಪ್ತ ಅವರು ಗುರುವಾರ ಅಧಿಕಾರ ಸ್ವೀಕಾರ ಮಾಡಿದರು.

ದೆಹಲಿಯಲ್ಲಿ ಸ್ವಂತಬಲದ ಮೇಲೆ ಅಧಿಕಾರ ಗದ್ದುಗೆ ಹಿಡಿಯುವ ಬಹು ದಿನಗಳ ಕನಸನ್ನು 27 ವರ್ಷಗಳ ನಂತರ ಬಿಜೆಪಿ ನನಸಾಗಿಸಿಕೊಂಡಿದೆ.

ರಾಮಲೀಲಾ ಮೈದಾನದಲ್ಲಿ ಆಯೋಜಿಸಿದ್ದ ಪ್ರಮಾಣ ವಚನ ಕಾರ್ಯಕ್ರಮದಲ್ಲಿ ರೇಖಾ ಗುಪ್ತಾ ಅವರು ಬಿಜೆಪಿಯಿಂದ 2ನೇ ಹಾಗೂ ದೆಹಲಿಯ 4ನೇ ಮಹಿಳಾ ಮುಖ್ಯಮಂತ್ರಿಯಾಗಿ ದೇವರ ಹೆಸರಲ್ಲಿ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ಸ್ವೀಕರಿಸಿದರು. ಇವರಿಗೆ ಲೆಫ್ಟಿನೆಂಟ್ ವಿಕೆ ಸಕ್ಸೇನಾ ಪ್ರಮಾಣ ವಚನ ಬೋಧಿಸಿದರು.

ಪ್ರಧಾನಿ ನರೇಂದ್ರ ಮೋದಿ, ಎಲ್ಲ ಕೇಂದ್ರ ಸಚಿವರು, ಪಕ್ಷದ ಎಲ್ಲ ಹಿರಿಯ ನಾಯಕರು ಮತ್ತು ಬಿಜೆಪಿ ಮತ್ತು ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಪ್ರಮಾಣ ವಚನ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಇದೇ ವೇಳೆ ವಿಧಾನಸಭಾ ಚುನಾವಣೆಯಲ್ಲಿ ಅರವಿಂದ್ ಕೇಜ್ರಿವಾಲ್ ಅವರನ್ನು ಸೋಲಿಸಿದ್ದ ಪರ್ವೇಶ್ ವರ್ಮಾ



ಅವರು ಉಪ ಮುಖ್ಯಮಂತ್ರಿಯಾಗಿ ಹಾಗೂ ಬಿಜೆಪಿ ಶಾಸಕರಾದ ಆಶಿಶ್ ಸೂದ್, ಮಂಜಿಂದರ್ ಸಿಂಗ್ ಸಿಸಾರ್, ರವೀಂದರ್ ಇಂದ್ರಜ್, ಕಪಿಲ್ ಮಿಶ್ರಾ ಮತ್ತು ಪಂಕಜ್ ಕುಮಾರ್ ಸಿಂಗ್ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ಬುಧವಾರ ಸಂಜೆ ನಡೆದ ಬಿಜೆಪಿ ಶಾಸಕರ ನಿರ್ಣಾಯಕ ಸಭೆಯಲ್ಲಿ ಶಾಸಕಾಂಗ ಪಕ್ಷದ ನಾಯಕಿಯಾಗಿ ಆಯ್ಕೆಯಾದ ನಂತರ ಅವರು ಮುಂದಿನ ಸರ್ಕಾರ ರಚಿಸುವ ಹಕ್ಕು ಮಂಡಿಸಿದ್ದರು. ಪ್ರಮಾಣ ವಚನ ಕಾರ್ಯಕ್ರಮ ನಡೆಯಲಿರುವ ಸ್ಥಳ ಮತ್ತು ಸುತ್ತಮುತ್ತ 25,000 ಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಈ ಮೆಗಾ ಕಾರ್ಯಕ್ರಮದಲ್ಲಿ 20 ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು, ದೆಹಲಿ ಚುನಾವಣೆಯಲ್ಲಿ ಪ್ರಚಾರ ಮಾಡಿದ ಇತರ ರಾಜ್ಯಗಳ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು. 50 ಕ್ಕೂ ಹೆಚ್ಚು ಚಲನಚಿತ್ರ ತಾರೆಯರು ಮತ್ತು ಕೈಗಾರಿಕೋದ್ಯಮಿಗಳು ಭಾಗಿಯಾಗಿದ್ದರು. ದೇಶದ ಆಧ್ಯಾತ್ಮಿಕ ನಾಯಕರಾದ ಬಾಬಾ ರಾಮದೇವ್, ಸ್ವಾಮಿ ಚಿದಾನಂದ, ಬಾಬಾ ಬಾಗೇಶ್ವರ ಧೀರೇಂದ್ರ ಶಾಸ್ತ್ರಿ ಮತ್ತು ಇತರ ಧಾರ್ಮಿಕ ವ್ಯಕ್ತಿಗಳು ಪ್ರತಿನಿಧಿಸಿದ್ದರು.

ಈ ನಡುವೆ ಮುಖ್ಯಮಂತ್ರಿ ಸ್ಥಾನ ಸಿಕ್ಕಿರುವುದಕ್ಕೆ ಸಂತಸ ವ್ಯಕ್ತಪಡಿಸಿರುವ ರೇಖಾ ಗುಪ್ತಾ ಅವರು, ಇದು ಒಂದು ಪವಾಡ ಎನಿಸುತ್ತಿದೆ, ಇದು ಹೊಸ ಪ್ರೇರಣೆ ಮತ್ತು ಹೊಸ ಅಧ್ಯಾಯ. ನಾನು ಮುಖ್ಯಮಂತ್ರಿಯಾಗಲು ಸಾಧ್ಯವಾಗಿದೆ ಎಂದರೆ ಎಲ್ಲಾ ಮಹಿಳೆಯರಿಗೂ ಈ ದಾರಿ ತೆರೆದಿರುತ್ತದೆ ಎಂದೇ ಅರ್ಥ. ಭ್ರಷ್ಟಾಚಾರ ನಡೆಸಿದ ಪ್ರತಿಯೊಬ್ಬರೂ ಪ್ರತಿ ರೂಪಾಯಿಯ ಲೆಕ್ಕವನ್ನು ನೀಡಬೇಕಾಗುತ್ತದೆ ಎಂದು ಹೇಳಿದ್ದಾರೆ.ಮುಖ್ಯಮಂತ್ರಿ ಸ್ಥಾನ ಒಂದು ದೊಡ್ಡ ಜವಾಬ್ದಾರಿ. ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಪ್ರಧಾನಿ ಮೋದಿ ಮತ್ತು ಬಿಜೆಪಿ ಹೈಕಮಾಂಡ್‌ಗೆ ಧನ್ಯವಾದ ಹೇಳುತ್ತೇನೆ. ನಾನು ನನ್ನ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕತೆಯಿಂದ ನಿರ್ವಹಿಸುತ್ತೇನೆ. ನಮ್ಮ ಪಕ್ಷವು ನೀಡಿರುವ ಎಲ್ಲಾ ಭರವಸೆಗಳನ್ನು ಪೂರ್ಣಗೊಳಿಸುವುದು ನನ್ನ ಮೊದಲ ಆದ್ಯತೆಯಾಗಿದೆ. ಪುಟ 2




ಸುಗಮ ಮತ್ತು ಸುರಕ್ಷಿತ ರಸ್ತೆ ಖಾತರಿ ನಿಟ್ಟಿನಲ್ಲಿ ಬಿಬಿಎಂಪಿಯು ಕೇಂದ್ರ ಕಚೇರಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ "ನಮ್ಮ ರಸ್ತೆ – ವಿನ್ಯಾಸ ಕಾರ್ಯಾಗಾರ"ದ ಉದ್ಘಾಟನೆ ಮತ್ತು ಸಂಚಾರ ಪ್ರಯೋಗಾಲಯಕ್ಕೆ ಚಾಲನೆ, ನಮ್ಮ ರಸ್ತೆ ಕೈಪಿಡಿಯ ಬಿಡುಗಡೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು. ಬಿಬಿಎಂಪಿ ಮುಖ್ಯ ಕಮಿಷನರ್ ತುಷಾರ್ ಗಿರಿನಾಥ್, ಡಿಸಿಎಂ ಕಾರ್ಯದರ್ಶಿ, ಬಿ ಎಂ ಆರ್ ಡಿ ಎ ಆಯುಕ್ತ ರಾಜೇಂದ್ರ ಚೋಳನ್, ಇಂಜಿನಿಯರ್ ಇನ್ ಚೀಫ್ ಬಿ ಎಸ್ ಪ್ರಹ್ಲಾದ್, ಡಬ್ಲ್ಯೂ ಆರ್ ಐ ಇಂಡಿಯಾದ ಮಾಧವ ಪೈ, ಭಾರತೀಯ ವಿಜ್ಞಾನ ಸಂಸ್ಥೆಯ ಪ್ರೊ. ಆಶೀಸ್ ವರ್ಮಾ, ನಗರ ತಜ್ಞ ಆರ್ ಕೆ ಮಿಶ್ರ, ನರೇಶ್ ನರಸಿಂಹನ್ ಮತ್ತಿತರರು ಉಪಸ್ಥಿತರಿದ್ದರು.

## ಡಿ.ಕೆ.ಶಿವಕುಮಾರ್ ಸಿಎಂ ಆಗುವುದು ಖಚಿತ

**ಬೆಂಗಳೂರು:** ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗುವುದು ಖಚಿತ ಎಂದು ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಹೇಳಿಕೆ ಸಂಚಲನ ಮೂಡಿಸಿದೆ.



ರಾಜ್ಯ ರಾಜಕಾರಣದಲ್ಲಿ ಒಂದು ಕಡೆ ಬಿಜೆಪಿ ಬಣ ಬಡಿದಾಟ ಶುರುವಾಗಿದ್ದರೆ, ಇನ್ನೊಂದು ಕಡೆ ತೆರೆಮರೆಯಲ್ಲಿ ಕಾಂಗ್ರೆಸ್ ನಲ್ಲಿ ಕೂಡ ಬಣದಲ್ಲಿ ಅಧಿಕಾರಕ್ಕೆ ಬಡಿದಾಟದ ಶೀತಲ ಸಮರ ಶುರುವಾಗಿದೆ, ಈ ನಡುವೆ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಹೇಳಿಕೆ ರಾಜ್ಯ ರಾಜ್ಯಕಾರಣದಲ್ಲಿ ಸಂಚಲನ ಮೂಡಿಸಿದೆ. ಸುದ್ದಿಗಾರೊಂದಿಗೆ ಮಾತನಾಡಿದ ಅವರು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲೂ ಅಗತ್ಯವಾಗಿದೆ ಎಂದಿದ್ದಾರೆ. ಪುಟ 2

## ಪರಿಶಿಷ್ಟ ಸಮುದಾಯಗಳ ಧ್ವನಿಯಾಗಿ ಬಿಜೆಪಿ ಹೋರಾಟ

**ಬೆಂಗಳೂರು:** ಪರಿಶಿಷ್ಟ ಜಾತಿ, ಪಂಗಡಗಳಿಗೆ ನಿರಂತರ ಅನ್ಯಾಯವಾಗುತ್ತಿದ್ದು, ನಾವು ಎಚ್ಚತ್ತುಕೊಳ್ಳದಿದ್ದರೆ ಮುಂದಿನ ಬಜೆಟನಲ್ಲೂ ಇದೇ ಕೆಲಸವನ್ನು ಸರಕಾರ ಮಾಡಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಎಚ್ಚರಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ" ದಲ್ಲಿ ಇಂದು ಏರ್ಪಡಿಸಿದ 'ಎಸ್‌ಸಿಪಿ– ಟಿಎಸ್‌ಪಿ ಹಣ ದುರ್ಬಳಕೆ ಮಾಡಿಕೊಂಡ ದಲಿತ ವಿರೋಧಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಾಂದೋಲನ' ಕುರಿತು ಪೂರ್ವಭಾವಿ ಕಾರ್ಯಾಗಾರವನ್ನುದ್ದೇಶಿಸಿ ಅವರು ಮಾತನಾಡಿದರು. ಪರಿಶಿಷ್ಟ ಸಮುದಾಯಗಳ ಧ್ವನಿಯಾಗಿ ನಾವು ಹೋರಾಟ ರೂಪಿಸಬೇಕಿದೆ ಎಂದು ತಿಳಿಸಿದರು.

ಬಿಜೆಪಿ ಸ್ವಂತ ಶಕ್ತಿಯಲ್ಲಿ ರಾಜ್ಯದಲ್ಲಿ ಅಧಿಕಾರಕ್ಕೆ



ಬರಲು, ಶೋಷಿತ, ಪೀಡಿತ ಜನಾಂಗದ ಪರವಾಗಿ ನಾವು ಧ್ವನಿ ಎತ್ತುವುದು ಅನಿವಾರ್ಯ ಎಂದು ತಿಳಿಸಿದರು. ಈ ಹೊಣೆಗೇಡಿ ಸರಕಾರದ ಅನ್ಯಾಯದ ವಿರುದ್ಧ ಧ್ವನಿ ಎತ್ತಬೇಕಾಗಿದೆ ಎಂದರು.ಪುಟ 2

## ಯುವಕರ ಮೇಲೆ ಹರಿದು ರೈಲು: ಮೂವರ ದುರ್ಮರಣ

**ದೊಡ್ಡಬಳ್ಳಾಪುರ:** ಕೆಲಸ ಮುಗಿಸಿಕೊಂಡು ಟ್ರ್ಯಾಕ್ ಮೇಲೆ ನಡೆದುಕೊಂಡು ಬರುತ್ತಿದ್ದ ಮೂವರು ಯುವಕರ ಮೇಲೆ ರೈಲು ಹರಿದ ದಾರುಣ ಘಟನೆ ದೊಡ್ಡಬಳ್ಳಾಪುರ ನಗರದ ಮುತ್ತೂರು ಬಳಿ ನಡೆದಿದೆ. ಘಟನೆಯಲ್ಲಿ ಮೂವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ರಾಹುಲ್, ಲಲ್ಲನ್ ಮತ್ತು ಬಿಕೇಶ್ ಎಂಬ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪುಟ 2

## ವ್ಯಕ್ತಿಯ ಹತ್ಯೆ

**ತೆಲಂಗಾಣ:** ತೆಲಂಗಾಣದ ಮಾಜಿ ಮುಖ್ಯಮಂತ್ರಿ ಕೆ ಚಂದ್ರಶೇಖರ್ ರಾವ್ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿದ್ದ ವ್ಯಕ್ತಿ ರಾಜಲಿಂಗಮೂರ್ತಿ ಎಂಬುವವರು ಜಯಶಂಕರ್ ಭೂಪಾಲಪಲ್ಲಿ ಪಟ್ಟಣದಲ್ಲಿ ಕೊಲೆಯಾಗಿದ್ದಾರೆ. ಕಾಲೇಶ್ವರಂ ಯೋಜನೆಯ ಭಾಗವಾಗಿ ಮೇಡಗಡ್ಡಿ ಬ್ಯಾರೇಜ್ ನಿರ್ಮಾಣದಲ್ಲಿ ಭ್ರಷ್ಟಾಚಾರ ನಡೆಸಿದೆ ಎಂದು ಕೆಸಿಆರ್ ಹಾಗೂ ಪುಟ 2

## ಅಪಘಾತ: 9 ಭಕ್ತರ ದುರ್ಮರಣ

**ಜೌನ್‌ಪುರ(ಉತ್ತರ ಪ್ರದೇಶ):** ಎರಡು ಪ್ರತ್ಯೇಕ ಅಪಘಾತಗಳಲ್ಲಿ 9 ಮಂದಿ ಮೃತಪಟ್ಟಿರುವ ಘಟನೆ ವಾರಾಣಸಿ – ಲಖನೌ ಚತುಷ್ಪಥದ ಬಾದಲ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗುರುವಾರ ಬೆಳಗ್ಗೆ ಸಂಭವಿಸಿದೆ. ಮೊದಲ ಅಫಘಾತ ಘಟನೆಯಲ್ಲಿ ಜಾರ್ಖಂಡ್‌ನಿಂದ ಬನಾರಸ್‌ಗೆ ಭಕ್ತರನ್ನು ಹೊತ್ತೊಯ್ಯುತ್ತಿದ್ದ ಕಾರು ಅಪರಿಚಿತ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಕಾರಿನಲ್ಲಿ ಒಟ್ಟು 11 ಮಂದಿ ಇದ್ದು, ಇವರಲ್ಲಿ 5 ಮಂದಿ ಪುಟ 2

## ಬಿಜೆಪಿ-ಜೆಡಿಎಸ್‌ನ ರಾಜಕೀಯ ಕುತಂತ್ರ ಹೆಚ್ಚು ದಿನ ನಡೆಯಲ್ಲ

**ಬೆಂಗಳೂರು:** "ಮುಡಾ ಪ್ರಕರಣ ಬಿಜೆಪಿ ಹಾಗೂ ಜೆಡಿಎಸ್ ಕುತಂತ್ರ, ಇದು ಹೆಚ್ಚಿನ ದಿನ ನಡೆಯುವುದಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಸಂಸ್ಥೆ ಬಿ ರಿಪೋರ್ಟ್ ಸಲ್ಲಿಕೆ ಮಾಡಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡಿದೆ ಎಂದು ಕೇಳಿದಾಗ, "ಈ ಪ್ರಕರಣದ ಪ್ರಾರಂಭದಲ್ಲೇ ನಾನು ಹೇಳಿದ್ದೆ.



ಬಿಜೆಪಿ ಹಾಗೂ ಜೆಡಿಎಸ್ ನವರು ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಮಾಡಿದಾಗಲೇ, ನಾನು ಏನು ಹೇಳಬೇಕೋ ಹೇಳಿದ್ದೆ. ಇದು ರಾಜಕೀಯ ಪ್ರೇರಿತ ಆರೋಪ. ಯಾವ ದಾಖಲೆಯಲ್ಲೂ ಸಿದ್ದರಾಮಯ್ಯ ಅವರ ಸಹಿ ಇಲ್ಲದಿರುವಾಗ, ಸಂಬಂಧವೇ ಇಲ್ಲದಿರುವಾಗ ಅವರ ಪಾತ್ರ ಹೇಗೆ ಬರುತ್ತದೆ. ಆಸ್ತಿ ಕಳೆದುಕೊಂಡವರು ಪರಿಹಾರ ಕೇಳುವುದು ಸಹಜ. ನಾವು ನೀವು ಕೂಡ ಕೇಳುತ್ತೇವೆ. ಅವರು ಕೊಟ್ಟಿದ್ದಾರೆ. ನಮಗೆ ಇಂತಹುದೇ ಜಾಗದಲ್ಲಿ ನಿವೇಶನ ನೀಡಿ ಎಂದು ಅವರು ಎಲ್ಲಿಯೂ ಕೇಳಿಲ್ಲ. ಆದರೂ ಅನಗತ್ಯ ಗೊಂದಲ ಬೇಡ ಎಂದು ಅವರು ಈ ನಿವೇಶನಗಳನ್ನು ವಾಪಸ್ ಪುಟ 2

## ಯಾವುದೇ ರಾಜಕೀಯ ಅಜೆಂಡಾ ಇರಲಿಲ್ಲ

ಬೆಂಗಳೂರು: ಖಾಸಗಿ ಕೆಲಸಗಳಿಗಾಗಿ ದೆಹಲಿ ಪ್ರವಾಸ ಮಾಡಿದ್ದೇನೆ. ಯಾವುದೇ



ರಾಜಕೀಯದ ಕಾರ್ಯಕ್ರಮ ಇಟ್ಟುಕೊಂಡಿರಲಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಸದಾಶಿವನಗರ ನಿವಾಸದ ಬಳಿ ಇಂದು ಮಾಧ್ಯಮದ ವರೊಂದಿಗೆ ಮಾತನಾಡಿದ ಅವರು, ನಾನು ಎಐಸಿಸಿ ಕಚೇರಿ ಉದ್ಘಾಟನಾ ಕಾರ್ಯಕ್ರಮಕ್ಕೆ ಹೋಗಿರಲಿಲ್ಲ. ಹೊಸ ಕಚೇರಿ ನೋಡಲು ಹೋಗಿದ್ದೆ. ಈ ವೇಳೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಮಾತನಾಡಿಸಿಕೊಂಡು ಪುಟ 2

## ಹೆಚ್‌ಡಿಕೆ ವಿರುದ್ಧ ರಾಜಕೀಯ ದ್ವೇಷವಿಲ್ಲ

**ಬೆಂಗಳೂರು:** ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ವಿರುದ್ಧ ಕಾಂಗ್ರೆಸ್ ಸರ್ಕಾರ ರಾಜಕೀಯ ದ್ವೇಷ ಮಾಡುತ್ತಿಲ್ಲ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಹೇಳಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇತಗಾನಹಳ್ಳಿ ಜಮೀನು ಸರ್ವೆ ರಾಜಕೀಯ ಪ್ರೇರಿತ ಎಂಬ ಕುಮಾರಸ್ವಾಮಿ ಆರೋಪಕ್ಕೆ ಖಾರವಾಗಿ ಪ್ರತಿಕ್ರಿಯಿಸಿದರು.



ಕೇತಗಾನಹಳ್ಳಿ ಜಮೀನು ಸರ್ವೆ ಕೋರ್ಟ್ ಆದೇಶದಂತೆ ನಡೆಯುತ್ತಿದೆ. ಇದನ್ನು ಸರ್ಕಾರ ಉದ್ದೇಶ ಪೂರಕವಾಗಿ ಮಾಡುತ್ತಿಲ್ಲ. ಆದರೆ ಕುಮಾರಸ್ವಾಮಿ ಅವರು ಅಧಿಕಾರ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಹಾಗಾದರೆ ಕೋರ್ಟ್ ಪುಟ 2

## 315 ಕೋಟಿ ಹೂಡಿಕೆ, 550 ಉದ್ಯೋಗ ಸೃಷ್ಟಿ

**ಕೋಲಾರ ಜಿಲ್ಲೆ:** ಇತ್ತೀಚೆಗಷ್ಟೇ ಮುಕ್ತಾಯವಾದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ, ಇನ್ವೆಸ್ಟ್ ಕರ್ನಾಟಕ–25ರ ಒಟ್ಟಾರೆ 10.27 ಲಕ್ಷ ಕೋಟಿ ರೂಪಾಯಿಗಳ ಹೂಡಿಕೆಯ ಭಾಗವಾಗಿದ್ದ 315 ಕೋಟಿ ರೂಪಾಯಿಗಳ ಜರ್ಮನಿ ಮೂಲದ ಕ್ರೋನ್ಸ್ ಕಂಪನಿಯ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಘಟಕ ನಿರ್ಮಾಣದ ಅನುಷ್ಠಾನ ಗುರುವಾರ ಆರಂಭಗೊಂಡಿತು. ಇಲ್ಲಿನ ಕೈಗಾರಿಕಾ ಪ್ರದೇಶದಲ್ಲಿ ಕಂಪನಿ ನಿರ್ಮಿಸಲಿರುವ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಘಟಕಕ್ಕೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಭೂಮಿಪೂಜೆ ನೆರವೇರಿಸುವುದರೊಂದಿಗೆ ಈ ಕಾರ್ಯಯೋಜನೆ ಚಾಲನೆ ಪಡೆಯಿತು.

ಜಾಗತಿಕ ಬಂಡವಾಳ ಹೂಡಿಕೆ ಸಮಾವೇಶದ ವೇಳೆ ಈ ಒಪ್ಪಂದ ಏರ್ಪಡುವ ಮುನ್ನ, ಸಚಿವರ ನಿಯೋಗವು ಕಳೆದ ಡಿಸೆಂಬರ್ ನಲ್ಲಿ ಜರ್ಮನಿ ರೋಡ್ ಷೋ ವೇಳೆ ಕಂಪನಿಯ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸಿತ್ತು. ಆ ಸಂದರ್ಭದಲ್ಲಿ ನ್ಯೂಟ್ರಾಬ್ಲಿಂಗ್ ನಲ್ಲಿರುವ ಕಂಪನಿಯ ಪ್ರಧಾನ ಕಚೇರಿಯಲ್ಲಿ ಪೂರ್ವಭಾವಿ



ಒಪ್ಪಂದ ಏರ್ಪಟ್ಟಿತ್ತು. ಇದೀಗ, ಉತ್ಪಾದನಾ ಘಟಕ ಸ್ಥಾಪನೆಗೆ ಭೂಮಿ ಪೂಜೆ ನೆರವೇರುವ ಮೂಲಕ, ಜಿಮ್ ನಲ್ಲಿ ಏರ್ಪಟ್ಟಿರುವ ಹೂಡಿಕೆ ಒಪ್ಪಂದಗಳನ್ನು ವಾಸ್ತವದಲ್ಲಿ ಕಾರ್ಯರೂಪಕ್ಕೆ ಇಳಿಸಲು ಸರ್ಕಾರ ಒತ್ತು ನೀಡಲಿದೆ ಎಂಬ ಸಚಿವ ಪಾಟೀಲರ ಹೇಳಿಕೆಗೆ ಇದು ಪೂರಕವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಪಾಟೀಲ ಅವರು, "ಕೈಗಾರಿಕಾ ಅಗತ್ಯಗಳಿಗೆ ಬೇಕಾಗುವ ಬಾಟ್ಲಿಂಗ್ ಮತ್ತು ಶುದ್ಧೀಕರಣ ಸಾಧನಗಳ ತಯಾರಿಕೆಗೆ ದೇಶದಲ್ಲಿ ಅಪಾರ ಬೇಡಿಕೆ ಇದೆ. ಇದನ್ನು ಮನಗಂಡು ಕ್ರೋನ್ಸ್, ರಾಜ್ಯದಲ್ಲಿ ಈ ಸ್ಥಾವರ ಆರಂಭಿಸಲು ಮುಂದಾಗಿದೆ. ಇದರಿಂದ ಬಂಡವಾಳ ಹೂಡಿಕೆಯ ಜತೆಗೆ ಸ್ಥಳೀಯರಿಗೆ ಉದ್ಯೋಗ ಸೃಷ್ಟಿಯೂ ಆಗಲಿದೆ. ವೇಮಗಲ್ ಕೈಗಾರಿಕಾ ಪ್ರದೇಶವು ಬೆಂಗಳೂರಿಗೆ ಕೂಡ ಹತ್ತಿರದಲ್ಲಿ ಇರುವುದರಿಂದ ಮತ್ತಷ್ಟು ಅನುಕೂಲವಾಗಲಿದೆ" ಎಂದರು.

ತಾವು ಮೂರು ತಿಂಗಳ ಹಿಂದೆ ಇತ್ತೀಚೆಗೆ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶಕ್ಕೆ ಪೂರ್ವಭಾವಿಯಾಗಿ ಜರ್ಮನಿಯಲ್ಲಿ ರೋಡ್–ಶೋ ನಡೆಸಿದಾಗ, ಅಲ್ಲಿ ಕ್ರೋನ್ಸ್ ಕಂಪನಿಯ ಕೇಂದ್ರ ಕಚೇರಿಗೆ ಭೇಟಿ ನೀಡಿ, ಪುಟ 2

## ಉದಯಗಿರಿ ಗಲಭೆ: ಮೌಲ್ವಿ ಬಂಧನ

**ಮೈಸೂರು:** ಮೈಸೂರಿನ ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣ ಸಂಬಂಧ ಗಲಾಟೆಗೆ ಪ್ರಚೋದನೆ ನೀಡಿದ್ದ ಆರೋಪದಲ್ಲಿ ಮೌಲ್ವಿ ಮುಫ್ತಿ ಮುಸ್ತಾಕ್ ನನ್ನು ಬಂಧಿಸಲಾಗಿದೆ.



ಸಿಸಿಬಿ ಪೊಲೀಸರು ಗುರುವಾರ ಮೌಲ್ವಿ ಮುಫ್ತಿಯನ್ನು ಬಂಧಿಸಿದ್ದಾರೆ. ಇದರೊಂದಿಗೆ, ಗಲಾಟೆ ನಡೆದು 11 ದಿನಗಳ ಬಳಿಕ ಆರೋಪಿ ಮೌಲ್ವಿಯನ್ನು ಬಂಧಿಸಿದಂತಾಗಿದೆ.

ಆರೋಪಿ ಮೌಲ್ವಿಯನ್ನು ಬಂಧಿಸುವ ವಿಚಾರದಲ್ಲಿ ಸಾರ್ವಜನಿಕರ ಹಾಗೂ ಪ್ರತಿಪಕ್ಷಗಳ ಒತ್ತಡ ಹೆಚ್ಚಾಗಿತ್ತು. ಇದೀಗ ಕೊನೆಗೂ ಆತನನ್ನು ಬಂಧಿಸುವಲ್ಲಿ ಸಿಸಿಬಿ ಪೊಲೀಸರು ಯಶಸ್ವಿಯಾಗಿದ್ದಾರೆ. ಕಲ್ಲು ತೂರಾಟ ಪ್ರಕರಣ ಸಂಬಂಧ ಆರೋಪಿಯನ್ನು ಬಂಧಿಸದೇ ಇರುವ ಸರ್ಕಾರದ ನಡೆಯನ್ನು ಖಂಡಿಸಿದ್ದ ಬಿಜೆಪಿ ನಾಯಕ ಪ್ರತಾಪ್ ಸಿಂಹ, ಸಿಎಂ ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಕಾಂಗ್ರೆಸ್ ಸರ್ಕಾರವನ್ನು ತಾಲಿಬಾನಿಗೆ ಹೋಲಿಸಿದ್ದರು. ಮುಸ್ಲಿಮರು ಭದ್ರತೆ ಕೇಳಿದರೆ ಸರ್ಕಾರ ನೀಡಲಿ, ಯಾರು ಬೇಡವೆನ್ನುತ್ತಾರೆ? ಅದರೆ ಅವರು ದುಷ್ಕೃತ್ಯ ಎಸಗಿದಾಗ ಬಂಧಿಸಿ ದಂಡಿಸುವುದನ್ನು ಬಿಟ್ಟು ಯಾವುದೇ ಕ್ರಮ ತೆಗೆದುಕೊಳ್ಳದಿದ್ದರೆ ಅವರನ್ನು ತಡೆಯುವುದು ಹೇಗೆ? ಅವರಿಗೆ ಹೆದರಿ ಹಿಂದೂಗಳು ಮನೆ ಬಿಟ್ಟು ಬೇರೆ ಕಡೆ ಹೋಗಬೇಕೇ ಎಂದು ಪ್ರತಾಪ್ ಸಿಂಹ ಪ್ರಶ್ನಿಸಿದ್ದರು. ಸಿಟಿ ರವಿ ಕೂಡ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು.

ಮೊದಲ ಪುಟದಿಂದ

## ದೆಹಲಿ ಗದ್ದುಗೆ ಏರಿದ ಬಿಜೆಪಿ

ಎರಡನೇ ಆದ್ಯತೆಯೆಂದರೆ ನಮ್ಮ ಎಲ್ಲಾ 48 ಶಾಸಕರು ಒಂದು ತಂಡವಾಗಿ ಕೆಲಸ ಮಾಡುವುದು. ನಾನು ದೆಹಲಿಯ ಮುಖ್ಯಮಂತ್ರಿಯಾಗುತ್ತೇನೆ ಎಂದು ನಾನು ಎಂದಿಗೂ ಭಾವಿಸಿರಲಿಲ್ಲ. ಹಿಂದಿನ ಭ್ರಷ್ಟ ಸರ್ಕಾರವು ಜನರಿಗೆ ಸೇರಿದ ಪ್ರತಿ ರೂಪಾಯಿಗೂ ಲೆಕ್ಕವನ್ನು ಇದೀಗ ನೀಡಬೇಕಾಗುತ್ತದೆ. ನಾನು ಪ್ರಧಾನಿ ಮೋದಿಯವರ ನಿರೀಕ್ಷೆಗಳಿಗೆ ತಕ್ಕಂತೆ ನಡೆಯುತ್ತೇನೆಂದು ತಿಳಿಸಿದ್ದಾರೆ.

ವಿತ್ತದಲ್ಲಿ, ಮಹಿಳೆಯರಿಗೆ ಮಾಸಿಕ 2,500 ರೂ. ಆರ್ಥಿಕ ನೆರವು ನೀಡುವ ಚುನಾವಣಾ ಭರವಸೆಯನ್ನು ಬಿಜೆಪಿ ಸರ್ಕಾರ ಈಡೇರಿಸಲಿದೆ ಎಂದೂ ಅವರು ಭರವಸೆ ನೀಡಿದರು. ಆರ್ಥಿಕ ನೆರವಿನ ಮೊದಲ ಕಂತನ್ನು ಮಾರ್ಚ್ 8 ರೊಳಗೆ ಮಹಿಳೆಯರ ಖಾತೆಗಳಿಗೆ ಜಮಾ ಮಾಡಲಾಗುವುದು ಎಂದು ತಿಳಿಸಿದರು.

ಪ್ರಧಾನಿ ಮೋದಿಯವರ ಕನಸನ್ನು ನನಸಾಗಿಸುವುದು ನಮ್ಮ ಎಲ್ಲಾ 48 ಬಿಜೆಪಿ ಶಾಸಕರ ಜವಾಬ್ದಾರಿಯಾಗಿದೆ. ಮಹಿಳೆಯರಿಗೆ ಆರ್ಥಿಕ ನೆರವು ಸೇರಿದಂತೆ ನಮ್ಮ ಎಲ್ಲಾ ಭರವಸೆಗಳನ್ನು ಖಂಡಿತವಾಗಿಯೂ ಈಡೇರಿಸುತ್ತೇವೆ. ಮಾರ್ಚ್ 8 ರೊಳಗೆ ಮಹಿಳೆಯರಿಗೆ ಅವರ ಖಾತೆಗಳಿಗೆ 100 ಪ್ರತಿಶತದಷ್ಟು ಆರ್ಥಿಕ ನೆರವು ನೀಡಲಾಗುವುದು ಎಂದು ಹೇಳಿದ್ದಾರೆ.

## ಸಿಎಂ ಆಗುವುದು ಖಚಿತ

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿ ಮುಂದುವರೆಯುತ್ತಾರೆ ಎಂದು ಕೆಲವರು ಹೇಳಿದರೆ, ಕೆಲವು ಕಾರ್ಯಕರ್ತರು ಮುಂದಿನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎಂದು ಹೇಳುತ್ತಿದ್ದಾರೆ. ಇದರ ಮಧ್ಯೆ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಅವರ ಈ ಹೇಳಿಕೆ ರಾಜಕೀಯದಲ್ಲಿ ಅಚ್ಚರಿ ಮೂಡಿಸಿದೆ. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಖಂಡಿತ ಮುಖ್ಯಮಂತ್ರಿ ಆಗೇ ಆಗುತ್ತಾರೆ. ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗಬೇಕಾದರೆ ಮುಖ್ಯಮಂತ್ರಿ ಸಿದ್ದರಾಮಯ್ಯರ ಬೆಂಬಲ ಬೇಕು. 10 ಶಾಸಕರನ್ನು ಇಟ್ಟುಕೊಂಡು ಯಾರು ಮುಖ್ಯಮಂತ್ರಿ ಆಗಲು ಸಾಧ್ಯವಿಲ್ಲ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡುತ್ತಾರೆ ಎಂದು ಕೇಳಿ ಜನರೂ ಸಾಕಾಗಿದೆ ಬಿಡಿ ಕಾಲ ಬಂದಾಗ ಎಲ್ಲವೂ ಬದಲಾಗಲಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

## ರಾಜಕೀಯ ದ್ವೇಷವಿಲ್ಲ

ಸರ್ವೆ ಮಾಡಿ ಎಂದು ಹೇಳಿರುವುದು ರಾಜಕೀಯವೇ ಎಂದು ಪ್ರಶ್ನಿಸಿದರು. ನಾವೆಲ್ಲರೂ ಸಂವಿಧಾನ, ನ್ಯಾಯಾಲಯದ ಮೇಲೆ ಭರವಸೆ ಇಟ್ಟುಕೊಂಡು ಕೆಲಸ ಮಾಡುತ್ತಿದ್ದೇವೆ. ಈ ಸರ್ವೆ ಸರ್ಕಾರ ಮಾಡಿದ್ದಲ್ಲ.ನ್ಯಾಯಾಲಯದ ಸೂಚನೆ ಯಂತೆ ಸರ್ವೆ ಮಾಡಲಾಗುತ್ತಿದೆ. ಆದರೆ, ಕುಮಾರಸ್ವಾಮಿ ಅವರು ಇದನ್ನೇ ರಾಜಕೀಯ ಪ್ರೇರಿತ ಎಂದು ಹೇಳುತ್ತಿರುವುದು ದುರಂತ ಎಂದು ಹೇಳಿದರು. ಪ್ರತಿಯೊಂದು ದಾಖಲೆ ಬಿಡುಗಡೆ ಮಾಡುವುದಾಗಿ ಹೇಳುತ್ತಲೇ ಇರುತ್ತಾರೆ. ಮೊದಲು ದಾಖಲೆ ಬಿಡುಗಡೆಮಾಡಲಿ ಎಂದು ಅವರು ಸವಾಲು ಹಾಕಿದರು.

## ಮೂವರ ದುರ್ಮರಣ

ಮೂವರು ಯುವಕರು ಉತ್ತರ ಪ್ರದೇಶ ಮೂಲದವರಾಗಿದ್ದಾರೆ ಎಂದು ರೈಲ್ವೆ ಪೊಲೀಸರು ಮಾಹಿತಿ ನೀಡಿದ್ದಾರೆ.ನಗರದ ಮುತ್ತೂರಿನಲ್ಲಿ ವಾಸವಾಗಿದ್ದ ಮೂವರು ಯುವಕರು ಕಾರ್ಪೆಂಟರ್ ಕೆಲಸ ಮಾಡುತ್ತಿದ್ದರು. ಕೊನ್ನಘಟ್ಟ ಗ್ರಾಮದಲ್ಲಿ ಕೆಲಸ ಮುಗಿಸಿದ ಮೂವರು ಸ್ನೇಹಿತರು ಜೊತೆಯಲ್ಲಿಯೇ ಆಟೋದಲ್ಲಿ ಬಂದು ಜಗದೀಶ್ ವೃತ್ತದಲ್ಲಿ ಇಳಿದಿದ್ದರು. ಅಲ್ಲಿಂದ ಮನೆಗೆ ರೈಲ್ವೆ ಹಳಿಯ ಮೇಲೆ ನಡೆದುಕೊಂಡು ಬರುತ್ತಿದ್ದರು. ಈ ವೇಳೆ ಆಯತಪ್ಪಿ ರೈಲು ಹಳಿಗಳ ಮೇಲೆ ಬಿದ್ದಾಗ ಪುಟ್ಟಪರ್ತಿ–ಬೆಂಗಳೂರು ರೈಲು ಯುವಕರ ಮೇಲೆ ಹರಿದಿದೆ ಎಂದು ತಿಳಿದುಬಂದಿದೆ. ರೈಲ್ವೆ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದು ಪರಿಶೀಲನೆ ನಡೆಸಿದ್ದಾರೆ. ಶವಗಳನ್ನು ಶವಗಾರಕ್ಕೆ ರವಾನೆ ಮಾಡಲಾಗಿದೆ.

## ಭಕ್ತರ ದುರ್ಮರಣ

ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಕಾರು ತೀವ್ರವಾಗಿ ಜಖಂಗೊಂಡಿದೆ. ಪೊಲೀಸರು ಸ್ಥಳಕ್ಕೆ ಧಾವಿಸಿದ್ದು, ಗಾಯಗೊಂಡ 6 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.ಈ ಅಪಘಾತದ ಸ್ವಲ್ಪ ಸಮಯದ ನಂತರ ಎರಡನೇ ಅಪಘಾತದಲ್ಲಿ ಯಾತ್ರಾರ್ಥಿಗಳಿಂದ ತುಂಬಿದ್ದ ಹರಿಯಾಣ ನಂಬರ್ ಪ್ಲೇಟ್‌ನ ಸ್ಲೀಪರ್ ಬಸ್ ಅಪಘಾತ ಸ್ಥಳದಿಂದ ಸ್ವಲ್ಪ ದೂರದಲ್ಲಿ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಭಕ್ತರು ಪ್ರಯಾಗರಾಜ್ ಮಹಾಕುಂಭದಲ್ಲಿ ಸ್ನಾನ ಮುಗಿಸಿ ವಾರಾಣಸಿಗೆ ತೆರಳಿ ಅಲ್ಲಿ ಬಾಬಾ ವಿಶ್ವನಾಥನ ದರ್ಶನ ಮುಗಿಸಿ ಎಲ್ಲರೂ ಅಯೋಧ್ಯೆಗೆ ಹೋಗುತ್ತಿದ್ದರು. ಇದರಲ್ಲಿಯೂ 4 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಸುಮಾರು 30 ಜನರು ಗಾಯಗೊಂಡಿದ್ದಾರೆ.
ಪೊಲೀಸರು ಸ್ಥಳಕ್ಕೆ ಧಾವಿಸಿ 30 ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲ ಭಕ್ತರು ದೆಹಲಿಯಿಂದ ಬಂದವರು ಎನ್ನಲಾಗಿದೆ. ಟ್ರಕ್ ಸರ್ಕಾರಿ ಪಡಿತರ ತುಂಬಿದ್ದು, ಬರೇಲಿಗೆ ಹೋಗುತ್ತಿತ್ತು. ಅಪಘಾತದ ನಂತರ ಡಿಎಂ ಮತ್ತು ಎಸ್ಪಿ ಆಸ್ಪತ್ರೆಗೆ ಆಗಮಿಸಿ ಗಾಯಾಳುಗಳ ಸ್ಥಿತಿಗತಿ ವಿಚಾರಿಸಿದ್ದಾರೆ.

## ವ್ಯಕ್ತಿಯ ಹತ್ಯೆ

ಇತರರ ವಿರುದ್ಧ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಆದರೆ ಈ ಘಟನೆ ರಾಜಕೀಯ ದ್ವೇಷದಿಂದ ನಡೆದಿದ್ದಲ್ಲ ಎಂದು ಪೊಲೀಸರು ಹೇಳಿದ್ದಾರೆ. ಭೂ ವಿವಾದದ ಹಿನ್ನೆಲೆಯಲ್ಲಿ 50 ರ ವಯಸ್ಸಿನ ಎನ್. ರಾಜಲಿಂಗಮೂರ್ತಿ ಅವರನ್ನು ಇಬ್ಬರು ಅಪರಿಚಿತ ವ್ಯಕ್ತಿಗಳು ಇರಿದು ಕೊಂದಿದ್ದಾರೆ. ಬುಧವಾರ ಸಂಜೆ 7.30 ರ ಸುಮಾರಿಗೆ ಪುಟ 2 ಮೋಟಾರ್ ಸೈಕಲ್‌ನಲ್ಲಿ ಹೋಗುತ್ತಿದ್ದ ರಾಜಲಿಂಗಮೂರ್ತಿ ಅವರನ್ನು ಅಡ್ಡಗಟ್ಟಿದ ಇಬ್ಬರು ವ್ಯಕ್ತಿಗಳು ಇರಿದು ಕೊಂದಿದ್ದಾರೆ. ಅವರನ್ನು ಆಸ್ಪತ್ರೆಗೆ ಸಾಗಿಸುವಾಗ ಮೃತಪಟ್ಟರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕರಣ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೇಡಿಗಡ್ಡ ಬ್ಯಾರೇಜ್‌ನ ಕೆಲವು ಪಿಲ್ಲರ್‌ಗಳು ಮುಳುಗಿದ ಬಳಿಕ ಕೆಸಿಆರ್ ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಕೋರಿ ರಾಜಲಿಂಗಮೂರ್ತಿ ಅವರು ಅಕ್ಟೋಬರ್ 2023 ರಲ್ಲಿ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದರು. ಕೆಸಿಆರ್ ಮತ್ತು ಅವರ ಸೋದರಳಿಯ ಮತ್ತು ಮಾಜಿ ಸಚಿವ ಟಿ ಹರೀಶ್ ರಾವ್ ನಂತರ ತೆಲಂಗಾಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದರು, ಕಳೆದ ವರ್ಷ ಡಿಸೆಂಬರ್‌ನಲ್ಲಿ ಜಯಶಂಕರ್ ಭೂಪಾಲಪಲ್ಲಿಯ ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರು ತಮ್ಮ ವಿರುದ್ಧ ಅರ್ಜಿ ಸಲ್ಲಿಸಲು ಅನುಮತಿ ನೀಡಿ ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ರದ್ದುಗೊಳಿಸಿತು.

## ರಾಜಕೀಯ ಅಜೆಂಡಾ ಇರಲಿಲ್ಲ

ಬಂದಿದ್ದೇನೆ. ಅವರನ್ನು ಹೊರತುಪಡಿಸಿ ಬೇರೆ ಯಾರನ್ನು ಸಹ ಭೇಟಿ ಮಾಡಿಲ್ಲ. ರಾಜಕೀಯದ ಅಜೆಂಡಾ ಇಟ್ಟುಕೊಂಡು ದೆಹಲಿಗೆ ಹೋಗಿರಲಿಲ್ಲ. ರಾಜಕೀಯ ವಿಚಾರದ ಬಗ್ಗೆ ಯಾವುದನ್ನು ಅವರೊಂದಿಗೆ ಮಾತನಾಡಿಲ್ಲ. ಜನ ಸಮುದಾಯಕ್ಕೆ ಗೊತ್ತಾಗುವಂತ ವಿಚಾರಗಳೇ ರಾಜಕೀಯ. ಮುಚ್ಚಿಡುವಂಥ ವಿಚಾರಗಳು ಏನು ಇಲ್ಲ ಎಂದರು.
ನಾನು ಒಂದು ವೇಳೆ ಅಜೆಂಡಾ ಇಟ್ಟುಕೊಂಡು ದೆಹಲಿಗೆ ಹೋಗಿದ್ದರೆ, ಆ ವಿಚಾರಗಳನ್ನು ನಿಮ್ಮೊಂದಿಗೆ ಹಂಚಿಕೊಳ್ಳುತ್ತಿದ್ದೆ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರ ಇರಬಹುದು ಅಥವಾ ಮುಖ್ಯಮಂತ್ರಿ ವಿಚಾರ ಇರಬಹುದು ಯಾವುದನ್ನು ಎಲ್ಲಿಯೂ ಮಾತನಾಡಿಲ್ಲ. ಇದು ನಿಮ್ಮ ಗಮನಕ್ಕೆ ಇರಲಿ. ಶೋಷಿತ ಸಮಾವೇಶದ ಬಗ್ಗೆಯೂ ಮಾತನಾಡಿಲ್ಲ. ಯಾವುದೇ ರಾಜಕೀಯ ವಿಚಾರಗಳನ್ನು ಮಾತನಾಡಿಲ್ಲ. ಆ ರೀತಿ ಅಜೆಂಡಾಗಳಿದ್ದರೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡುತ್ತಿದ್ದೆ ಎಂದು ಸ್ಪಷ್ಟೀಕರಣ ನೀಡಲು ಬಯಸುತ್ತೇನೆ ಎಂದು ಹೇಳಿದರು.
ಮುಡಾ ಕೇಸ್‌ನಲ್ಲಿ ಸಿಎಂ ಅವರಿಗೆ ಲೋಕಾಯುಕ್ತ ಕ್ಲೀನ್ ಚಿಟ್ ನೀಡಿರುವ ಬಗ್ಗೆ ಬಿಜೆಪಿ ಆರೋಪಗಳ ಕುರಿತು ಪ್ರತಿಕ್ರಿಯಿಸುತ್ತಾ, ಮುಡಾ ಪ್ರಕರಣವನ್ನು ಲೋಕಾಯುಕ್ತ ತನಿಖೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಸಿಬಿಐಗೆ ಕೊಡುವ ಅಗತ್ಯವಿಲ್ಲ. ಒಂದೇ ಪ್ರಕರಣವನ್ನು ಎರಡು ಸಂಸ್ಥೆಗಳು ತನಿಖೆ ಮಾಡುವುದು ಆಗಬಾರದು. ಇದು ಕಾನೂನಿಗೆ ವಿರುದ್ಧ ಎಂಬುದನ್ನು ಹೈಕೋರ್ಟ್ ಹೇಳಿದೆ. ಬಿಜೆಪಿಯವರು ಲೋಕಾಯುಕ್ತ ತನಿಖೆಯನ್ನೇ ಪ್ರಶ್ನಿಸುತ್ತಿದ್ದಾರೆ. ತನಿಖೆಯಲ್ಲಿ ಸಿಕ್ಕಿದ್ದ ಸಾಕ್ಷ್ಯಾಧಾರಗಳ ಮೇಲೆ ತೀರ್ಮಾನ ಮಾಡಿದ್ದಾರೆ. ಸಾಕ್ಷ್ಯ, ಪುರಾವೆಗಳಿಲ್ಲ ಎಂದ ಮೇಲೆ ತೀರ್ಪು ಕೊಟ್ಟಿದ್ದಾರೆ. ಲೋಕಾಯುಕ್ತ ತನಿಖೆಯನ್ನು ಪ್ರಶ್ನಿಸುವುದು ಎಷ್ಟರ ಮಟ್ಟಿಗೆ ಸರಿ ಎಂಬುದನ್ನು ಬಿಜೆಪಿಯವರು ಯೋಚಿಸಲಿ. ಬಿಜೆಪಿಯವರಿಗೆ ಪರವಾದ ತೀರ್ಪು ಬಂದಾಗ ತನಿಖಾ ಸಂಸ್ಥೆ ಸರಿ ಇರುತ್ತದೆ. ವಿರುದ್ಧವಾದ ತೀರ್ಪು ಬಂದಾಗ ಸರಿ ಇರುವುದಿಲ್ಲ. ಇದೆಂತ ರಾಜಕೀಯ ಎಂದು ಪ್ರಶ್ನಿಸಿದರು.

# ಬೆಂಗಳೂರು ಉತ್ತಮವಾಗಿರುವಂತೆ ಯೋಜನೆ ರೂಪಿಸಬೇಕು




**ಬೆಂಗಳೂರು:** "ಬೆಂಗಳೂರಿನ ರಸ್ತೆಗಳು ಭವಿಷ್ಯದಲ್ಲಿಯೂ ಉತ್ತಮವಾಗಿರಬೇಕು. ಆ ರೀತಿಯಾಗಿ ನಾವುಗಳು ಯೋಜನೆ ರೂಪಿಸಬೇಕು. ರಸ್ತೆ, ಪಾದಚಾರಿ ಮಾರ್ಗ, ಹಸಿರು ವಲಯ ಸೇರಿದಂತೆ ಎಲ್ಲಾ ಕಡೆಯೂ ಶಿಸ್ತು ಹಾಗೂ ಏಕರೂಪತೆ ಸಾಧಿಸಬೇಕು. ಇಲ್ಲದಿದ್ದರೇ ಬೆಂಗಳೂರಿಗೆ ನಾವುಗಳು ಮೋಸ ಮಾಡಿದಂತೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ "ನಮ್ಮ ರಸ್ತೆ – ವಿನ್ಯಾಸ ಕಾರ್ಯಾಗಾರ" ಉದ್ಘಾಟನೆ ಮತ್ತು ಸಂಚಾರ ಪ್ರಯೋಗಾಲಯಕ್ಕೆ ಚಾಲನೆ ಕಾರ್ಯಕ್ರಮದಲ್ಲಿ ಬುಧವಾರ ಮಾತನಾಡಿದರು.

"ಕೇವಲ ಎರಡು– ಮೂರು ವರ್ಷಗಳಲ್ಲಿ ಬೆಂಗಳೂರನ್ನು ಬದಲಾಯಿಸಲು ಆಗುವುದಿಲ್ಲ. ಮೇಲಿರುವ ಭಗವಂತ ಕೆಳಗೆ ಬಂದರೂ ಸಾಧ್ಯವಿಲ್ಲದ ಕೆಲಸ. ಆದರೆ ನಾವು ಯೋಜನೆಗಳ ರೂಪುರೇಷೆಗಳನ್ನು ಸರಿಯಾಗಿ ಮಾಡಿ, ಅನುಷ್ಠಾನಕ್ಕೆ ತಂದರೆ ಮಾತ್ರ ಇದು ಸಾಧ್ಯವಾಗುತ್ತದೆ. ರಕ್ಷಣೆ, ಗುಣಮಟ್ಟ ಮತ್ತು ಏಕರೂಪತೆ ಕಾಪಾಡುವುದು ನಮ್ಮ ಗುರಿ" ಎಂದು ಹೇಳಿದರು.

"ಈ ಕೈಪಿಡಿ ಮೂಲಕ ಅನೇಕ ಸಲಹೆ, ಸೂಚನೆಗಳನ್ನು ನಾವು ಪಡೆಯಬಹುದು. ರಸ್ತೆಬದಿ ಸಸಿಗಳನ್ನು ಎಲ್ಲಿ ನೆಡಬೇಕು, ಕಂಬಗಳು ಎಲ್ಲಿರಬೇಕು, ಮುಖ್ಯರಸ್ತೆ ಹೇಗಿರಬೇಕು, ವಾರ್ಡ್ ರಸ್ತೆಗಳು ಹೇಗಿರಬೇಕು, ಪಾದಚಾರಿ ಮಾರ್ಗಗಳನ್ನು ಹೇಗೆ ನಿರ್ಮಾಣ ಮಾಡಬೇಕು, ಜೊತೆಗೆ ರಸ್ತೆಯಲ್ಲಿ ಸಂಚಾರ ಮಾಡುವಾಗ, ನಡೆಯುವಾಗ ಹೇಗೆ ಶಿಸ್ತನ್ನು ಪಾಲಿಸಬೇಕು, ಬಸ್ ನಿಲ್ದಾಣಗಳ ವಿನ್ಯಾಸ, ಮೆಟ್ರೋ ಪಿಲ್ಲರ್ ಗಳು, ವೃತ್ತಗಳ ಸೌಂದರ್ಯೀಕರಣದ ಬಗ್ಗೆ ಹೊಸ ಆಲೋಚನೆಗಳನ್ನು ಇಲ್ಲಿ ನೋಡಬಹುದು" ಎಂದು ಹೇಳಿದರು. "ನಗರದ ಎಲ್ಲಾ ರಸ್ತೆಗಳ, ಪಾದಚಾರಿ ಮಾರ್ಗಗಳ ವಿನ್ಯಾಸ ಏಕರೂಪತೆಯಿಂದ ಕೂಡಿರಬೇಕು ಎನ್ನುವುದು ನಮ್ಮ ಉದ್ದೇಶ. ರಸ್ತೆ ಬದಿ ಕಂಬಗಳ ಬಣ್ಣವೂ ಸಹ ಮೊದಲೇ ನಿರ್ಧಾರ ಮಾಡಲಾಗುವುದು. ನಗರದ ಅನೇಕ ಕಡೆ ಬೇರೆ, ಬೇರೆ ವಿನ್ಯಾಸ ಬಸ್ ನಿಲ್ದಾಣಗಳಿವೆ ಅವುಗಳನ್ನು ಸಹ ಒಂದೇ ಮಾದರಿಯಲ್ಲಿ ನಿರ್ಮಾಣ ಮಾಡಬೇಕು. ಈ ಬಗ್ಗೆ ಈ ಕಾರ್ಯಾಗಾರದಲ್ಲಿ ಚರ್ಚೆ ಮಾಡಲಾಗುವುದು" ಎಂದರು.

**ಹೊರಗೆ ಇರುವ ಕೇಬಲ್ ವಯರ್ ಗಳನ್ನು ಕತ್ತರಿಸಲು ಸೂಚನೆ:** "ಹೊರಗಡೆ ಇರುವ ಎಲ್ಲಾ ಕೇಬಲ್ ವಯರ್ ಗಳನ್ನು ಕಿತ್ತು ಹಾಕಬೇಕು. ಇವುಗಳನ್ನು ಭೂಗತವಾಗಿ ಹಾಕುವಂತಹ ವ್ಯವಸ್ಥೆ ಮಾಡಬೇಕು ಎಂದು ಬಿಬಿಎಂಪಿಗೆ ಸೂಚನೆ ನೀಡಿದ್ದೇನೆ. ಇಷ್ಟು ದಿನ ಕಾದೆವು ಏನಾದರೂ ಬದಲಿ ವ್ಯವಸ್ಥೆ ಮಾಡಿಕೊಳ್ಳುತ್ತಾರೆ ಎಂದು, ಇದಾಗದ ಕಾರಣ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಎಲ್ಲಾ ಕೇಬಲ್ ಗಳನ್ನು ಕತ್ತರಿಸಿದರೆ ಅವರೇ ದಾರಿಗೆ ಬರುತ್ತಾರೆ" ಎಂದು ಹೇಳಿದರು.

"ಹೊಸ ಯೋಜನೆಗಳು, ಬೆಂಗಳೂರಿನ ರೂಪುರೇಷೆಗಳ ಬಗ್ಗೆ, ಪ್ರತಿ ನಾಗರೀಕನ ಆಸ್ತಿ ರಕ್ಷಣೆ ಕುರಿತು ಹೊಸ ನೀತಿಗಳನ್ನು ತರಲಾಗಿದ್ದು ಅದನ್ನು ಫೆಬ್ರವರಿ ತಿಂಗಳ ಕೊನೆಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಬಹಿರಂಗಗೊಳಿಸಲಾಗುವುದು" ಎಂದರು.

"ಸುರಂಗರಸ್ತೆಯ ನಿರ್ಮಾಣಕ್ಕೆ ಹಲವಾರು ಸವಾಲುಗಳಿವೆ. ಇನ್ನೂ ಟೆಂಡರ್ ಕರೆಯಲು ಸಾಧ್ಯವಾಗಿಲ್ಲ. ಏಕೆಂದರೆ ಭೂಮಿಯ ಸ್ವಾಧೀನ, ಹಣಕಾಸು, ತಾಂತ್ರಿಕ ಅಂಶಗಳಿವೆ. ನೂತನ ಮೆಟ್ರೋ ಮಾರ್ಗಗಳಲ್ಲಿ ಡಬಲ್ ಡೆಕ್ಕರ್ ಅನ್ನು ಕಾರ್ಯಗತಗೊಳಿಸಲಾಗಿದೆ. ಈ ಹಿಂದೆ ಮೆಟ್ರೋ ಮಾರ್ಗವಿರುವ ಕಡೆ ಡಬಲ್ ಡೆಕ್ಕರ್ ಸಾಧ್ಯವಾಗಿಲ್ಲ" ಎಂದರು. "ಬೆಂಗಳೂರಿನಲ್ಲಿ ಸುಮಾರು 1,700 ಕಿಮೀ ವಿಸ್ತೀರ್ಣಕ್ಕೆ ವೈಟ್ ಟಾಪಿಂಗ್ ಹಾಕಲಾಗುತ್ತಿದೆ. ಮುಂದಿನ 30 ವರ್ಷ ಇದು ಬಾಳಿಕೆ ಬರುತ್ತದೆ. ರಾಜಕಾಲುವೆ ಪಕ್ಕದಲ್ಲಿ ಹೊಸ ರಸ್ತೆಗಳ ನಿರ್ಮಾಣ. ಮೇಲ್ಸೇತುವೆ ಸೇರಿದಂತೆ ಅನೇಕ ನೂತನ ಯೋಜನೆಗಳು ಸರ್ಕಾರದ ಮುಂದಿವೆ" ಎಂದು ಹೇಳಿದರು.

"ಬಾಬಾ ಸಾಹೇಬರ ಸಂವಿಧಾನ ನಮ್ಮೆಲ್ಲರ ಬದುಕನ್ನು ರೂಪಿಸಿದೆ. ಅದೇ ರೀತಿ ಈ ನಮ್ಮರಸ್ತೆ ಎನ್ನುವ ಕೈಪಿಡಿ ಬೆಂಗಳೂರಿನ ಭವಿಷ್ಯ ಹೇಗಿರಬೇಕು ಎಂದು ದಾರಿ ತೋರಿಸಲಿದೆ. ನಾನು ಬೆಂಗಳೂರು ಅಭಿವೃದ್ಧಿ ಸಚಿವನಾಗಿ ಅಧಿಕಾರವಹಿಸಿಕೊಳ್ಳುವ ಮೊದಲು ಹಾಗೂ ನಂತರವೂ ಅನೇಕ ಸ್ಥಳಗಳಿಗೆ ಭೇಟಿ ನೀಡಿದಾಗ ಅಲ್ಲಿನ ರಸ್ತೆ, ಮೆಟ್ರೋ, ಸುರಂಗ ರಸ್ತೆಗಳ ಕುರಿತು ಕುತೂಹಲಕ್ಕೆ ತಿಳಿದುಕೊಳ್ಳುತ್ತಿದ್ದೆ" ಎಂದರು.

"ಅನೇಕ ಸಂಸ್ಥೆಗಳು ಈಗಾಗಲೇ ಹಲವಾರು ಸಲಹೆಗಳನ್ನು ನೀಡಿದ್ದಾರೆ. ಮೆಟ್ರೋ ಪಿಲ್ಲರ್ ಗಳ ಮೇಲೆ ನಮ್ಮ ಸಂಸ್ಕೃತಿ, ಕ್ರೀಡೆ, ಕಲೆಗಳನ್ನು ಬಿಂಬಿಸುವ ಕಲಾತ್ಮಕ ಕೃತಿಗಳನ್ನು ಚಿತ್ರಿಸುವ ಬಗ್ಗೆ ಸಲಹೆ ಬಂದಿದೆ. ಈಗಾಗಲೇ ಈ ಕೆಲಸವನ್ನು ಅನೇಕ ಕಡೆಗಳಲ್ಲಿ ಕಾರ್ಯಗತಗೊಳಿಸಲಾಗಿದೆ" ಎಂದು ಹೇಳಿದರು.

"ಅನೇಕ ಸಂಸ್ಥೆಗಳು, ವಿದ್ಯಾರ್ಥಿಗಳು, ಯುವ ಜನತೆ ನೀಡಿರುವ ಸಲಹೆ ಸೂಚನೆಗಳನ್ನು ಕಾಪಿಟ್ಟುಕೊಳ್ಳಲಾಗುವುದು. ವೆಬ್ ಸೈಟ್ ಅಲ್ಲಿಯೂ ಪ್ರದರ್ಶಿಸಲಾಗುವುದು. ನಾವು ಕೆಂಪೇಗೌಡರು, ಕೆಂಗಲ್ ಹನುಮಂತಯ್ಯ ಅವರು, ಎಸ್. ಎಂ.ಕೃಷ್ಣ ಅವರು ನೀಡಿರುವ ಕೊಡುಗೆಗಳನ್ನು ನಾವು ನೆನಪಿಸಿಕೊಳ್ಳುತ್ತೇವೆ" ಎಂದರು. "ಎಂಜಿನಿಯರ್ಗಳು, ರಾಜಕಾರಣಿಗಳು, ಸ್ಥಳೀಯ ಸಂಸ್ಥೆಯ ಪ್ರತಿನಿಧಿಗಳು ಇಂದು ಅಧಿಕಾರದಲ್ಲಿ ಇರುತ್ತಾರೆ, ನಾಳೆ ಹೋಗುತ್ತಾರೆ. ಅಧಿಕಾರ ಸಿಕ್ಕಾಗ ಅವರದೇ ರೀತಿಯಲ್ಲಿ ಕೆಲಸ ಮಾಡುತ್ತಾರೆ. ಯಾರೂ ಇಲ್ಲದೇ ಇದ್ದರೂ ನಮ್ಮರಸ್ತೆ ಎನ್ನುವ ಕೈಪಿಡಿ ಕೆಲಸ ಮಾಡಲು ಮಾರ್ಗದರ್ಶನ ನೀಡುತ್ತದೆ. ಕೈಪಿಡಿಯಲ್ಲಿ ಇರುವ ನಿಯಮಗಳ ಅನುಸಾರವೇ ಕೆಲಸ ಮಾಡಬೇಕು ಎಂದು ಸೂಚನೆ ನೀಡಲಾಗುತ್ತದೆ" ಎಂದರು.

"ಹೊಸ ಆಲೋಚನೆಯನ್ನು ನೀಡಲು ವಿದ್ಯಾರ್ಥಿಗಳು, ಯುವಕರು ಮುಂದೆ ಬಂದಿರುವುದು ಸಂತಸದ ವಿಚಾರ. ನಿಮ್ಮ ಭವಿಷ್ಯವನ್ನು ನೀವೇ ರೂಪಿಸಿಕೊಳ್ಳಲು ಈ ಕಾರ್ಯಕ್ರಮದಲ್ಲಿ ಸೇರಿದ್ದೀರಿ. ಯುವ ಸಮುದಾಯ ಸೇರಿ ಇಡೀ ಬೆಂಗಳೂರನ್ನು ವಿಶ್ವಮಟ್ಟಕ್ಕೆ ಏರಿಸಬೇಕು ಎನ್ನುವ ಆಲೋಚನೆಯಿಟ್ಟುಕೊಂಡು ಸಲಹೆಗಳನ್ನು ನೀಡಬೇಕು. ಎಲ್ಲರೂ ಒಟ್ಟಾಗಿ ಸೇರಿ ಬೆಂಗಳೂರನ್ನು ಸದೃಢಗೊಳಿಸೋಣ" ಎಂದು ಹೇಳಿದರು. ಬೆಂಗಳೂರಿನಲ್ಲಿ ಕನ್ನಡ ಮಾಯವಾಗಿದೆ ಎನ್ನುವ ಬಗ್ಗೆ ಕೇಳಿದಾಗ, "ಕನ್ನಡ ಮಾಯವಾಗಿಲ್ಲ. ನಾನೇ ಮೊದಲ ಬಾರಿಗೆ ಶೇ 60: 40 ಅನುಪಾತದಲ್ಲಿ ಕನ್ನಡ ಇಂಗ್ಲೀಷ್ ಇರಬೇಕು ಎಂದು ಸೂಚನೆ ನೀಡಿದ್ದೆ. ಈ ವಿಚಾರವಾಗಿ ಯಾರಾದರೂ ತಪ್ಪು ಮಾಡಿದ್ದರೆ ಕ್ರಮ ತೆಗೆದುಕೊಳ್ಳಲಾಗುವುದು. ಕನ್ನಡವೇ ನಮ್ಮ ಬದುಕು, ನಮ್ಮ ಉಸಿರು, ಕನ್ನಡವೇ ನನ್ನ ನುಡಿ, ನೀವು ಕನ್ನಡ, ನಾವೂ ಕನ್ನಡ" ಎಂದರು. ಬಿಬಿಎಂಪಿ ಹಾಳಗಲು ಮಾಧ್ಯಮದವರೇ ಕಾರಣ ಎನ್ನುವ ಮುಖ್ಯ ಎಂಜಿನಿಯರ್ ಅವರ ಆಕ್ಷೇಪಾರ್ಹ ಹೇಳಿಕೆ ಬಗ್ಗೆ ಕೇಳಿದಾಗ, "ಈ ವಿಚಾರದ ಬಗ್ಗೆ ನನಗೆ ಪತ್ರ ಬರೆದು ಕೊಡಿ ಕ್ರಮ ತೆಗೆದುಕೊಳ್ಳುತ್ತೇನೆ" ಎಂದು ಭರವಸೆ ನೀಡಿದರು.

# ಬಿಜೆಪಿಯ ವಿಜೇಂದ್ರ ಗುಪ್ತಾ ಈಗ ಸ್ಪೀಕರ್

**ದೆಹಲಿ:** ಕೇಂದ್ರಾಡಳಿತ ಪ್ರದೇಶವಾದ ದೆಹಲಿಯಲ್ಲಿ ಹೊಸ ಸರ್ಕಾರದ ಪ್ರಮಾಣವಚನ ಸ್ವೀಕಾರಕ್ಕೂ ಮುನ್ನ ಭಾರತೀಯ ಜನತಾ ಪಕ್ಷ (ಬಿಜೆಪಿ) ವಿಧಾನಸಭೆಯ ಸ್ಪೀಕರ್ ಮತ್ತು ಉಪ ಸ್ಪೀಕರ್ ಹೆಸರುಗಳನ್ನು ಘೋಷಿಸಿದೆ. ದೆಹಲಿ ಬಿಜೆಪಿ ಮಾಜಿ ಅಧ್ಯಕ್ಷ ವಿಜೇಂದ್ರ ಗುಪ್ತಾ ಅವರು ವಿಧಾನಸಭಾ ಸ್ಪೀಕರ್ ಆಗಲಿದ್ದಾರೆ. ಪಕ್ಷವು ಉಪಸಭಾಪತಿ ಹುದ್ದೆಗೆ ಮೋಹನ್ ಸಿಂಗ್ ಬಿಶ್ತ್ ಅವರ ಹೆಸರನ್ನು ಘೋಷಿಸಿದೆ. ಉತ್ತರಾಖಂಡ ಮೂಲದ ಮೋಹನ್ ಸಿಂಗ್ ಬಿಶ್ತ್ ಏಳು ಬಾರಿ ಶಾಸಕರಾಗಿದ್ದು, ಈ ಬಾರಿ ಅವರು ಬಿಜೆಪಿಗೆ ಕಷ್ಟಕರವೆಂದು ಪರಿಗಣಿಸಲಾದ ಮುಸ್ತಾಬಾದ್‌ನಂತಹ ವಿಧಾನಸಭಾ ಸ್ಥಾನದಿಂದ ಗೆದ್ದಿದ್ದಾರೆ.


ಆಮ್ ಆದ್ಮಿ ಪಕ್ಷದ 10 ವರ್ಷಗಳ ಆಳ್ವಿಕೆಯಲ್ಲಿ ಬಿಜೆಪಿಯ ಹಿರಿಯ ನಾಯಕ ವಿಜೇಂದ್ರ ಗುಪ್ತಾ ಅವರನ್ನು ವಿಧಾನಸಭೆಯಿಂದ ಹೊರಹಾಕಲಾಗಿತ್ತು. ಈಗ ಪರಿಸ್ಥಿತಿ ಬದಲಾಗಿದ್ದು, 27 ವರ್ಷಗಳಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದಿದ್ದು, ಗುಪ್ತಾ ಅವರನ್ನು ಸ್ಪೀಕರ್ ಆಗಿ ಆಯ್ಕೆ ಮಾಡಲಾಗಿದೆ. ಮಾಜಿ ಸ್ಪೀಕರ್ ಮತ್ತು ಅರವಿಂದ್ ಕೇಜ್ರಿವಾಲ್ ಇಬ್ಬರೂ ಈಗ ವಿಧಾನಸಭೆಯ ಭಾಗವಾಗಿಲ್ಲ. 2015 ಮತ್ತು 2020 ರಲ್ಲಿ ಕೇಜ್ರಿವಾಲ್ ಅಲೆಯ ನಡುವೆ ವಿಜೇಂದರ್ ಗುಪ್ತಾ ಗೆದ್ದಿದ್ದರು, ದೆಹಲಿಯಲ್ಲಿ ಎಎಪಿ ಭಾರಿ ಬಹುಮತದೊಂದಿಗೆ ಆಗ ಗೆಲುವು ಸಾಧಿಸಿತ್ತು. ವಿಧಾನಸಭೆಯಲ್ಲಿ ನಡೆದ ಗದ್ದಲದ ಸಮಯದಲ್ಲಿ ಗುಪ್ತಾ ಅವರನ್ನು ಸದನದಿಂ ಹೊರಹಾಕಲಾಗಿತ್ತು.

ವಿಜೇಂದರ್ ಗುಪ್ತಾ ರೋಹಿಣಿ ವಿಧಾನಸಭಾ ಕ್ಷೇತ್ರದಿಂದ ಮೂರು ಬಾರಿ ಶಾಸಕರಾಗಿದ್ದಾರೆ. ಇತ್ತೀಚಿನ ವಿಧಾನಸಭಾ ಚುನಾವಣೆಯಲ್ಲಿ, ವಿಜೇಂದ್ರ ಗುಪ್ತಾ ಅವರು ತಮ್ಮ ಪ್ರತಿಸ್ಪರ್ಧಿ ಆಮ್ ಆದ್ಮಿ ಪಕ್ಷದ ಪ್ರದೀಪ್ ಮಿತ್ತಲ್ ಅವರನ್ನು ಸುಮಾರು 38 ಸಾವಿರ ಮತಗಳ ಭಾರಿ ಅಂತರದಿಂದ ಸೋಲಿಸಿದರು. ಹಿಂದಿನ ದೆಹಲಿ ವಿಧಾನಸಭೆಯಲ್ಲಿ ವಿಜೇಂದರ್ ಗುಪ್ತಾ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿದ್ದರು. ಆಗಸ್ಟ್ 5, 2024 ರಂದು ವಿಜೇಂದ್ರ ಗುಪ್ತಾ ಅವರನ್ನು ಆಗಿನ ವಿರೋಧ ಪಕ್ಷ ಬಿಜೆಪಿಯ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಮಾಡಲಾಯಿತು. ಆಮ್ ಆದ್ಮಿ ಪಕ್ಷದ ಸರ್ಕಾರದ ಅವಧಿಯಲ್ಲಿ, ವಿಜೇಂದ್ರ ಗುಪ್ತಾ ಅವರನ್ನು ಮಾರ್ಷಲ್‌ಗಳನ್ನು ಕರೆಸಿ ಸಭೆಯಿಂದ ಹೊರಹಾಕಲಾಯಿತು.

ಅಧಿಕಾರ ಬದಲಾವಣೆಯ ನಂತರ, ಅದೇ ವಿಜೇಂದ್ರ ಗುಪ್ತಾ ಈಗ ವಿಧಾನಸಭೆಯ ಕಲಾಪಗಳನ್ನು ನಡೆಸುವ ಜವಾಬ್ದಾರಿಯನ್ನು ಹೊಂದಿರುತ್ತಾರೆ. ಮುಸ್ತಫಾಬಾದ್ ಶಾಸಕ ಮೋಹನ್ ಸಿಂಗ್ ಬಿಶ್ತ್ ದೆಹಲಿ ವಿಧಾನಸಭೆಯ ಉಪಸಭಾಪತಿಯಾಗಲಿದ್ದಾರೆ.

# 315 ಕೋಟಿ ಹೂಡಿಕೆ, 550 ಉದ್ಯೋಗ ಸೃಷ್ಟಿ

ಮೊದಲ ಪುಟದಿಂದ



ವ್ಯವಸ್ಥೆಯನ್ನು ವೀಕ್ಷಿಸಿದ್ದೆ. ಪ್ರಿಸಿಷನ್ ಎಂಜಿನಿಯರಿಂಗ್ ಮತ್ತು ನಾವೀನ್ಯತೆಗಳಿಗೆ ಹೆಸರು ಮಾಡಿರುವ ಕಂಪನಿಯು ಭಾರತದಲ್ಲಿನ ತನ್ನ ನೂತನ ಉತ್ಪಾದನಾ ಸ್ಥಾವರವನ್ನು ಆರಂಭಿಸುತ್ತಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಜರ್ಮನಿಯಲ್ಲಿ ಏನಿದೆಯೋ ಅವೆಲ್ಲವೂ ನಮ್ಮಲ್ಲೂ ಬರಬೇಕು. ಇದಕ್ಕಾಗಿ ಸರಕಾರವು ಎಲ್ಲ ಬೆಂಬಲವನ್ನೂ ಕೊಡಲು ಬದ್ಧವಾಗಿದೆ ಎಂದು ಹೇಳಿದ್ದೆ. ಆ ಪ್ರಕಾರ ಇವತ್ತು ಈ ಸಂಸ್ಥೆ ನಿರ್ಮಾಣಕ್ಕೆ ನಾಂದಿಯಾಗಿದೆ ಎಂದು ಅವರು ನುಡಿದಿದ್ದಾರೆ.
ಕಂಪನಿಯು ಹಂತ ಹಂತವಾಗಿ 315 ಕೋಟಿ ರೂಪಾಯಿ ಹೂಡಿಕೆ ಮಾಡಲಿದ್ದು, 550 ಮಂದಿಗೆ ಉದ್ಯೋಗ ಸಿಗಲಿದೆ. ನಿಮಿಷಕ್ಕೆ ನೂರಾರು ಬಾಟಲಿ ಉತ್ಪಾದಿಸುವ ಯಂತ್ರಗಳನ್ನು ಇಲ್ಲಿ ಉತ್ಪಾದಿಸಲಾಗುತ್ತದೆ ಎಂದು ಅವರು ಹೇಳಿದರು.
ಸ್ಥಳೀಯ ಹಾಗೂ ಭೂಮಿ ಕಳೆದುಕೊಂಡ ರೈತರ ಮಕ್ಕಳಿಗೆ ಉದ್ಯೋಗ ನೀಡಬೇಕೆಂದೂ ಸಚಿವರು ಕ್ರೋನ್ಸ್ ಪ್ರತಿನಿಧಿಗಳಲ್ಲಿ ಮನವಿ ಮಾಡಿದರು. ಇದನ್ನು ಆದ್ಯತೆ ಮೇಲೆ ಮಾಡಬೇಕು ಎಂದೂ ಅವರು ಕೋರಿದರು.
ವೇಮಗಲ್ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಕರ್ನಾಟಕವನ್ನು ಉತ್ಪಾದನಾ ವಲಯದಲ್ಲಿ ಯಾವ ರೀತಿ ಅಭಿವೃದ್ಧಿ ಮಾಡಬೇಕು ಎಂಬುದರ ಬಗ್ಗೆಯೂ ಸದ್ಯದಲ್ಲೇ ಪರಿಣಿತರ ಚರ್ಚೆ ಕೂಡ ಮಾಡಲಾಗುವುದು ಎಂದ ಅವರು, ಸಿಎಸ್ ಆರ್ ಹಣ ಕೂಡ ಸ್ಥಳೀಯರ ಅಭಿವೃದ್ಧಿಗೆ ಬಳಸುವಂತೆ ಸಚಿವರು ಸಂಬಂಧಪಟ್ಟ ಕಂಪೆನಿಯ ಅಧಿಕಾರಿಗಳಿಗೆ ಸೂಚಿಸಿದರು.
ನಮ್ಮಲ್ಲಿ ನೂತನ ಕೈಗಾರಿಕಾ ನೀತಿಯನ್ನು ಜಾರಿಗೆ ತರಲಾಗಿದ್ದು, ಉದ್ದಿಮೆಗಳಿಗೆ ಬಂಡವಾಳದ ಮೇಲೆ ಸಹಾಯಧನ ಅಥವಾ ಉತ್ಪಾದನೆಗೆ ತಕ್ಕ ಪ್ರೋತ್ಸಾಹನ ಭತ್ಯೆ ಎರಡರಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳುವ ಮುಕ್ತ ಅವಕಾಶ ಕೊಡಲಾಗಿದೆ. ಜೊತೆಗೆ ಅಗತ್ಯ ಅನುಮೋದನೆಗಳನ್ನು ತ್ವರಿತ ಗತಿಯಲ್ಲಿ ನೀಡಲು ಪರಿಷ್ಕೃತ ಏಕಗವಾಕ್ಷಿ ವ್ಯವಸ್ಥೆಯನ್ನೂ ತರಲಾಗಿದೆ. ಕ್ರೋನ್ಸ್ ಕಂಪನಿಯು ನಮ್ಮಲ್ಲಿ ಮುಂಬರುವ ದಿನಗಳಲ್ಲಿ ಅಪಾರ ಹೂಡಿಕೆ ಮಾಡುವ ನಿರೀಕ್ಷೆ ಇದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.
ಕ್ರೋನ್ಸ್ ಕಂಪನಿಯು ಆಹಾರ ಮತ್ತು ಪಾನೀಯ ಕ್ಷೇತ್ರಗಳಲ್ಲಿ ಕಳೆದ 23 ವರ್ಷಗಳಿಂದಲೂ ಭಾರತದಲ್ಲಿ ನಲೆ ಹೊಂದಿದೆ. ಕಂಪನಿಯ ಡಿಜಿಟಲ್ ವಿಭಾಗದ ಕೇಂದ್ರ ಕಚೇರಿಯು ಬೆಂಗಳೂರಿನಲ್ಲೇ ಇದೆ. ಇದು ಕಂಪನಿಯ ಸಾಫ್ಟ್ವೇರ್ ಅಭಿವೃದ್ಧಿ, ಐಟಿ ಭದ್ರತೆ ಮತ್ತು ಡಿಜಿಟಲ್ ಪರಿಹಾರಗಳಿಗೆ ಬಲ ತುಂಬಿದೆ. ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಅಸ್ತಿತ್ವಕ್ಕೆ ಬರಲಿರುವ ಉತ್ಪಾದನಾ ಘಟಕವು ಭಾರತದಲ್ಲಿ ಕಂಪನಿಯ ಸ್ಥಾನಮಾನಗಳನ್ನು ಮತ್ತಷ್ಟು ಬಲಪಡಿಸಿ, ರಾಜ್ಯದ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡಲಿದೆ ಎಂದು ಅವರು ತಿಳಿಸಿದ್ದಾರೆ.
ಕಾರ್ಯಕ್ರಮದಲ್ಲಿ ಕ್ರೋನ್ಸ್ ಆಡಳಿತ ಮಂಡಳಿ ನಿರ್ದೇಶಕರಾದ ರೊಲ್ಫ್ ಗೋಲ್ಡ್ ಬ್ರೋನರ್, ಮಾರ್ಕಸ್ ವಿಂಟರ್, ಯೋಜನಾ ನಿರ್ದೇಶಕ ಡೇವಿಡ್ ಕ್ರಿಮ್ಮರ್, ಕ್ರೋನ್ಸ್ ಇಂಡಿಯಾ ವ್ಯವಸ್ಥಾಪಕ ನಿರ್ದೇಶಕ ಹರೀಶ ಹನುಗೋಡು, ವಿಧಾನ ಪರಿಷತ್ ಮಾಜಿ ಸಭಾಪತಿ ವಿ.ಆರ್.ಸುದರ್ಶನ, ಕೆಐಎಡಿಬಿ ಸಿಇಒ ಡಾ.ಮಹೇಶ ಮುಂತಾದವರು ಉಪಸ್ಥಿತರಿದ್ದರು.

# ಧ್ವನಿಯಾಗಿ ಬಿಜೆಪಿ ಹೋರಾಟ



ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರದ ಮುಖಂಡರು ಅಹಿಂದ ಉದ್ಧಾರಕರೆಂದು ಭಾಷಣ ಬಿಗಿಯುತ್ತಾರೆ. ಇಂಥ ಕಾಂಗ್ರೆಸ್ ಸರಕಾರವು ಪರಿಶಿಷ್ಟ ಜಾತಿ, ಪಂಗಡಗಳಿಗೆ ಯಾವ ರೀತಿ ಅನ್ಯಾಯ ಮಾಡುತ್ತಿದೆ ಎಂಬುದನ್ನು ನಾವು ಚಿಂತಿಸಬೇಕಿದೆ ಎಂದು ತಿಳಿಸಿದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸವಲತ್ತು ತಲುಪಬೇಕೆಂಬ ಧ್ಯೇಯೋದ್ದೇಶದ ಅಂತ್ಯೋದಯದ ಪರಿಕಲ್ಪನೆಯ ಪಕ್ಷ ನಮ್ಮದು ಎಂದು ಗಮನ ಸೆಳೆದರು.

ಸಿದ್ದರಾಮಯ್ಯನವರು ಎಸ್‌ಸಿಪಿ–ಟಿಎಸ್‌ಪಿ ಯೋಜನೆಗೆ ಕಳೆದ ಹಣಕಾಸು ವರ್ಷದಲ್ಲಿ 39,914 ಕೋಟಿ ರೂ. ಘೋಷಿಸಿದ್ದರು. ಆದರೆ, 23,485 ಕೋಟಿ ಮಾತ್ರ ಬಿಡುಗಡೆ ಮಾಡಿದ್ದಾರೆ ಎಂದು ದೂರಿದರು. ಅದರಲ್ಲಿ 20,404 ಕೋಟಿ ಮಾತ್ರ ವೆಚ್ಚವಾಗಿದೆ ಎಂದು ವಿವರಿಸಿದರು. ಬಿಜೆಪಿ, ಕಳೆದ ವರ್ಷಗಳಲ್ಲಿ ಅನೇಕ ಹೋರಾಟಗಳನ್ನು ಮಾಡಿದೆ. ಭಂಡ ಸರಕಾರ ಪರಿಶಿಷ್ಟ ಸಮುದಾಯಗಳ ಹಣವನ್ನು ಬೇರೆ ಕಡೆ ಬಳಸಿದೆ. ಶೀಘ್ರವೇ ಮುಖ್ಯಮಂತ್ರಿಗಳು ಮತ್ತೊಂದು ಬಜೆಟ್ ಮಂಡಿಸಲಿದ್ದಾರೆ. ನಾವು ಕೈಕಟ್ಟಿ ಕುಳಿತರೆ ಸಿದ್ದರಾಮಯ್ಯನವರು ಪರಿಶಿಷ್ಟ ಜಾತಿ, ಪಂಗಡದ ಹಣವನ್ನು ಬೇರೆ ಕಡೆಗೆ ಬಳಸಿಕೊಳ್ಳುತ್ತಾರೆ ಎಂದು ನುಡಿದರು.

ರಾಜ್ಯದ ಇಂಧನ ಸಚಿವರು ನೀಡಿದ ಹೇಳಿಕೆಯತ್ತ ಗಮನ ಸೆಳೆದ ಅವರು, ಪಿಡಬ್ಲ್ಯುಡಿ, ನೀರಾವರಿ ಸೇರಿ ವಿವಿಧ ಇಲಾಖೆಗಳು 6 ಸಾವಿರ ಕೋಟಿ ಬಿಡಗಳು ಬಾಕಿ ಇಟ್ಟುಕೊಂಡಿವೆ ಎಂದು ಹೇಳಿದ್ದಾಗಿ ವಿವರಿಸಿದರು. ಇದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅನುಭವದ ಕೊರತೆಯೇ? ಅಥವಾ ಗ್ಯಾರಂಟಿ ಅನುಷ್ಠಾನದ ನಿಟ್ಟಿನಲ್ಲಿ ಅಸಹಾಯಕರಾಗಿ ಸಿದ್ದರಾಮಯ್ಯ ಇವತ್ತು ಕರ್ನಾಟಕವನ್ನು ದುಸ್ಥಿತಿಗೆ ತಳ್ಳುತ್ತಿದ್ದಾರಾ ಎಂದು ನಾವು ಗಂಭೀರವಾಗಿ ಯೋಚಿಸಬೇಕಿದೆ ಎಂದು ತಿಳಿಸಿದರು. ಕರ್ನಾಟಕವು ಸಂಪೂರ್ಣ ದಿವಾಳಿ ಆಗುವ ಕಡೆ ಮುನ್ನಡೆದಿದೆ ಎಂದು ಆರೋಪಿಸಿದ ಅವರು, ಸರಕಾರಿ ನೌಕರರಿಗೆ ವೇತನ ಕೊಡಲು ಸರಕಾರದ ಬಳಿ ಹಣ ಇಲ್ಲ; ಕೆಎಸ್‌ಆರ್‌ಟಿಸಿಗೆ 7 ಸಾವಿರ ಕೋಟಿ ಬಾಕಿ ಇದೆ. ವಿದ್ಯುತ್ ಬಿಲ್ ಕಟ್ಟಲಾಗದ ಸ್ಥಿತಿ ಇದೆ ಎಂದು ತಿಳಿಸಿದರು. ರಾಜ್ಯದ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಲು ಆಗ್ರಹಿಸಿದ್ದೇನೆ ಎಂದು ಹೇಳಿದರು.

ಚುನಾವಣೆ ಬಂದಾಗಲೆಲ್ಲ ಕಾಂಗ್ರೆಸ್ಸಿಗರು ಡಾ. ಬಾಬಾಸಾಹೇಬ ಅಂಬೇಡ್ಕರರ ಬಗ್ಗೆ ಉದ್ದುದ್ದ ಭಾಷಣ ಮಾಡುತ್ತಾರೆ ಎಂದು ಟೀಕಿಸಿದರು. ಪ್ರಣಾಳಿಕೆಯಲ್ಲಿ ತಿಳಿಸಿದ ಎಲ್ಲ ವಿಷಯಗಳನ್ನು ಅನುಷ್ಠಾನಕ್ಕೆ ತಂದಂತೆ ಈ ಸರಕಾರ ತನ್ನನ್ನು ಬಿಂಬಿಸಿಕೊಳ್ಳುತ್ತಿದೆ. ನುಡಿದಂತೆ ನಡೆದ ಸರಕಾರ ಎಂದು ತಮ್ಮ ಬೆನ್ನನ್ನು ತಾನೇ ತಟ್ಟಿಕೊಳ್ಳುತ್ತಾರೆ. ಇನ್ನೊಂದೆಡೆ ಕಾಂಗ್ರೆಸ್ ಆಡಳಿತದಲ್ಲಿ ರೈತರು, ಬಡವರು, ಯುವಜನತೆಗೆ ಸೇರಿ ರಾಜ್ಯಕ್ಕೆ ಅನ್ಯಾಯವಾಗುತ್ತಿದೆ ಎಂದು ಆಕ್ಷೇಪಿಸಿದರು.

ಶೋಷಿತ ಸಮುದಾಯಗಳಾದ ರಾಜ್ಯದ ಪರಿಶಿಷ್ಟ ಜಾತಿ, ಪಂಗಡಗಳನ್ನು ಒಳಗೊಂಡ ಸಮುದಾಯಗಳನ್ನು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ರಾಜ್ಯ ಸರಕಾರ ಮೇಲೆತ್ತಬೇಕಿತ್ತು. ಅಧಿಕಾರಕ್ಕೆ ಬಂದಾಗಲೆಲ್ಲ ಡಾ.ಅಂಬೇಡ್ಕರರ ಜಪ ಮಾಡುವ ಕಾಂಗ್ರೆಸ್ಸಿಗರು, ಶೋಷಿತ ಸಮುದಾಯಗಳಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಈ ಕಾರ್ಯಾಗಾರದಲ್ಲಿ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕ ಅರವಿಂದ ಬೆಲ್ಲದ, ಮಾಜಿ ಸಚಿವರಾದ ಸಿ.ಸಿ.ಪಾಟೀಲ್, ಎನ್. ಮಹೇಶ್, ಎಸ್‌ಸಿ ಮೋರ್ಚಾ ರಾಜ್ಯದ ಅಧ್ಯಕ್ಷ ಸಿಮೆಂಟ್ ಮಂಜು, ಎಸ್‌ಟಿ ಮೋರ್ಚಾ ರಾಜ್ಯದ ಅಧ್ಯಕ್ಷ ಬಂಗಾರು ಹನುಮಂತು, ಶಾಸಕರಾದ ಮಾನಪ್ಪ ವಜ್ಜಲ್, ದುರ್ಯೋಧನ ಐಹೊಳೆ, ಚಂದ್ರು ಲಮಾಣಿ, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಶಾಸಕರು ಭಾಗವಹಿಸಿದ್ದರು.

# ಕುತಂತ್ರ ನಡೆಯಲ್ಲ

ನೀಡಿದ್ದಾರೆ. ಯಾವುದೇ ಪ್ರಕರಣ ದಾಖಲಿಸುವಾಗ ಅದಕ್ಕೆ ಪೂರಕವಾದ ದಾಖಲೆ ಬೇಕು. ಲೋಕಾಯುಕ್ತ ಸಂಸ್ಥೆ ತನ್ನ ಕರ್ತವ್ಯ ಮಾಡಿದೆ. ಬಿಜೆಪಿಯವರು ತಮ್ಮ ಹೋರಾಟ ಮಾಡಿಕೊಳ್ಳಲಿ. ದೆಹಲಿಯಿಂದ ವಕೀಲರನ್ನು ಕರೆಸಿ ವಾದ ಮಂಡಿಸಲು ನಮಗೆ ಗೊತ್ತಿಲ್ಲವೇ? ಇದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕುತಂತ್ರ. ಇದು ಹೆಚ್ಚು ದಿನ ನಡೆಯುವುದಿಲ್ಲ" ಎಂದು ತಿಳಿಸಿದರು.
ಲೋಕಾಯುಕ್ತ ಸಂಸ್ಥೆ ಸರ್ಕಾರದ ತಾಳಕ್ಕೆ ಕುಣಿದಿದೆ ಎಂಬ ಬಿಜೆಪಿ ಆರೋಪದ ಬಗ್ಗೆ ಕೇಳಿದಾಗ, "ಸುಪ್ರೀಂ ಕೋರ್ಟ್ ತೀರ್ಪು ಏನಿದೆ ಗೊತ್ತಿದೆಯೇ? ಸ್ಥಳೀಯ ಮಟ್ಟದ ಯಾವುದೇ ಸಂಸ್ಥೆಗಳನ್ನು ದುರ್ಬಲಗೊಳಿಸಬಾರದು ಎಂಬ ನಿರ್ದೇಶನವಿದೆ. ಇನ್ನು ಹೈಕೋರ್ಟ್ ಕೂಡ ಲೋಕಾಯುಕ್ತ ಸ್ವಾಯತ್ತ ಸಂಸ್ಥೆ ಎಂದು ಹೇಳಿದೆ.
ಅವರವರು ಅವರ ಕೆಲಸ ಮಾಡುತ್ತಿದ್ದಾರೆ. ಯಾರೇ ಸಿಎಂ ಆಗಿರಲಿ, ಬೊಮ್ಮಾಯಿ ಸಿಎಂ ಆಗಿರಲಿ, ಮುಖ್ಯಮಂತ್ರಿ ಹೇಳಿದಂತೆ ಲೋಕಾಯುಕ್ತ ಪೊಲೀಸರು ಕೇಳುತ್ತಾರಾ? ಇಲ್ಲಿ ಮುಖ್ಯಮಂತ್ರಿ ಹಸ್ತಕ್ಷೇಪವಿಲ್ಲ. ಇಲ್ಲಿ ಯಾವುದೇ ಅಧಿಕಾರಿ ನೇಮಿಸಬೇಕಾದರೂ ಲೋಕಾಯುಕ್ತರ ಅನುಮತಿ ಮೇರೆಗೆ ಕೆಲಸ ಮಾಡಲಾಗುವುದು. ಇಲ್ಲಿ ಕರ್ನಾಟಕದ ಅಧಿಕಾರಿಗಳನ್ನು ಆಯ್ಕೆ ಮಾಡಲಾಗುವುದೇ ಹೊರತು, ಹೊರ ರಾಜ್ಯದವರನ್ನು ಆಯ್ಕೆ ಮಾಡಲು ಬರುವುದಿಲ್ಲ" ಎಂದು ತಿಳಿಸಿದರು. ಸರ್ಕಾರದ ಬೊಕ್ಕಸದಲ್ಲಿ ಹಣವಿಲ್ಲ ಎಂಬ ವಿಜಯೇಂದ್ರ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅವರಿಗೆ ಬೇರೆ ಸಮಯದಲ್ಲಿ ಉತ್ತರ ನೀಡುತ್ತೇನೆ" ಎಂದರು.

# ಸಮಾಜ ಸೇವೆಯಲ್ಲಿ ಮಠಮಾನ್ಯಗಳ ಶೈಕ್ಷಣಿಕ ಪ್ರಗತಿಯ ದಾಪುಗಾಲು

**ನಾಗಮಂಗಲ:** ಧರ್ಮ ವಿಜ್ಞಾನ ಆಧ್ಯಾತ್ಮದ ಅವಿನಾಭಾವತೆಯು ವಿಶ್ವದ ಅನೇಕ ಆವಿಷ್ಕಾರಗಳಿಗೆ ನಾಂದಿಯಾಗಿದೆ. ಮನುಷ್ಯನನ್ನು ಎತ್ತರಕ್ಕೆ ಕೊಂಡೊಯ್ಯುವ ಸಾಧನಗಳಾದ ಸದ್ಗುಣ–ಸಂಸ್ಕಾರಗಳು ಶಿಕ್ಷಣದ ಗುರಿಯಾಗಬೇಕು ಎಂದು ತುಮಕೂರು ಸಿದ್ದಗಂಗಾ ಮಠದ ಪೀಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಮಹಾ ಸ್ವಾಮೀಜಿಗಳು ಅಭಿಪ್ರಾಯಪಟ್ಟರು. ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದಲ್ಲಿ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಯವರ 12ನೇ ವಾರ್ಷಿಕ ಪಟ್ಟಾಭಿಷೇಕದ ಅಂಗವಾಗಿ ಏರ್ಪಡಿಸಿದ್ದ "ರಾಜ್ಯ ಮಟ್ಟದ ವಿಜ್ಞಾತಂ ಉತ್ಸವ" ಮತ್ತು ಬೃಹತ್ ವಸ್ತು ಪ್ರದರ್ಶನ ಉದ್ಘಾಟನಾ ಸಮಾರಂಭದ ದಿವ್ಯ ಉಪಸ್ಥಿತಿ ವಹಿಸಿ ಮಾತನಾಡಿದರು.

ಸಮಾಜ ಸೇವೆಯಲ್ಲಿ ತೊಡಗಿರುವ ಮಠ ಮಾನ್ಯಗಳು ಒಂದೆಡೆಯಾದರೆ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆಯನ್ನು ನೀಡಿ ಶಿಕ್ಷಣ ಕ್ರಾಂತಿಯನ್ನೇ ಮಾಡಿದ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠವು ದೇಶದ ಮಾದರಿ ಸಂಸ್ಥಾನವಾಗಿದೆ. ಮಹಾ ದಾರ್ಶನಿಕ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರ ಸಂಕಲ್ಪಶಕ್ತಿಯ ಫಲವಾಗಿ ಇಂದು ಶ್ರೀಮಠ ವಿಶ್ವಮಟ್ಟದಲ್ಲಿ ಬೆಳೆದು ನಿಂತಿದೆ. ನಾಡಿನ ಸಮಸ್ತ ವಿದ್ಯಾರ್ಥಿಗಳಿಗೆ ವಿಜ್ಞಾನದ ಆಕರ್ಷಣೆಯನ್ನು ಹೆಚ್ಚಿಸಲು ಆ ಮೂಲಕ ಜ್ಞಾನವಂತರನ್ನಾಗಿಸಲು ಇಂತಹ ವಿಜ್ಞಾತಂ ಉತ್ಸವ ಹಾಗೂ ಈ ಮಹಾ ವಸ್ತು ಪ್ರದರ್ಶನದ ಏರ್ಪಾಟು ನಿಜಕ್ಕೂ ಅರ್ಥಪೂರ್ಣ ಹಾಗೂ ಶ್ಲಾಘನೀಯವಾಗಿದೆ.


ಇಲ್ಲಿ ಸೇರಿರುವ ಅಪಾರಸಂಖ್ಯೆಯ ವಿದ್ವಜ್ಜನರು, ಪ್ರಾಧ್ಯಾಪಕರು, ವಿಜ್ಞಾನಿಗಳು, ಸಾಧಕರು ಸಾಕ್ಷೀಕರಿಸಿದ್ದಾರೆ. ಗುರುಗಳ ಮಾರ್ಗದರ್ಶನದಲ್ಲಿ ಬೆಳೆಯುತ್ತಿರುವ ಯುವ ಸಮುದಾಯವೇ ವಿದ್ಯಾರ್ಥಿಗಳೇ ಇಂತಹ ಸಂದರ್ಭವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಸಾಧಕರಾಗಿ ಎಂದು ಆಶೀರ್ವದಿಸಿದರು.

ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸಿದ ಭಾರತೀಯ ವಿಜ್ಞಾನ ಸಂಸ್ಥೆಯ ಪ್ರಖ್ಯಾತ ವಿಜ್ಞಾನಿ ಡಾ. ಗೌತಮ್ ರಾಧಾಕೃಷ್ಣ ದೇಸಿರಾಜು ಮಾತನಾಡಿ ಧರ್ಮ ಮತ್ತು ವಿಜ್ಞಾನ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಭೂಮಿ ಸೂರ್ಯನನ್ನು ಸುತ್ತಿದರೆ ಚಂದ್ರ ಭೂಮಿಯನ್ನು ಸುತ್ತುತ್ತದೆ. ಇದು ನೈಸರ್ಗಿಕ ವಿಸ್ಮಯವಾದರೂ ಇಲ್ಲಿ ಧರ್ಮವಿದೆ ವಿಶಿಷ್ಟ ಸಂಬಂಧವೂ ಇದೆ. ಪೂರ್ಣಚಂದ್ರನಿಂದ ಪೌರ್ಣಮಿಯಾಗುವುದು, ಅರ್ಧಚಂದ್ರದ ನಿಯಾಮಕವನ್ನು ಕುರಿತು ಲಲಿತ ಭಾರತೀಯ ಸಂಸ್ಕೃತಿಯಾದ ಸಹಸ್ರನಾಮದ ಮಹತ್ವ, ಸಪ್ತಮಿ ಮತ್ತು ಅಷ್ಟಮಿ ಚಂದ್ರ ಶಾಂತಿಯ ಸಾಗರ ಎಂದು ಬಣ್ಣಿಸಿ, ವಿಜ್ಞಾನವು ಹೇಗೆ ನೋಡುತ್ತದೆ ಎಂಬುದನ್ನು ಸಂಸ್ಕೃತ ಶ್ಲೋಕದ ಮೂಲಕ ತಿಳಿಸಿದರು. ರಾಜಕೀಯ ಕೇವಲ ಸಾಮಾಜಿಕವಲ್ಲದೆ ವೈಜ್ಞಾನಿಕವಾಗಿ ಹೇಗೆ ರೂಪಗೊಳ್ಳುತ್ತದೆ ಎಂಬುದನ್ನು ವಿಸ್ತಾರವಾಗಿ ತಿಳಿಸಿಕೊಟ್ಟರು.

ಇವರು ಬರೆದ ಮತದಾರನ ಹಕ್ಕು ಮತ್ತು ಜವಾಬ್ದಾರಿಗಳನ್ನು ಕುರಿತ ಮೇರು ಕೃತಿ ಡೀ ಲಿಮಿಟೇಶನ್ಸ್ ಎಂಬ ಕೃತಿಯನ್ನು ಈ ಸಂದರ್ಭದಲ್ಲಿ ಲೋಕಾರ್ಪಣ ಗೊಳಿಸಿದರು.

ವಿಜ್ಞಾತಂ ಸಂಚಯ ಕೃತಿಯನ್ನು ಲೋಕಾರ್ಪಣೆಗೊಳಿಸಿದ ಕೃಷಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಮಾತನಾಡಿ ಆದಿಚುಂಚನಗಿರಿ, ಸುತ್ತೂರು ಹಾಗೂ ಸಿದ್ದಗಂಗಾ ಮಠಗಳು ಶಿವನ ಮೂರು ಕಣ್ಣುಗಳಿದ್ದಂತೆ ಮಹಾ ಶ್ರೇಷ್ಠ ಸಂಸ್ಥಾನಗಳು ಎಂದು ಬಣ್ಣಿಸುತ್ತ ತಮ್ಮ ಪ್ರೌಢಶಿಕ್ಷಣ ಸಿದ್ದಗಂಗಾ ಮಠದಲ್ಲಿ ಶ್ರೀ ಶಿವಕುಮಾರ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ನಡೆಯಿತು, ನಂತರದಲ್ಲಿ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿಗಳ ಮಾರ್ಗದರ್ಶನದಲ್ಲಿ ಬೆಳೆದ ದಿನಗಳನ್ನು ಸ್ಮರಿಸಿಕೊಂಡರು. ಶ್ರೀ ಮಠವು ಆಧ್ಯಾತ್ಮಕ್ಕೇ ಸೀಮಿತವಾಗದೆ ಶಿಕ್ಷಣ ಆರೋಗ್ಯ ಅರಣ್ಯ ವಿಜ್ಞಾನ ತಂತ್ರಜ್ಞಾನ ಹೀಗೆ ಅನೇಕ ಕ್ಷೇತ್ರಗಳನ್ನು ಪೋಷಿಸಿ ಮುನ್ನಡೆಸುತ್ತಾ ಸಾಗಿದೆ. ಭಾರತ ದೇಶ ಜ್ಞಾನ ಮತ್ತು ಮಾನವ ಸಂಪನ್ಮೂಲತೆಯ ಸಂಪತ್ಭರಿತ ದೇಶ ಎಂಬುದನ್ನು ಅನೇಕ ಸಂದರ್ಭಗಳಲ್ಲಿ ವಿಶ್ವ ಮಟ್ಟದಲ್ಲಿ ಸಾಬೀತುಗೊಳಿಸುತ್ತಿದೆ. ಇಂಥ ಮಹನೀಯರ ಸಾಲಿಗೆ ಇಂದಿನ ಯುವ ಪೀಳಿಗೆಯ ಸಾಗಿ ದೇಶದ ಭವಿಷ್ಯವನ್ನು ಉಜ್ವಲ ಗೊಳಿಸಿ ಎಂದರು. ಶ್ರೀ ಮಠವು ಇಷ್ಟೆಲ್ಲ ಸಾಧನೆಯ ಜೊತೆಗೆ ಕೃಷಿ ಕಾಲೇಜು ಸ್ಥಾಪಿಸಿ ಕೃಷಿ ಕ್ರಾಂತಿಯನ್ನು ಮಾಡುವ ಸಂಕಲ್ಪ ತೊಟ್ಟಿರುವುದು ಗುರುಗಳ ದೂರ ದೃಷ್ಟಿಯ ಸಂಕೇತವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮಾತನಾಡಿ ಇಂದು ಅನಾವರಣಗೊಂಡಿರುವ ವಿಜ್ಞಾನ ವಸ್ತು ಪ್ರದರ್ಶನವನ್ನು ನೋಡಿದರೆ ಅನೇಕ ಸಂಖ್ಯೆಯ ವಿನೂತನ ಸಂಶೋಧನೆಗಳು ಸಾಕಾರಗೊಂಡಿವೆ. ಭಾರತವು ಕೃಷಿಯ ಜೊತೆಗೆ ವಿಜ್ಞಾನ ತಂತ್ರಜ್ಞಾನದಲ್ಲೂ ಬಹಳ ಮುಂದಿದೆ ಎಂಬುದು ಸಾಬೀತಾಗಿದೆ ಎಂದರು.



ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಏರೋ ಇಂಡಿಯಾ ಪ್ರದರ್ಶನದಲ್ಲಿ ಭಾರತ ಸಾಧನೆಯ ಭರವಸೆಯ ಮೇಲೆ ಹೊರದೇಶಗಳಿಂದ ಅಪಾರ ಸಂಖ್ಯೆಯ ಹೂಡಿಕೆಗಳು ಸಾಧ್ಯವಾಗುತ್ತಿವೆ, ನಮ್ಮ ದೇಶದ ದೇಸಿ ತಂತ್ರಜ್ಞಾನವನ್ನು ಬಳಸಿಕೊಂಡು ಆಯುರ್ವೇದದ ಸಮತೋಲನ ಗೊಳಿಸಿ ಪರಿಪೂರ್ಣ ಮಾನವತೆ ನಿರ್ಮಾಣವಾಗಬೇಕಿದೆ ಸವಾಲುಗಳನ್ನು ಎದುರಿಸಿ ಸ್ವಂತಿಕೆಯಿಂದ ಮುನ್ನಡೆಯಿರಿ ಎಂದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಪೀಠಾಧ್ಯಕ್ಷರಾದ ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿ ತಮ್ಮ ಆಶೀರ್ವಚನದಲ್ಲಿ ಸಂತನಿಗೂ ವಿಜ್ಞಾನಿಗೂ ವ್ಯತ್ಯಾಸವಿಲ್ಲ. ನಮ್ಮೆಲ್ಲರ ಆರಾಧ್ಯ ದೈವ ಶ್ರೀ ಬಾಲಗಂಗಾಧರನಾಥ ಮಹಾ ಸ್ವಾಮೀಜಿಯವರ ಉದಾಹರಣೆಯನ್ನು ನೀಡಿದರು. ಧರ್ಮ ಆಧ್ಯಾತ್ಮ ವನ್ನು ಬೋಧಿಸುವ ಸಂತ ಒಬ್ಬ ಶ್ರೇಷ್ಠ ವಿಜ್ಞಾನಿಯಂತೆ ಅಂತರಿಕ್ಷ ಯಾನ ದ ಪರಿಕಲ್ಪನೆಯನ್ನು ತಿಳಿಸುವನು. ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ವಿದ್ಯಾರ್ಥಿಗಳು ಶ್ರೀ ಗುರುಗಳ ಆಶೀರ್ವಾದದಿಂದ ಅಂತರಿಕ್ಷಕ್ಕೆ ಉಪಗ್ರಹವನ್ನು ಆರಿಸಿ, ಅದಕ್ಕೆ ನಿಲ್ದಾಣವನ್ನು ಸ್ಥಾಪಿಸಿದ ಕೀರ್ತಿ ಪಡೆದಿರುವುದು ಮಹಾ ಸಾಧನೆಯೇ ಸರಿ ಎಂದರು.

ಇಂದುಅನಾವರಣಗೊಂಡಿರುವ ಬೃಹತ್ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಪ್ರದರ್ಶನ ಗೊಳ್ಳುತ್ತಿರುವ ನೂರಾರು ಸಂಖ್ಯೆಯ ವಿಜ್ಞಾನ ಮಾದರಿಗಳು ನಿಮ್ಮ ಜ್ಞಾನ ಸಂಪನ್ನತೆಗೆ ಹಿಡಿದ ಕನ್ನಡಿ ಎಂದುಬಣ್ಣಿಸಿದರು. ಹೊಸತನ್ನು ಹುಡುಕುವುದೇ ಶಿಕ್ಷಣದ ಗುರಿಯಾಗಬೇಕು, ನಿಮ್ಮಿಂದ ಶ್ರೇಷ್ಠ ಅನ್ವೇಷಣೆಗಳು ಆವಿಷ್ಕಾರಗೊಂಡು ಜಗತ್ತಿಗೆ ಮಾದರಿಯಾಗಬೇಕು ಎಂದರು.


ಮಂಡ್ಯ ಶಾಸಕರಾದ ರವಿಕುಮಾರ್ ಗಣಿಗ ಮಾತನಾಡಿದರು. ಕಾರ್ಯಕ್ರಮದಲ್ಲಿ ಶ್ರೀ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ ಹಾಗೂ ಎಲ್ಲಾ ಶಾಖಾ ಮಠಗಳ ಪೂಜ್ಯರು ಹಾಜರಿದ್ದರು.

ಸಭೆಯಲ್ಲಿ ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್, ಮಂಡ್ಯ ಜಿ ಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಂದಿನಿ ಕೆ ಆರ್, ಆದಿಚುಂಚನಗಿರಿ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ ಎ ಶೇಖರ್, ಕುಲ ಸಚಿವ ಡಾ. ಸಿ ಕೆ ಸುಬ್ಬರಾಯ, ಶಿಕ್ಷಣ ಟ್ರಸ್ಟ್ ನ ಆಡಳಿತಾಧಿಕಾರಿ ಡಾ. ಎ ಟಿ ಶಿವರಾಮು ಹಾಗೂ ಇತರರಿದ್ದರು.

ವಿಜ್ಞಾತಂ ಉತ್ಸವದ ಪ್ರಯುಕ್ತ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಗಳನ್ನು ಬೆಂಗಳೂರಿನ ಇಸ್ರೋ ಸಂಸ್ಥೆಯ ನಿವೃತ್ತ ನಿರ್ದೇಶಕ ಡಾ. ಐ ವೇಣುಗೋಪಾಲ್, ಮೈಸೂರು ವಿಶ್ವವಿದ್ಯಾಲಯದ ಪ್ರೊ. ಎನ್ ಬಿ ರಾಮಚಂದ್ರ, ಬೆಂಗಳೂರು ವಿಭು ಅಕಾಡೆಮಿಯ ಮುಖ್ಯಸ್ಥರಾದ ಡಾ. ವಿ ಬಿ ಆರತಿ ಕಾರ್ಯಕ್ರಮ ನಿರೂಪಿಸಿದರು.




# ಆನೆಹೊಲ ಸೋಲಿಗ ಹಾಡಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಭೇಟಿ



**ಹನೂರು:** ತಾಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಯ ಆನೆಹೊಲ ಗ್ರಾಮಕ್ಕೆ ಜಿಲ್ಲಾಧಿಕಾರಿ ಶಿಲ್ಪನಾಗ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾಧಿಕಾರಿ ಬಿಂದ್ರಾ ಅವರು ಭೇಟಿ ನೀಡಿ ಸೋಲಿಗ ಜನರ ಸಮಸ್ಯೆಗಳು ಅಭಿವೃದ್ಧಿಯ ಬಗ್ಗೆ ಮಾಹಿತಿ ಪಡೆದರು.

ಮಲೆ ಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡಿಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರು ಶ್ರೀ ಮಲೆ ಮಹದೇಶ್ವರ ಸ್ವಾಮಿಯ ದರ್ಶನ ಪಡೆದರು ನಂತರ ಗ್ರಾಮ ಪಂಚಾಯತ್ ವ್ಯಾಪ್ತಿಯ ಅನೆಹೊಲ ಗ್ರಾಮಕ್ಕೆ ಭೇಟಿ ನೀಡಿ ಸೋಲಿಗ ಜನಾಂಗದವರಿಗೆ ನಿರ್ಮಿತಿ ಕೇಂದ್ರದಿಂದ ಮಾದರಿ ಮನೆ ಪ್ರಾಯೋಗಿಕವಾಗಿ ಕಟ್ಟಿರುವ ಮನೆಯನ್ನ ವೀಕ್ಷಣೆ ಮಾಡಿದರು.

ಸೋಲಿಗ ಜನಾಂಗದ ಮಕ್ಕಳನ್ನ ಪ್ರೀತಿ ವಿಶ್ವಾಸದಿಂದ ಮಾತನಾಡಿಸಿ ಮಗುವಿಗೆ ಸಿಹಿತಿನ ಸಿಹಿ ಮತ್ತು ಅವರ ಕುಟುಂಬದ ಜೊತೆ ಮಾತನಾಡಿದ ಅವರು ಏನೇ ಸಮಸ್ಯೆ ಇದ್ದರೆ ನಮ್ಮ ಗಮನಕ್ಕೆ ತಿಳಿಸಿ ಎಂದರು. ಸರ್ಕಾರದಿಂದ ನಿಮಗೆ ಮೂಲಭೂತ ಸೌಕರ್ಯ ಕಲ್ಪಿಸಿ ನಿಮ್ಮಗಳ ಅಗತ್ಯತೆಗಳ ಪೂರಕವಾಗಿ ಅಭಿವೃದ್ಧಿ ಕೆಲಸ ಮಾಡುವ ಎಂದರು.ಇದೇ ಸಂದರ್ಭದಲ್ಲಿ ಚಾಮರಾಜನಗರ ಜಿಲ್ಲೆ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ರಾ, ರಾಮಪುರ ಉಪ ತಹಶೀಲ್ದಾರ್ ಸುರೇಖಾ, ಮಲೆ ಮಾದೇಶ್ವರ ಬೆಟ್ಟ ಗ್ರಾಮ ಲೆಕ್ಕಾಧಿಕಾರಿ ವಿನೋದ, ನಿರ್ಮಿತಿ ಕೇಂದ್ರದ ಯೋಜನಾ ಅಧಿಕಾರಿ ಮಂಜುಳಾ. ಇಂಜಿನಿಯರ್ ರವಿಕುಮಾರ್, ಹಾಗೂ ಇನ್ನಿತರರು ಇದ್ದರು.

# ನಗರದಲ್ಲಿ ಬೃಹತ್ ಉದ್ಯೋಗ ಮೇಳ: ಎಸ್.ಶ್ರೀಕಾಂತ್

**ಶಿಡ್ಲಘಟ್ಟ:** ಇದೇ ಫೆ.22ರ ಶನಿವಾರದಂದು ನಗರದ ವಾಸವಿ ಶಾಲೆಯಲ್ಲಿ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಲಿಯೋ ಕ್ಲಬ್‌ನ ಅಧ್ಯಕ್ಷ ಎಸ್.ಶ್ರೀಕಾಂತ್ ತಿಳಿಸಿದರು.

ನಗರದ ವಾಸವಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಯೋ ಕ್ಲಬ್ ಆಫ್ ಕಿರಣ ಹಾಗೂ ನಾನಾ ಸಂಘ ಸಂಸ್ಥೆಗಳ ಆಶ್ರಯದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧ 50ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ ಎಂದರು.


ಎಸ್ಸೆಸ್ಸೆಲ್ಸಿ, ಪಿಯುಸಿ, ಪದವಿ, ಐಟಿಐ ಡಿಪ್ಲೊಮೊ ಹಾಗೂ ತತ್ಸಮಾನ ಪದವಿ ಪಡೆದ ನಿರುದ್ಯೋಗಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಹೆಸರನ್ನು ನೋಂದಾಯಿಸಲು ಕ್ಯೂಆರ್ ಕೋಡ್ ನೀಡಿದ್ದು ಅದರಲ್ಲಿ ಅಥವಾ ಆಫ್ ಲೈನ್‌ನಲ್ಲೂ ಸ್ಥಳದಲ್ಲೆ ಹೆಸರನ್ನು ನೋಂದಾಯಿಸಬಹುದು ಎಂದು ಹೇಳಿದರು.

ತಾಲೂಕಿನ ನಿರುದ್ಯೋಗಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಿ ಎಂದು ಮನವಿ ಮಾಡಿದರು. ಹೆಚ್ಚಿನ ವಿವರಗಳಿಗೆ ಲೋಕೇಶ್ 8431775911, ದುರ್ಗಾ ಪ್ರಸಾದ್ 9663871469 ಸಂಪರ್ಕಿಸಲು ಮನವಿ ಮಾಡಿದರು.

ಲಿಯೋ ಕ್ಲಬ್‌ನ ಕಾರ್ಯದರ್ಶಿ ಲೋಕೇಶ್, ಗೋವರ್ಧನ್, ಅಕ್ಷಿತ್, ಮುರಳಿ, ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಪಟೇಲ್ ನಾರಾಯಣಸ್ವಾಮಿ, ವಾಸವಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ರೂಪಸಿ ರಮೇಶ್, ಕಸ್ತೂರಿ ಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷ ರಾಮಾಂಜನೇಯ, ಭಗತ್ ಸುರೇಶ್, ಕರವೇ ತಾಲೂಕು ಅಧ್ಯಕ್ಷ ಯುವರತ್ನ ಸುನಿಲ್, ಪಾರ್ಥಸಾರತಿ, ಸೋಮು ಮತ್ತಿತರರು ಹಾಜರಿದ್ದರು.



# ಜೊನ್ನಹಳ್ಳಿ ಶ್ರೀಅಭಯ ಆಂಜನೇಯ ಸ್ವಾಮಿ ದೇವಾಲಯದ ಜೀರ್ಣೋದ್ಧಾರ



**ದೇವನಹಳ್ಳಿ:** ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ಜೊನ್ನಹಳ್ಳಿ ಗ್ರಾಮದಲ್ಲಿ ಶ್ರೀ ಅಭಯ ಆಂಜನೇಯ ಸ್ವಾಮಿ ದೇವಾಲಯದ ನೂತನ ದೇವಾಲಯ ಜೀರ್ಣೋದ್ಧಾರ ರಾಜಗೋಪುರ ಮಹಾಸಂಪ್ರೋಕ್ಷಣೆ ಹಾಗೂ ಧ್ವಜಸ್ತಂಭ ಪ್ರಾಣ ಪ್ರತಿಷ್ಠಾಪನ ಮಹೋತ್ಸವ ಅದ್ದೂರಿಯಾಗಿ ನಡೆಯಿತು.

ಪೂಜಾ ಕಾರ್ಯಕ್ರಮದಲ್ಲಿ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ನಿಕಟ ಪೂರ್ವ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ .ಎಲ್ ಏನ್ ಭಾಗವಹಿಸಿ ದೇವರ ದರ್ಶನ ಪಡೆದು ದೇವಾಲಯ ಸೇವಾ ಸಮಿತಿಯಿಂದ ಅಭಿನಂದನೆಗಳನ್ನು ಸ್ವೀಕರಿಸಿ ನಂತರ ಮಾತನಾಡಿದರು.

ಜೊನ್ನಹಳ್ಳಿ ಗ್ರಾಮದ ಶ್ರೀ ಅಭಯ ಆಂಜನೇಯ ಸ್ವಾಮಿ ದೇವಾಲಯದ ಜೀರ್ಣೋದ್ಧಾರದಲ್ಲಿ ಭಾಗವಹಿಸಿ ಬಹಳ ಸಂತೋಷವಾಯಿತು. ದೇವರಲ್ಲಿ ಎಲ್ಲರಿಗೂ ಒಳ್ಳೆಯದಾಗಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಮತ್ತು ದೇವಾಲಯ ಸೇವಾ ಸಮಿತಿಯ ಮುಖಂಡರಾದ ಜೊನ್ನಹಳ್ಳಿ ಮುನಿರಾಜು ಮಾತನಾಡಿ, ನೂತನ ದೇವಾಲಯದ ಕಟ್ಟಡಕ್ಕೆ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಶ್ರೀ ಅಭಯ ಆಂಜನೇಯ ಸ್ವಾಮಿ ಆಯುಷ್ ಆರೋಗ್ಯ ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಬೈಯಪ ಅಧ್ಯಕ್ಷ ಶಾಂತಕುಮಾರ್. ವಿ ಮುಖಂಡರಾದ ದೊಡ್ಡಸಣ್ಣೇ ಮುನಿರಾಜು, ಆರ್. ಕೆ ನಂಜೇಗೌಡ ,ಯಲಿಯೂರು ಹನುಮಪ್ಪ, ಜನಕಮಣಿ ,ಚಂದ್ರಶೇಖರ್ ಸೇರಿದಂತೆ ಹಲವಾರು ಮುಖಂಡರು, ಪ್ರಧಾನ ಅರ್ಚಕರಾದ ಎಸ್. ಪ್ರಕಾಶ್ ಮತ್ತು ಶ್ರೀ ಅಭಯ ಆಂಜನೇಯ ಸ್ವಾಮಿಯ ಸಮಸ್ತ ಭಕ್ತಾದಿಗಳು ,ಜೊನ್ನಹಳ್ಳಿ ಗ್ರಾಮ ಒಕ್ಕಲು ಬಾಂಧವರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಭಾಗಿಯಾಗಿದ್ದರು.

# ಭಾರತ ಮಾತೆ ಪೂಜೆ ಕಾರ್ಯಕ್ರಮ

**ಮುಳಬಾಗಿಲು:** ಭಾರತೀಯ ಕಿಸಾನ್ ಸಭಾ ವತಿಯಿಂದ ಫೆ.21ರಂದು ಭಾರತ ಮಾತಾ ಪೂಜೆ ಕಾರ್ಯಕ್ರಮವನ್ನು ಮುಳಬಾಗಿಲು ಭಾರತೀಯ ಕಿಸಾನ್ ಸಭಾವತಿಯಿಂದ ಹೊನ್ನಶೆಟ್ಟಿಹಳ್ಳಿ ಗ್ರಾಮದಲ್ಲಿ ಭಾರತ ಮಾತೆ ಪೂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಉಪಾಧ್ಯಕ್ಷ ನಾರಾಯಣ ರೆಡ್ಡಿ ತಿಳಿಸಿದರು

ಹೊನ್ನ ಶೆಟ್ಟಿ ಹಳ್ಳಿ ಗ್ರಾಮದ ಕೆರೆಯ ಮುಂಭಾಗದಲ್ಲಿ ಭಾರತ ಮಾತಾ ಪೂಜ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳೋದರ ಮೂಲಕ ಭೂಮಾತೆ, ಗಂಗಾಮಾತೆ, ಗೋಮಾತೆ ಎಂಬ ಸಾಂಪ್ರದಾಯಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಈ ನೆಲ, ಜಲ, ಮಣ್ಣು ಸಂಪತ್ತನ್ನು ಸಂರಕ್ಷಣೆ ಮಾಡುವುದರ ಮೂಲಕ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಹಾಗೂ ನೀರಿನ ಶುದ್ಧೀಕರಣಕ್ಕಾಗಿ, ನೀರು ಮತ್ತು ಹಾಲನ್ನು ಅಮೃತ ಸಮಾನವೆಂದು ತಿಳಿದು ಇವುಗಳ ಶುದ್ಧೀಕರಣಕ್ಕಾಗಿ ರಾಸಾಯನಿಕ ಮುಕ್ತ ಕೃಷಿಯನ್ನು ಮಾಡಲು ಹಾಗೂ ಸಾವಯವ ಕೃಷಿಯನ್ನು ಉತ್ತೇಜಿಸಲು ಈ ಕಾರ್ಯಕ್ರಮವನ್ನು ಭಾರತೀಯ ಕಿಸಾನ್ ಸಭಾ ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು

ಈ ವಿಶೇಷ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ರೈತ ಬಾಂಧವರಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತದೆ ಎಂದು ತಿಳಿಸಿದರು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ರೈತರು ಭಾಗವಹಿಸುವುದರ ಮೂಲಕ ಯಶಸ್ವಿ ಮಾಡಬೇಕಾಗಿದೆ ಎಂದರು



# ಭೀಮ ಕೊರಂಗವ್ ವಿಜಯೋತ್ಸವ




**ಮುಳಬಾಗಿಲು:** ಮಹರ್ ಜಾತಿ ಸಮುದಾಯ ದವರು ಗುಲಾಮರಲ್ಲ ಶಕ್ತಿಶಾಲಿ ಯೋಧರು. ಕೇವಲ 500 ಜನ ಯೋಧರು 28,000 ಪೇಶ್ವೆಗಳ ವಿರುದ್ಧ ಯುದ್ಧ ಮಾಡಿ ಗೆದ್ದು ಶಕ್ತಿ ತೋರಿಸಿದ ಮಹಾವೀರರು ಪ್ರಪಂಚದಲ್ಲಿಯೇ ಇವರು ಯುದ್ಧ ಪರಿಣಿತರು ಬಾಜಿ ರಾವ್ ಸೈನ್ಯಕ್ಕೆ ಎದೆ ಕೊಟ್ಟು ನಿಂತು ಗೆದ್ದು ತಮ್ಮ ಶಕ್ತಿಯನ್ನ ಪ್ರದರ್ಶಿಸಿದವರೆಂದರೆ ತಪ್ಪಾಗಲಾರದು ಎಂದು ದಲಿತ ಹಿರಿಯ ಮುಖಂಡ ಬಿ ಗೋಪಾಲ್ ತಿಳಿಸಿದರು.

ಬಹುಜನ ಸಂಘಟನೆಗಳ ಒಕ್ಕೂಟದ ವತಿಯಿಂದ ಭೀಮ ಕೊರಂಗವ್ ವಿಜಯೋತ್ಸವ ಹಾಗೂ ದಲಿತ ಚಳುವಳಿಯ ಐಬತ್ತರ ಸಂಭ್ರಮ ಮತ್ತು ಡಾ. ಬಿಆರ್ ಅಂಬೇಡ್ಕರ್ ಸ್ಥಾಪಿತ ಸಮತಾ ಸೈನಿಕ ದಳದ ಶತಮಾನೋತ್ಸವ ಕಾರ್ಯಕ್ರಮವನ್ನು ಪಟ್ಟಣದ ನೇತಾಜಿ ಕ್ರೀಡಾಂಗಣದಲ್ಲಿ ಉದ್ಘಾಟಿಸಿ ಮಾತನಾಡಿದ ಇವರು ಪ್ರಪಂಚದಲ್ಲಿಯೇ ಮಹರ್ ಜನಾಂಗದ ಮಹರ್ ಯುದ್ಧದಲ್ಲಿ 22 ಸೈನಿಕರು ಪ್ರಾಣ ತ್ಯಾಗ ಮಾಡಿದರು ಇಂತಹ ಸಾಹಸವನ್ನು ಬ್ರಿಟಿಷರು ಮೆಚ್ಚುಗೆ ವ್ಯಕ್ತಪಡಿಸಿದರು.

ಕೊರಂಗಾವ್ ಸ್ತಂಭವನ್ನು ನಿರ್ಮಿಸಿ ಅಲ್ಲಿ 22 ಸೈನಿಕರ ಹೆಸರು ಬರೆಯಲಾಗಿದೆ. ಬಾಬಾ ಸಾಹೇಬರು ಈ ವೀರ ಯೋಧರ ನೆನಪಿಗಾಗಿ ಪ್ರತಿ ವರ್ಷವೂ ಸಮುದಾಯದೊಂದಿಗೆ ಅಲ್ಲಿ ಹೋಗಿ ಕೊರೆಂಗಾವ್ ವಿಜಯೋತ್ಸವವನ್ನು ಆಚರಿಸುತ್ತಿದ್ದರು ಇಂದಿಗೂ ಸಹ ಲಕ್ಷಾಂತರ ಜನರು ದೇಶದ ಮೂಲೆ ಮೂಲೆಗಳಿಂದ ಅಲ್ಲಿಗೆ ಭೇಟಿ ನೀಡಿ ಹಬ್ಬದ ವಾತಾವರಣ ಸೃಷ್ಟಿ ಮಾಡುತ್ತಿದ್ದು ಜೀವನದಲ್ಲಿ ಪ್ರತಿಯೊಬ್ಬ ದಲಿತರು ಕೂಡ ವರ್ಷಕ್ಕೊಮ್ಮೆ ಭೇಟಿ ನೀಡಿ ವಿಜಯೋತ್ಸವ ಕಾರ್ಯಕ್ರಮವನ್ನು ವೀಕ್ಷಿಸಿ ಜೀವತವಾದಿ ಉದ್ದಕ್ಕೂ ಸಮ ಸಮಾನತೆಯನ್ನ ಪ್ರತಿಪಾದಿಸುವುದು ಉತ್ತಮ ಎಂದು ತಿಳಿಸಿದರು.

ಬಹುಜನ ಚಳುವಳಿಯ ರಾಜ್ಯ ಅಧ್ಯಕ್ಷ ಸಂಘ ಸಂದ್ರ ವಿಜಯ್ ಕುಮಾರ್ ಮಾತನಾಡಿ ಕರ್ನಾಟಕ ರಾಜ್ಯದಲ್ಲಿ ಈಗಾಗಲೇ ಸಂಘಟನೆಗಳು ಹೊಡೆದು ಹೋಗಿದ್ದು ಮುಂದಿನ ದಿನಗಳಲ್ಲಿ ನಾವೆಲ್ಲ ಒಂದೇ ಎಂದು ತಿಳಿದು ಒಟ್ಟಾಗಿ ಕೆಲಸ ಮಾಡಿ ನಮ್ಮ ನಿಜವಾದ ಬದುಕು ಮತ್ತು ಸಂಘಟನೆ ಬಗ್ಗೆ ಹೆಚ್ಚು ಒತ್ತು ನೀಡಿ ಬಾಬಾ ಸಾಹೇಬರ ಆಶಯಗಳನ್ನ ಹಾಗೂ ತತ್ವಗಳನ್ನು ಪಾಲಿಸಿ ಈ ಜನಾಂಗ ಉದ್ದಾರಕ್ಕಾಗಿ ನಾವೆಲ್ಲ ಕೈಜೋಡಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಹಿರಿಯ ದಲಿತ ಮುಖಂಡ ಟಿ ವಿಜಯ್ ಕುಮಾರ್. ಪಿಕ್ಸ್ ನಾರಾಯಣಸ್ವಾಮಿ ಪಂಡ

# ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ



**ಮಾಗಡಿ:**ತಾಲೂಕಿನ ಕಲ್ಯಾ ಶ್ರೀಉರಿಗದ್ದೀಶ್ವರ ಸೋಮನಾಥ ಪ್ರೌಢಶಾಲೆಯ ಆವರಣದಲ್ಲಿ ಫೆ.21 ರಂದು ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಂಡಿರುವುದಾಗಿ ಕಲ್ಯ ಗ್ರಾ.ಪಂ. ಸದಸ್ಯ ಎಂ.ವಿ.ರಂಗನಾಥ್ ತಿಳಿಸಿದ್ದಾರೆ.

ಪಟ್ಟಣದ ಕಾರ್ಮಿಕ ಸಂಘಟನೆ ಕಚೇರಿಯಲ್ಲಿ ಬುಧವಾರ ಏರ್ಪಡಿಸಿದ್ದ ಪತ್ರಿಕಾಘೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಕಡು ಬಡವರು, ರೈತರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲು ಹಿಂದೇಟು ಹಾಕಿ ಆರೋಗ್ಯ ತೀರ ಹದೆಗೆಟ್ಟಿದ ವೇಳೆ ನಗರಪ್ರದೇಶದ ಆಸ್ಪತ್ರೆಗಳಲ್ಲಿ ಸಾಲಸೂಲ ಮಾಡಿ ಲಕ್ಷಾಂತರ ರೂ ಖರ್ಚುಮಾಡಿ ಚಿಕಿತ್ಸೆ ಪಡೆಯುವ ಬದಲು ಯಾವುದೇ ಖರ್ಚಿಲ್ಲದೆ ಉಚಿತವಾಗಿ ಚಿಕಿತ್ಸೆ ಪಡೆಯಲಿ ಎಂಬ ಉದ್ದೇಶದಿಂದ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದ್ದು ಇದನ್ನು ನಿರಂತರವಾಗಿ ನಡೆಸಿಕೊಂಡು ಹೋಗುವುದಾಗಿ ತಿಳಿಸಿದರು.

ವಿಜ್ಞಾತಂ ಸೌತ್ ಕ್ಯಾಂಪಸ್ ನಗಲೂರು ದಾಸನಪುರದ ಬಿಜಿಎಸ್ ವೈದ್ಯಕೀಯ ಕಾಲೇಜು ಆಸ್ಪತ್ರೆ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದ್ದು ಕಣ್ಣು, ಕಿವಿ, ಮೂಗು, ಕೀಲು, ಮೂಳೆ, ಬಿಪಿ, ಶುಗರು, ಇಸೀಜಿ ತಪಾಸಣೆಯನ್ನು ನುರಿತ ತಜ್ಞರಿಂದ ತಪಾಸಣೆ ನಡೆಸಿ ಚಿಕಿತ್ಸೆ ನೀಡಲಾಗುವುದು ಅಗತ್ಯ ಬಂದಲ್ಲಿ ಆಸ್ಪತ್ರೆಗೆ ಬರಲು ಗುರುತಿನ ಚೀಟಿ ನೀಡಲಾಗುವುದು. ಸಾಮಾನ್ಯ ಶಸ್ತ್ರ ಚಿಕಿತ್ಸೆ ತಜ್ಞರು, ನೇತ್ರ ಚಿಕಿತ್ಸಾ ತಜ್ಞರು, ಕೀಲು ಮೂಳೆ ತಜ್ಞರು, ಮಕ್ಕಳ ತಜ್ಞರು ಪ್ರಮುಖವಾಗಿ ಭಾಗವಹಿಸಲಿದ್ದಾರೆ. ಆರೋಗ್ಯ ತಪಾಸಣೆ ಶಿಬಿರಕ್ಕೆ ಭಾಗವಹಿಸುವರಿಗೆ ತಿಂಡಿ,ಊಟದ ವ್ಯವಸ್ಥೆ ಕಲ್ಪಿಸಲಾಗಿದ್ದು, ಆರೋಗ್ಯ ತಪಾಸಣೆಗೆ ಬರುವರಿಗೆ ಸುತ್ತಮುತ್ತಲ ಗ್ರಾಮಗಳಿಂದ ವಾಹನದ ವ್ಯವಸ್ಥೆ ಕಲ್ಪಿಸಲಾಗಿದೆ ನಾಗರೀಕರು ಇದರ ಸದುಪಯೋಗ ಪಡಿಸಿಕೊಂಡು ಆರೋಗ್ಯವಂತವರಾಗಿ ಆರೋಗ್ಯ ಸಮಾಜ ನಿರ್ಮಾಣಕ್ಕೆ ಮುಂದಾಗುವಂತೆ ಕರೆ ನೀಡಿದರು.

# ಬಿ ಖಾತೆ ನೀಡಲು ಅಭಿಯಾನ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿರುವ ಅನಧಿಕೃತ ನಿವೇಶನ, ಮನೆಗಳಿಗೆ ಅಗತ್ಯ ದಾಖಲೆಗಳನ್ನು ಪಡೆದು ಬಿ ಖಾತಾ ನೀಡುವ ಪ್ರಕ್ರಿಯೆಯನ್ನು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಅಭಿಯಾನದ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ನಗರ, ಗ್ರಾಮಗಳ ಸ್ಥಳೀಯಾಡಳಿತ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಬಿ ಖಾತಾ ಆಂದೋಲನದ ಪೂರ್ವಬಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಯಾವ ಯಾವ ನಿವೇಶನಗಳಿಗೆ, ಮನೆಗಳಿಗೆ ಬಿ ಖಾತಾ ನೀಡಬಹುದು ಎಂಬುದನ್ನು




ದಾಖಲೆಗಳನ್ನು ಸಮರ್ಪಕವಾಗಿ ಪರಿಶೀಲಿಸಿ ಕ್ರಮವಹಿಸಬೇಕು. ಸರ್ಕಾರ ಸೂಚಿಸಿರುವ ದಾಖಲೆಗಳನ್ನು ಒದಗಿಸಿದವರಿಗೆ ವಿಳಂಬವಿಲ್ಲದೆ ಬಿ ಖಾತಾ ನೀಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಈ ಆಂದೋಲನವನ್ನು ವಾರ್ಡ್ ಮತ್ತು ಗ್ರಾಮ ಮಟ್ಟದಲ್ಲಿ ಕೈಗೊಳ್ಳಲು ಬೇಕಿರುವ ಸಿಬ್ಬಂದಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸಿಕೊಳ್ಳಲು ಕ್ರಮವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ನಗರ ಸ್ಥಳೀಯಾಡಳಿತ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯ ಕ್ಷರು, ಪೌರಾಯುಕ್ತರು, ಮುಖ್ಯಾಧಿಕಾರಿಗಳು ಭಾಗವಹಿಸಿ ಸ್ಥಳೀಯ ಮಟ್ಟದಲ್ಲಿ ಎದುರುವಾಗುವ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಚರ್ಚಿಸಿದರು.

ಈ ವೇಳೆ ಚಿಕ್ಕಬಳ್ಳಾಪುರ ನಗರಸಭೆ ಅಧ್ಯಕ್ಷ ಎ. ಗಜೇಂದ್ರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಮಾಧವಿ, ಪೊಲೀಸ್ ಉಪಾಧೀಕ್ಷಕ ಶಿವಕುಮಾರ್ ಸೇರಿದಂತೆ ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ನೆಹರೂ ಹೆಸರಲ್ಲಿ ಬಾಲ್ ಮಂಚ್ ವೇದಿಕೆ ಸೃಷ್ಟಿಸಿ ಮಕ್ಕಳಿಗೆ ಪ್ರೋತ್ಸಾಹ




**ಚಿಕ್ಕಬಳ್ಳಾಪುರ:** ಮಕ್ಕಳ ಪ್ರೀತಿಪಾತ್ರಕ್ಕೆ ಹೆಸರಾದ ಚಾಚಾ ನೆಹರು ಎಂತಲೆ ಕರೆಸಿಕೊಳ್ಳುತ್ತಿದ್ದ ದೇಶದ ಮೊದಲ ಪ್ರಧಾನ ಮಂತ್ರಿ ಜವಾಹರ್ ಲಾಲ್ ನೆಹರು ಹೆಸರಲ್ಲಿ ಕಾಂಗ್ರೆಸ್ ಪಕ್ಷ ಜವಾಹರ್ ಬಾಲ್ ಮಂಚ್ ವೇದಿಕೆಯೊಂದನ್ನ ಹುಟ್ಟಾಕಿ ಮಕ್ಕಳ ವಿಧ್ಯಾಭಿವೃದ್ದಿ, ಪಠ್ಯೇತರ ಚಟುವಟಿಕೆ, ಕ್ರೀಡಾ ಚಟುವಟಿಕೆಗಳ ಪ್ರೋತ್ಸಾಹಕ್ಕೆ ಮುಂದಾಗಿದ್ದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲೂ ಜೆ.ಬಿ.ಎಂ ಚಟುವಟಿಕೆಗಳನ್ನ ಇಂದಿನಿಂದ ಪ್ರಾರಂಬಿಸಲು ಸಮಿತಿ ರಚಿಸಲಾಗಿದೆ. ಜೆಬಿಎಂ ಎಐಸಿಸಿಯ ಒಂದು ಘಟಕವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಅನಂತಕುಮಾರಿ ಚಿನ್ನಪ್ಪ ತಿಳಿಸಿದ್ದಾರೆ.

ಬುಧವಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಟಿ ನಡೆಸಿ ಮಾತನಾಡಿದ ಅವರು, ಮಕ್ಕಳ ಮೇಲೆ ಅತಿಯಾದ ಪ್ರೀತಿಯನ್ನ ತೋರಿ ಬಲಿಷ್ಟ ಭಾರತದ ಬಾವಿ ಪ್ರಜೆಗಳನ್ನ ಸೃಷ್ಟಿಸಲು ಮುಂದಾಗಿದ್ದ ಭಾರತ ದೇಶದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರು ಹೆಸರಿನಲ್ಲಿ ಕಾಂಗ್ರೇಸ್ ಪಕ್ಷ ಜವಾಹರ್ ಬಾಲ್ ಮಂಚ್ ವೇದಿಕೆ ಮುಖಾಂತರ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುತ್ತಿದೆ. ಕೇರಳ ಮತ್ತು ಉತ್ತರ ಬಾರತದಲ್ಲಿ ಹೆಚ್ಚು ಚಟುವಟಿಕೆಯಿಂದ ಕೂಡಿರುವ ಜೆಬಿಎಂ ಮೂರು ವರ್ಷಗಳಿಂದ ಕರ್ನಾಟಕದಲ್ಲೂ ತನ್ನ ಘಟಕಗಳನ್ನ ಸ್ಥಾಪಿಸಿ ಮಕ್ಕಳ ಚಟುವಟಿಕೆಗಳನ್ನ ಪ್ರಾರಂಬಿಸಿದೆ ಎಂದು ಹೇಳಿದರು.

ಜವಹಾರ್ ಬಾಲ್ ಮಂಚ್ ಇದೊಂದು ರಾಜಕೀಯ ರಹಿತ ಸಂಘಟನೆ ಮಕ್ಕಳಲ್ಲಿ ಅಡಗಿರುವ ಪ್ರತಿಭೆ ,ಶೈಕ್ಷಣಿಕಾ ಕಲಿಕಾ ಸ್ಪೂರ್ತಿ ಹೆಚ್ಚಿಸುವ ಸಲುವಾಗಿ ಆಟದೊಂದಿಗೆ ಪಾಠ ಕಲಿಯುವ ಪದ್ದತಿಯನ್ನ ರೂಡಿಮಾಡಿಸುವುದು ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳನ್ನ ತೊಡಗಿಸುವುದು, ಈ ಜೆಬಿಎಂ ಉದ್ದೇಶವಾಗಿದೆ. ಜೆಬಿಎಂ ಘಟಕವನ್ನ ಚಿಕ್ಕಬಳ್ಳಾಪುರ ಜಿಲ್ಲೆಗೂ ವಿಸ್ತರಣೆ ಮಾಡಲಾಗಿದ್ದ ಮಹಿಳಾ ಕಾಂಗ್ರೇಸ್ ಜಿಲ್ಲಾದ್ಯಕ್ಷೆ ಯಾಸ್ಮಿನ್ ತಾಜ್ ರವರನ್ನ ಅಧ್ಯಕ್ಷರಾಗಿ ಮಾಡಲಾಗಿದೆ. ಇನ್ನು ಇದೆ ತಿಂಗಳ 21–22 ರಂದು ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ಸಮ್ಮೇಳನ ಹಮ್ಮಿಕೊಳ್ಳಲಾಗಿದ್ದು, ಅಂದು ಕೆ.ಸಿ. ವೇಣುಗೋಪಾಲ್ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಸೇರಿದಂತೆ ಎಲ್ಲ ಪದಾಧಿಕಾರಿಗಳಿಗೂ ಜೆಬಿಎಂ ಹೇಗೆ ಕೆಲಸ ಮಾಡುತ್ತದೆ ಅದರ ಘಟಕಗಳನ್ನ ಚಟುವಟಿಕೆಗೆ ಇಳಿಸುವುದು ಹೇಗೆ ಎಲ್ಲಿ ಕಾರ್ಯಚಟುವಟಿಕೆ ನಡೆಸಬೇಕು ಎನ್ನುವ ಸಂಪೂರ್ಣ ತಿಳುವಳಿಕೆ ನೀಡಲಾಗುವುದು ಎಂದರು.

ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಯಾಸ್ಮಿನ್ ತಾಜ್ ಮಾತನಾಡಿ ಎಐಸಿಸಿಯ ಜವಾಹರ್ ಬಾಲ್ ಮಂಚ್ ಸಂಸದೆ ಪ್ರಿಯಾಂಕ ಗಾಂಧಿಯವರ ಅಚ್ಚು ಮೆಚ್ಚಿನ ಘಟಕವಾಗಿದ್ದು ದಕ್ಷಿಣ ಭಾರತಕ್ಕೆ ಈ ಘಟಕ ವಿಸ್ತರಿಸಿದ್ದು ಹಲವಾರು ಕಡೆ ಸಂಘಟಿತವಾಗಿದೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜೆಬಿಎಂ ಪರಿಚಯಿಸುವ ಉದ್ದೇಶದಿಂದ ಇಂದು ಸಭೆ ಕರೆಯಲಾಗಿದ್ದು, ಜಿಲ್ಲೆಯ ಉಸ್ತುವಾರಿ ಅನಂತ ಕುಮಾರಿ ಅವರು ಜೆಬಿಎಂ ಬಗ್ಗೆ ವಿಸ್ತಾರವಾಗಿ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಹ ಈ ಘಟಕ ಕಾರ್ಯಾರಂಭ ಮಾಡಲಿದೆ ಎಂದರು.ಈ ಸಂಧರ್ಭದಲ್ಲಿ ರಾಜ್ಯ ಸಂಚಾಲಕಿ ಚಂದ್ರಕಳಾ, ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಹಸೀನಾ, ಉಪಾಧ್ಯಕ್ಷೆ ವೆಂಕಟರತ್ನ, ಬ್ಲಾಕ್ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ವೆಂಕಟಲಕ್ಷ್ಮಮ್ಮ,ಉಪಾದ್ಯಕ್ಷೆ ಶಾಂತಮ್ಮ, ಪ್ರಜ್ವಲ್ ಮತ್ತು ಇತರರು ಇದ್ದರು.

# ರೋಟರಿಕ್ಲಬ್: ಆಸೆ, ಸ್ವಾರ್ಥಕ್ಕಿಂತ ಸೇವೆ ಮಾಡುವುದು ಮುಖ್ಯ: ಸತೀಶ್ ಮಾಧವನ್



**ರಾಮನಗರ:** ರೋಟರಿ ಕ್ಲಬ್ ಜಗತ್ತಿನ ಹಲವು ರಾಷ್ಟಗಳಲ್ಲಿ ಸಮಾಜಮುಖೀ ಕಾರ್ಯದಲ್ಲಿ ನಿರಂತರವಾಗಿ ತೊಡಗುತ್ತಿದೆ. ಇಲ್ಲಿ ಅಧಿಕಾರದ ಆಸೆ, ಸ್ವಾರ್ಥಕ್ಕಿಂತ ಸೇವೆ ಮಾಡುವುದು ಮುಖ್ಯವಾಗಿದೆ ಎಂದು ರೋಟರಿ ರಾಮನಗರದ ಜಿಲ್ಲಾ ಪಾಲಕ ಸತೀಶ್ ಮಾಧವನ್ ಹೇಳಿದ್ದಾರೆ.

ನಗರದ ರೋಟರಿ ಸಂಸ್ಥೆ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಪಾಲಕರ ಭೇಟಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ರೋಟರಿ ಸಂಸ್ಥೆಯ ಬೆಳೆದಿದ್ದೆ ಸಮಾಜಮುಖೀ ಕಾರ್ಯಕ್ಕಾಗಿ, ಪೋಲಿಯೋ ನಿರ್ಮೂಲನೆಯಲ್ಲಿ ರೋಟರಿ ಸಂಸ್ಥೆ ದೊಡ್ಡ ಪಾತ್ರ ನಿರ್ವಹಿಸಿದೆ. ಇಂತಹ ಸಂಸ್ಥೆಯಲ್ಲಿ ಸದಸ್ಯತ್ವ ಪಡೆಯುವುದೇ ಹೆಮ್ಮೆಯ ಸಂಗತಿ ಎಂದು ಹೇಳಿದರು.

ವಿಶ್ವದಲ್ಲಿ ಅಂತಾರಾಷ್ಟ್ರೀಯ ಸಂಸ್ಥೆಯೊಂದು ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಬೆಳೆದಿರುವುದು ರೋಟರಿ ಎಂದರೆ ಅತಿಶಯೋಕ್ತಿ ಆಗಲಾರದು. ಅರಬ್, ಯರೋಪ್ ದೇಶಗಳು ಸೇರಿದಂತೆ ಜಗತ್ತಿನಾದ್ಯಂತ 200 ದೇಶಗಳಲ್ಲಿ ತನ್ನ ಶಾಖೆಗಳನ್ನು ಹೊಂದಿದೆ ಎಂದರು.

ಸೆಕ್ರೆಟರಿ ಜನರಲ್ ಆರ್. ಕುಮಾರಸ್ವಾಮಿ ಮಾತನಾಡಿ ರೋಟರಿ ಸಂಸ್ಥೆಯಿಂದ ಜಗತ್ತಿನಾದ್ಯಂತ ನಾನಾ ಕಲ್ಯಾಣ ಕಾರ್ಯಗಳು ನಿರಂತರವಾಗಿ ನಡೆಯುತ್ತಲೇ ಇರುತ್ತವೆ. ಇಲ್ಲಿ ಸ್ವಾರ್ಥ, ಅಧಿಕಾರಕ್ಕೆ ಅವಕಾಶವಿಲ್ಲ. ಸೇವೆ ಮಾಡುವುದೇ ಇಲ್ಲಿ ಮುಖ್ಯವಾಗಿದೆ. ಇಂತಹ ರೋಟರಿಗೆ ಸದಸ್ಯರಾಗುವ ಮೂಲಕ ಅಂತಾರಾಷ್ಟ್ರೀಯ ಮಟ್ಟದ ಸಂಸ್ಥೆಯೊಂದಕ್ಕೆ ಸದಸ್ಯರಾದ ಹೆಮ್ಮೆ ಇರುತ್ತದೆ. ಹಾಗಾಗಿ ಈ ಸಂಸ್ಥೆಯಲ್ಲಿ ನೀವು ಎಲ್ಲಿಯೇ ಇದ್ದರು ಸಾಕು ರೋಟರಿ ಎಂದರೇ ಸಾಕು ಅಪ್ಪಿಕೊಳ್ಳುತ್ತಾರೆ. ಸದಸ್ಯತ್ವವೂ ಕೂಡ ಅಂತಾರಾಷ್ಟ್ರೀಯ ಮಟ್ಟದ್ದಾಗಿರುತ್ತದೆ ಎಂದರು.

ವಲಯ ಪಾಲಕ ಎನ್. ರವಿಕುಮಾರ್ ಮಾತನಾಡಿ, ನಿಸ್ವಾರ್ಥ ಭಾವನೆಯಿಂದ ಸಂಘಟನೆಯಲ್ಲಿ ತೊಡಗಿದಲ್ಲಿ ನಿಜವಾಗಿಯೂ ಯಶಸ್ವಿ ಸಾಧ್ಯ. ಅದಕ್ಕೆ ವೇದಿಕೆಯಾಗಿ ರೋಟರಿ ಸಂಸ್ಥೆ ಇದ್ದು, ಸದುಪಯೋಗ ಮಾಡಿಕೊಳ್ಳುವಂತೆ ಕರೆ ನೀಡಿದರು.

ನಮ್ಮ ಹಿರಿಯರು ಸಮಾಜಮುಖೀ ಕಾರ್ಯ ಮಾಡುವುದನ್ನು ನೋಡಿ ಯುವಕರು ಹೆಚ್ಚಾಗಿ ರೋಟರಿ ಸಂಸ್ಥೆ ಸೇರುವ ಮೂಲಕ ಸಮಾಜ ಸೇವೆ ಮಾಡಲು ಮುಂದಾಗುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರೋಟರಿ ಸಂಸ್ಥೆ ವತಿಯಿಂದ ಹಿರಿಯ ಜಾನಪದ ಕಲಾವಿದ ಪಾರ್ಥಸಾರಥಿ ಅವರಿಗೆ ಜಾನಪದ ಗಾರುಡಿಗ ಎಂಬ ಬಿರುದು ನೀಡಿ ಸನ್ಮಾನಿಸಿ ಗೌರವಿಸಲಾಯಿತು. ರೋಟರಿ ಸಂಸ್ಥೆಯ ಅಧ್ಯಕ್ಷ ಶಿವಣ್ಣ, ಕಾರ್ಯದರ್ಶಿ ನಂದನ್ ರಾವ್, ಸೇರಿದಂತೆ ಹಲವರು ಇದ್ದರು.

# ಅನುಚಿತವಾಗಿ ವರ್ತಿಸುವುದು ಅಪರಾಧ: ಎ.ನಾರಾಯಣಸ್ವಾಮಿ

**ಶಿಡ್ಲಘಟ್ಟ:** ಅಕ್ಕ ಪಕ್ಕದಲ್ಲಾಗಲಿ, ಯಾರೇ ಆಗಲಿ ಅನುಚಿತವಾಗಿ ವರ್ತಿಸಬಾರದು, ಅಪ್ರಾಪ್ತ ಮಕ್ಕಳ ಬಳಿ ಮನೆಯವರಾಗಲಿ, ಶಾಲೆಗಳಲ್ಲಾಗಲಿ, ಲೈಂಗಿಕ ಕೃತ್ಯವನ್ನು ನಡೆಸುವ ದೃಷ್ಟಿಯಿಂದ ನಡೆದುಕೊಳ್ಳುವುದು ಕಾನೂನು ಪ್ರಕಾರ ಅಪರಾಧವಾಗಿದೆ ಎಂದು ವಕೀಲರ ಸಂಘದ ತಾಲ್ಲೂಕು ಅಧ್ಯಕ್ಷ ಎ.ನಾರಾಯಣಸ್ವಾಮಿ ತಿಳಿಸಿದ್ದಾರೆ.

ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ನಗರದ ಶಾರದಾ ವಿದ್ಯಾಸಂಸ್ಥೆಯಲ್ಲಿ ಪೋಕ್ಸೋ ಕಾಯಿದೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಹದಿ ಹರೆಯದೊಳಗಿನ ಅಪ್ರಾಪ್ತ ಮಕ್ಕಳಿಗೆ ಮನೆ ಮತ್ತು ಶಾಲೆಗಳಲ್ಲಿ ಗುಡ್ ಟಚ್ ಮತ್ತು ಬ್ಯಾಡ್ ಟಚ್ ಬಗ್ಗೆ ತಿಳುವಳಿಕೆ ಮೂಡಿಸುವ ಕೆಲಸ ಕಡ್ಡಾಯವಾಗಿ ಆಗಬೇಕು ಎಂದರು.

ಸಾಮಾನ್ಯವಾಗಿ ಲೈಂಗಿಕ ಕೃತ್ಯಗಳು ನಡೆಯುವುದು ಪರಿಚಿತರಿಂದಲೆ ಎಂಬುದು ಅನೇಕ ಪ್ರಕರಣಗಳಲ್ಲಿ ಸಾಭೀತಾಗಿದೆ. ಹಾಗಾಗಿ ಮಕ್ಕಳಿಗೆ ಗುಡ್ ಟಚ್ ಮತ್ತು ಬ್ಯಾಡ್ ಟಚ್ ಬಗ್ಗೆ ಅರಿವು ಮೂಡಿಸಿದಾಗ ಒಂದು ವೇಳೆ ಅಂತಹ ಪರಿಸ್ಥಿತಿ ಎದುರಾದಾಗ ಮಕ್ಕಳು ತಮ್ಮ ತಾಯಿ ಬಳಿ ಎಲ್ಲವನ್ನೂ ಮುಕ್ತವಾಗಿ ಹೇಳಿಕೊಳ್ಳುವಂತಾಗಬೇಕು, ಇದರಿಂದ ಇಂತಹ ಕೃತ್ಯಗಳನ್ನು ತಡೆಯಬಹುದಾಗಿದೆ ಎಂದು ಹೇಳಿದರು.

ಎಲ್ಲಾರೂ ಪೋಕ್ಸೋ ಕಾಯಿದೆ ಕುರಿತು ತಿಳಿದುಕೊಂಡು ಅಂತಹ ಕೃತ್ಯಗಳು ನಡೆಯದಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಪ್ರಾಮಾಣಿಕವಾಗಿ ನಡೆದುಕೊಳ್ಳಬೇಕೆಂದರು.



ಶ್ರೀಶಾರದಾ, ಶ್ರೀಸರಸ್ವತಿ ಕಾನ್ವೆಂಟ್ ಹಾಗೂ ಕೋಟೆಯ ಸರಕಾರಿ ಬಾಲಕಿಯ ಶಾಲೆಯಲ್ಲಿ ಪೋಕ್ಸೋ ಕಾಯಿದೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ನಡೆಸಲಾಯಿತು.

ಈ ಸಂದರ್ಭದಲ್ಲಿ ಬಿಇಒ ನರೇಂದ್ರಕುಮಾರ್, ವಕೀಲರ ಸಂಘದ ಕಾರ್ಯದರ್ಶಿ ಸಿ.ಜಿ.ಭಾಸ್ಕರ್, ಬಿಆರ್‌ಪಿ ಮಂಜುನಾಥ್, ಶಾರದಾ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಎ.ಎಂ.ಶ್ರೀಕಾಂತ್, ಎ.ಆರ್.ಎಂ.ಪಿಯು ಕಾಲೇಜಿನ ಪ್ರಿನ್ಸಿಪಾಲ್ ಮೂರ್ತಿ ಕೆ.ಸಾಮ್ರಾಟ್, ಸರಸ್ವತಿ ಶಾಲೆಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಶ್ರೀಕಾಂತ್, ಕೋಟೆ ಬಾಲಕಿರ ಶಾಲೆಯ ಮುಖ್ಯ ಶಿಕ್ಷಕರಾದ ಮೋಹನ್, ವಕೀಲರಾದ ಬಿ.ಕೆ. ವೆಂಕಟೇಶ್, ಕೆಂಪೇಗೌಡ, ರಾಮಕೃಷ್ಣ, ಸಿ.ಆರ್.ಪಿ.ಬಾಬು, ವೀಣಾ,ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಜಮೀನು ಕಬಳಿಸಲು ಯತ್ನ: ಸರ್ಕಾರದ ವಿರುದ್ಧ ಉಗ್ರ ಹೋರಾಟದ ಎಚ್ಚರಿಕೆ



**ದೇವನಹಳ್ಳಿ:** ತಾಲ್ಲೂಕಿನ ಮಲ್ಲೇಪುರ ಗ್ರಾಮದಲ್ಲಿ ಮೂವತ್ತು ವರ್ಷಗಳಿಂದ ಭೂಸ್ವಾದೀನದಲ್ಲಿದ್ದ ಗ್ರಾಮಸ್ಥರ ಜಮೀನನ್ನು ಕಬಳಿಸಲು ಬಲಾಢ್ಯರ ಯತ್ನಿಸುತ್ತಿದ್ದಾರೆ. ನಕಲಿ ದಾಖಲೆ ಸೃಷ್ಟಿಸಿ ಕೋಟಿ ಕೋಟಿ ಬೆಲೆ ಬಾಳುವ ಜಮೀನು ನುಂಗಲು ಮುಂದಾಗಿದ್ದಾರೆ ಎಂದು ಅಂಬೇಡ್ಕರ್ ಸೇವಾ ಸಮಿತಿಯ ರಾಜ್ಯ ಅಧ್ಯಕ್ಷ ಸಂದೇಶ್ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ಮಲ್ಲೇಪುರ ಗ್ರಾಮದಲ್ಲಿ ನಡೆದ ಗೋಮಾಳ ಜಮೀನಿಗಾಗಿ ಗ್ರಾಮಸ್ಥರು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ವೆ ನಂಬರ್ 50 /ಪಿ1 ,16 ಎಕರೆ 34 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಅಕ್ರಮವಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ಅಲ್ಲಿನ ಮೂಲ ನಿವಾಸಿಗಳು ಬದುಕು ಕಟ್ಟಿಕೊಂಡಿದ್ದ ಪ್ರದೇಶ ಈಗ ಬೆಲೆ ಜಾಸ್ತಿಯಾಗಿದೆ ಎಂಬ ಕಾರಣಕ್ಕೆ ಅಧಿಕಾರಿಗಳೊಂದಿಗೆ ಶಾಮಿಲ್ ಆಗಿ ಕೆಲವು ವ್ಯಕ್ತಿಗಳ ಹೆಸರಿಗೆ ಮಾಡಿರುವುದು ಅಕ್ಷೇಪಾರ್ಹ 16.34 ಗುಂಟೆ ಜಮೀನಿನ ಅಕ್ರಮ ದಾಖಲೆ ಸೃಷ್ಟಿ ಮಾಡಿರುವುದು ವಜಾ ಮಾಡುವಂತೆ ಆಗ್ರಹಿಸಿದರು.

ಗ್ರಾಮಸ್ಥರಾದ ರಾಮಾಂಜಿನಪ್ಪ ಮಾತನಾಡಿ, ಬಲಾಢ್ಯರು ಮತ್ತು ಅಧಿಕಾರಿಗಳು ಒಗ್ಗೂಡಿ ಹದಿನಾರು ಎಕರೆ ಮೂವತ್ತ ನಾಲ್ಕು ಗುಂಟೆ ಜಾಗವನ್ನು ಲಪಾಟಯಿಸಲು ಕಾನೂನಿಗೆ ವಿರುದ್ಧವಾದ ಹಾದಿಯನ್ನು ಬಳಸುತ್ತಿದ್ದಾರೆ ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಚಿವರು ಗಮನಹರಿಸಿ ಗ್ರಾಮದ ಭೂಸ್ವಾಧೀನದಲ್ಲಿರುವವರಿಗೆ ನ್ಯಾಯ ಒದಗಿಸಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟವನ್ನು ಮಾಡಲಾಗುವುದು ಎಂದು ಎಚ್ಚರಿಸಿದರು.

ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕದಿರಪ್ಪ ಮಾತನಾಡಿ, ಮೂವತ್ತು ವರ್ಷಗಳಿಂದ ಜಮೀನಿನಲ್ಲಿ ನೂರಹತ್ತು ಮನೆ ಕಟ್ಟಿಕೊಂಡು ವ್ಯವಸಾಯ ಮಾಡುತ್ತಿದ್ದ ಗ್ರಾಮಸ್ಥರಿಗೆ ಅನ್ಯಾಯವಾಗುತ್ತಿದೆ,ಕೆಂಪೇಗೌಡ ಏರ್ಪೋರ್ಟ್ ನ ಕೂದಲೆಳೆಯ ಅಂತರದಲ್ಲಿರುವ ಮಲ್ಲೇಪುರ ಗ್ರಾಮದ ಕೋಟ್ಯಾಂತರ ಜಮೀನು ನುಂಗಲು ಬಲಾಢ್ಯರ ಕಣ್ಣು ಬಿದ್ದಿದೆ,ಸುಪ್ರೀಂ ಕೋರ್ಟ್ ನೈಜತೆಯನ್ನು ಪರಿಶೀಲನೆ ಮಾಡಿ ಅಂತ ಆದೇಶ ಕೊಟ್ಟರು ಜಿಲ್ಲಾಧಿಕಾರಿಗಳ ನಿರ್ಲಕ್ಷ ಮಾಡುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಪ್ರತಿಭಟನೆಯಲ್ಲಿ ಗ್ರಾಮಸ್ಥರಿಂದ ಭೂಗಳ್ಳರ ಹಾಗೂ ಅಧಿಕಾರಿಗಳ ವಿರುದ್ಧ ದಿಕ್ಕಾರದ ಘೋಷಣೆಗಳನ್ನು ಕೂಗುವುದರ ಮೂಲಕ ಗ್ರಾಮಸ್ಥರಿಗೆ ಜಮೀನು ಮಂಜೂರು ಮಾಡದಿದ್ದಲ್ಲಿ ಸರ್ಕಾರದ ವಿರುದ್ಧ ಉಗ್ರ ಹೋರಾಟದ ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ಮಲ್ಲೇಪುರ ಗ್ರಾಮಸ್ಥರಾದ ನಾರಾಯಣಸ್ವಾಮಿ, ಮುನಿರಾಜ ,ಮುನಿಶಾಮಪ್ಪ ಸೇರಿದಂತೆ ಭೂಸ್ವಾಧೀನದಲ್ಲಿರುವ ಗ್ರಾಮಸ್ಥರು ಭಾಗಿಯಾಗಿದ್ದರು.

## ಮಾರ್ಚ್ ಅಂತ್ಯಕ್ಕೆ ನಿವೇಶನ ನೀಡಲು ಗುರಿ: ಮುನಿಯಪ್ಪ



**ದೇವನಹಳ್ಳಿ:** ಬೇಸಿಗೆ ಆರಂಭವಾಗುತಿದ್ದು, ಜಿಲ್ಲಾಡಳಿತ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವಿಗೆ ಆದ್ಯತೆ ನೀಡಬೇಕು ಮತ್ತು ಜಾನುವಾರುಗಳಿಗೆ ಬೇಸಿಗೆಯಲ್ಲಿ ಬಾಧಿಸುವ ರೋಗಗಳನ್ನು ಸರಿಯಾಗಿ ಉಪಚರಿಸಬೇಕೆಂದು ಆಹಾರ ನಾಗರಿಕ ಸರಬರಾಜು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಕುಡಿಯುವ ನೀರು ಒದಗಿಸುವುದು ಮೊದಲ ಆದ್ಯತೆಯಾಗಿದ್ದು, ಈ ಸಂಬಂಧ ಅಧಿಕಾರಿಗಳು ಸಭೆ ನಡೆಸಬೇಕು. ಹಣದ ಕೊರತೆಯಿಲ್ಲ, ಜಿಲ್ಲಾಧಿಕಾರಿ ಗಳ ಖಾತೆಯಲ್ಲಿ ಸಾಕಷ್ಟು ಹಣವಿದ್ದು, ಬಳಸಿಕೊಳ್ಳಿ ಎಂದರು.

ಪೋಡಿ ಅಭಿಯಾನದಲ್ಲಿ ಜಿಲ್ಲೆ ಪ್ರಥಮ ಸ್ಥಾನದಲ್ಲಿದ್ದು, ಮುಂದಿನ ದಿನಗಳಲ್ಲೂ ಪ್ರಥಮ ಸ್ಥಾನ ಕಾಯ್ದುಕೊಳ್ಳುವುದರೊಂದಿಗೆ ರಾಜ್ಯದ ಮೊದಲ ಪೋಡಿಮುಕ್ತ ಜಿಲ್ಲೆಯಾಗುವಂತೆ ನೋಡಿಕೊಳ್ಳಬೇಕೆಂದರು. ಗ್ರಾಮೀಣ ರಸ್ತೆಗಳು, ರೈತರ ಜಮೀನುಗಳಿಗೆ ರಸ್ತೆ, ಸ್ಮಶಾನದ ರಸ್ತೆಗಳ ಒದಗಿಸುವ ಸಂಬಂಧ ವಾರದಲ್ಲಿ ಒಂದು ದಿನ ಅಥವ ಒಂದು ಮಧ್ಯಾಹ್ನ ಈ ಬಗೆಗೆ ಅಧಿಕಾರಿಗಳ ಸಭೆಯಾಗಬೇಕು ಎಂದರು.

ಜಿಲ್ಲೆಯ ಹಲವು ಕೆರೆಗಳಲ್ಲಿ ಮಳೆಯಿಲ್ಲದ ಕಾರಣ ಮರ ಗಿಡಗಳು ಬೆಳೆದಿದ್ದು ಅವುಗಳ ತೆರವುಗೊಳಿಸಬೇಕು, ಹೂಳು ತುಂಬಿರುವ ಕೆರೆಗಳ ಹೂಳು ತೆಗೆಯುವ ಕಾರ್ಯವಾಗಬೇಕು ಎಂದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷವಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ನಿವೇಶನ ರಹಿತರಿಗೆ ಮಾರ್ಚ್ ಅಂತ್ಯದೊಳಗಾಗಿ ಗರಿಷ್ಟ ಪ್ರಮಾಣದ ನಿವೇಶನಗಳನ್ನು ಹಂಚಿಕೆ ಮಾಡಲು ಅಧಿಕಾರಿಗಳು ಕಾರ್ಯೋನ್ಮುಖರಾಗಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲೆಯಲ್ಲಿ 20 ಸಾವಿರದಷ್ಟು ವಸತಿ ರಹಿತರು ನಿವೇಶನಗಳಿಗೆ ಅರ್ಜಿ ಸಲ್ಲಿಸಿದ್ದು, ಆದ್ಯತೆಯ ಮೇರೆಗೆ ನಿವೇಶನ ಹಂಚಲು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಎ.ಬಿ.ಬಸವರಾಜು, ಸಿಇಓ ಕೆ.ಅನುರಾಧ, ಎಡಿಸಿ ಹೆಚ್.ಅಮರೇಶ್ ಜಿಲ್ಲಾಮಟ್ಟದ ಅಧಿಕಾರಿಗಳಿದ್ದರು.

## ಅಧ್ಯಕ್ಷರಾಗಿ ಮಹದೇವ ಆಯ್ಕೆ

**ಹನೂರು:** ಪ್ರಕಾಶ್ ಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮಹದೇವ್ ನಾಯಕ, ಉಪಾಧ್ಯಕ್ಷರಾಗಿ ಚಂದ್ರ ಶೇಖರ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕೊಳ್ಳೇಗಾಲ ತಾಲೂಕಿನ ಪ್ರಕಾಶ್ ಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘದ ತೆರವಾಗಿದ್ದ ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಕ್ಕೆ ಚುನಾವಣೆ ನಡೆದಿದ್ದು ಚುನಾವಣೆ ಅಧಿಕಾರಿಯಾಗಿ ನಾಗೇಶ್ ಅವರು ಚುನಾವಣಾ ಪ್ರಕ್ರಿಯೆ ನಡೆಸಿದರು.

ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಒಟ್ಟು ಒಂಬತ್ತು ಸದಸ್ಯರು ಇದ್ದು ಇವರಲ್ಲಿ ಅಧ್ಯಕ್ಷರಾಗಿ ಅರಸರ ದೊಡ್ಡಿ ಮಹದೇವ್ ನಾಯಕ, ಉಪಾಧ್ಯಕ್ಷರಾಗಿ ಚಂದ್ರ ಶೇಖರ್ ಅವರು ಎಲ್ಲಾ ಸದಸ್ಯರ ಸಹಮತದೊಂದಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇದೇ ವೇಳೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಮಹದೇವ ನಾಯಕ ಅವರು ಮಾತನಾಡಿ ಹಾಲು ಉತ್ಪಾದಕರ ಸಂಘದ ಎಲ್ಲಾ ಸದಸ್ಯರ ಸಹಕಾರ ಸಹಮತದೊಂದಿಗೆ ಇಂದು ನನ್ನನ್ನುಅಧ್ಯಕ್ಷರ ಸ್ಥಾನಕ್ಕೆ ಆಯ್ಕೆ ಮಾಡಿದ್ದಾರೆ ಧನ್ಯವಾದಗಳು ತಿಳಿಸುತ್ತೇನೆ. ಸಂಘದ ಸರ್ವ ಸದಸ್ಯರ ಹಾಗೂ ಉತ್ಪಾದಕರ ಸಹಕಾರದಿಂದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಚುನಾವಣೆ ಅಧಿಕಾರಿಯಾಗಿ ನಾಗೇಶ್, ಸಹಾಯಕ ಅಧಿಕಾರಿ ಪುಷ್ಪ, ಹಾಲು ನಿರ್ದೇಶಕರು ನಟರಾಜು, ರಮೇಶ್, ಆರ್ಕುಟ್ಟಿ ಗೌಂಡರ್, ಮಲ್ಲೇಶ್, ವಿಮಲಾ ಜಾನ್ಸಿ, ಪ್ರಕಾಶ್ ಮೇರಿ, ಅಂತೋಣಿ ಹಾಗೂ ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ದಿನೇಶ್, ಹಾಲು ಪರೀಕ್ಷಕ ನಂದೀಶ್, ಸಹಾಯಕ ನಿಂಗರಾಜು ಸೇರಿದಂತೆ ಇನ್ನಿತರರು ಹಾಜರಿದ್ದರು.



# ವಿದ್ಯಾರ್ಥಿಗಳು ಪುಸ್ತಕಗಳನ್ನು ಓದುವುದರಿಂದ ಹೆಚ್ಚು ಅಂಕ ಪಡೆಯಲು ಸಾಧ್ಯ

**ಮುಳಬಾಗಿಲು:** ವಿದ್ಯಾರ್ಥಿಗಳು ಪುಸ್ತಕಗಳನ್ನು ಓದುವುದರಿಂದ ಹೆಚ್ಚು ಅಂಕಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ದಿವಂಗತ ಚಿತ್ರ ನಟಿ ಸೌಂದರ್ಯರವರ ಪತಿ ಹಾಗೂ ಉದ್ಯಮಿ ಜಿಎಸ್ ರಘು ಹೇಳಿದ್ದಾರೆ.

ಗಂಜಿಗುಂಟೆ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪರಂ ಪೌಂಡೇಶನ್ ಬೆಂಗಳೂರು ಏರ್ಪಡಿಸಿದ್ದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳಿಗೆ ವಿಜ್ಞಾನದ ಬಗ್ಗೆ ಅರಿವನ್ನು ಮೂಡಿಸಲು ಈ ದಿನ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಇದನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಪುಸ್ತಕಗಳನ್ನು ಓದುವುದರಿಂದ ಮತ್ತು ಮಾಡಿ ಕಲಿಯುವುದರಿಂದ ನಿಮ್ಮ ಶಿಕ್ಷಣ ಉತ್ತಮಗೊಳ್ಳುತ್ತದೆ ನೀವು ಉತ್ತಮವಾಗಿ ಓದಿ ಉತ್ತಮ ನಾಗರೀಕರಾದರೆ ಅದು ತಾವು ನೀಡಿ ಶಿಕ್ಷಕರಿಗೆ ನೀಡುವ ಗೌರವವಾಗಿರುತ್ತದೆ ಎಂದರು. ಈ ವಸ್ತು ಪ್ರದರ್ಶನದನ್ನು ವಿದ್ಯಾರ್ಥಿಗಳು ಚೆನ್ನಾಗಿ ವೀಕ್ಷಿಸಿ ಪ್ರಬಂಧವನ್ನು ಬರೆದವರಿಗೆ ಬಹುಮಾನಗಳನ್ನು ನೀಡಲಾಗುವುದು ಎಂದು ತಿಳಿಸಿದರು ಹಾಗೂ ಎಸ್ ಎಸ್ ಎಲ್ ಸಿ ಯಲ್ಲಿ ಉತ್ತಮ ಫಲಿತಾಂಶವನ್ನು ಪಡೆಯಲು ವಿದ್ಯಾರ್ಥಿಗಳಿಗೆ ನನ್ನಿಂದಾಗುವ ಸಹಕಾರವನ್ನು ನೀಡುತ್ತೇನೆ ಎಂದು ತಿಳಿಸಿದರು. ಬಿ.ಇ.ಓ ಕೆ. ಎನ್. ರಾಮಚಂದ್ರ ಮಾತನಾಡಿ ಎಸ್ ಎಸ್ ಎಲ್ ಸಿ ಯಲ್ಲಿ ಈ ವರ್ಷ ಉತ್ತಮ ಫಲಿತಾಂಶವನ್ನು ಪಡೆಯುವುದು ನಮ್ಮ ಪ್ರಮುಖ ಗುರಿಯಾಗಿದೆ ಸೌಂದರ್ಯ ರವರ ಪತಿ ಸರ್ಕಾರಿ ಶಾಲೆಗಳಿಗೆ ಇಂತಹ ಕಾರ್ಯಕ್ರಮಗಳನ್ನು ಮಾಡುತ್ತಿರುವುದು ಬಹಳ ಉಪಯೋಗಕರವಾಗಿದೆ ಮತ್ತು ಹೆಮ್ಮೆಯ ವಿಷಯವಾಗಿದೆ ಪ್ರತಿಯೊಬ್ಬ ವಿದ್ಯಾರ್ಥಿಯು ಇಂದಿಗೂ ಕೆಲವು ಹಳ್ಳಿಗಳಲ್ಲಿ ಮೂಢನಂಬಿಕೆಗಳು ಹೆಚ್ಚಾಗಿದೆ ಅದರಿಂದ ನಾವು ದೂರವಿರಲು ಮುಖ್ಯವಾಗಿ ವಿಜ್ಞಾನದ ಅರಿವು ನಮಗಿರಬೇಕು, ನಮ್ಮ ತಾಲೂಕಿನ ಶಿಕ್ಷಕರ ಸಂಘಟನೆಗಳು ಇಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವುದು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುತ್ತಿದೆ, ನಾನು ಸಹ ಸಂಘಟನೆಯಲ್ಲಿ ಕೆಲಸ ಮಾಡಿ ಬಂದವನು ಹಾಗೂ ವಿಜ್ಞಾನ ಶಿಕ್ಷಕನಾಗಿ ಸುಮಾರು ವರ್ಷ ಸೇವೆ ಮಾಡಿರುತ್ತೇನೆ ಉದಾಹರಣೆಗೆ ಹೇಳಿದಾಗ ಜಾತೀಯತೆಯು ಒಂದು ಮೂಢನಂಬಿಕೆಯಾಗಿದೆ ಉತ್ತಮ ನಾಗರಿಕನಾಗಿರುವನು ಯಾವುದೇ ಜಾತಿ



ಮತವನ್ನು ನಂಬುವುದಿಲ್ಲ ವಿಜ್ಞಾನವನ್ನು ಪ್ರೀತಿಸೋಣ, ವಿಜ್ಞಾನ ದಿಂದ ಉತ್ತಮ ಜೀವನ ನಡೆಸಲು ಸಾಧ್ಯವಾಗುತ್ತದೆ ವಿದ್ಯಾರ್ಥಿಗಳು ಈ ವಸ್ತು ಪ್ರದರ್ಶನದ ಸದುಪಯೋಗ ಪಡೆದುಕೊಂಡು ಮತ್ತೊಂದು ದಿನ ನೀವು ವಿಜ್ಞಾನಿಗಳಾಗಿ ದೇಶಕ್ಕೆ ಕೊಡುಗೆ ನೀಡಬೇಕು ಎಂದರು. ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಚ್ ವೆಂಕಟಗಿರಿಯಪ್ಪ ಮಾತನಾಡಿ ವಿದ್ಯಾರ್ಥಿಗಳು ಪ್ರಾಥಮಿಕ ಶಿಕ್ಷಣದ ಹಂತದಿಂದಲೇ ವಿಜ್ಞಾನದ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು ದಿವಂಗತ ಸೌಂದರ್ಯ ರವರ ಪತಿ ರಘು ರವರು ವಿಜ್ಞಾನ ಕಾರ್ಯಕ್ರಮಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು , ಆರೋಗ್ಯದ ಬಗ್ಗೆ ಸರ್ಕಾರಿ ಶಾಲೆಗಳಿಗೆ ಉಚಿತವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ವಿದ್ಯಾರ್ಥಿಗಳ ಕಲಿಕೆಗೆ ಸಹಕಾರಿಯಾಗಿದೆ ವಿಜ್ಞಾನ ಮತ್ತು ಗಣಿತವನ್ನು ಕಲಿಯುವಾಗ ಸುಲಭದಿಂದ ಕಠಿಣತೆ ಕಡೆಗೆ ಬೋಧನೆ ಮಾಡಿದಾಗ ವಿಜ್ಞಾನ ಬೋಧಿಸಿದಾಗ ವಿಜ್ಞಾನವು ಸುಲಭವಾಗಿ ಅರ್ಥವಾಗುತ್ತದೆ ಮತ್ತು ತಂತ್ರಜ್ಞಾನದಿಂದ ಹಳ್ಳಿಗಳ ಮತ್ತು ದೇಶದ ಪ್ರಗತಿ ಸಾಧ್ಯ ಎಂದರು ಪರಂಪೌಂಡೇಶನ್ ಇಂದ ಗಾಳಿ ಯಂತ್ರ ಎಲೆಕ್ಟ್ರಾನ್ ಟ್ಯಾನೋಗ್ರಾಮ್ಸ್ ಡಿಜಿಟಲ್ ರಂಗೋಲಿ, ಕೃತಕ ಬುದ್ಧಿ ಮತ್ತೆ ಪರೀಕ್ಷೆ, ಮುಂತಾದ ವಿಜ್ಞಾನ ವಸ್ತು ಪ್ರದರ್ಶನವನ್ನು ಮಕ್ಕಳ ವೀಕ್ಷಿಸಿದರು ಮತ್ತು ಪರಂ ಸಂಸ್ಥೆ ನೌಕರರು ಮಾಹಿತಿಯನ್ನು ಮಕ್ಕಳಿಗೆ ನೀಡಿದರು. ರಘು ರವರ ಸ್ನೇಹಿತ ಕುಮಾರ್ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಸುಬ್ರಮಣ್ಯಂ, ಉಪಾಧ್ಯಕ್ಷ ಭಾಸ್ಕರ್ ರೆಡ್ಡಿ, ಜಿಲ್ಲಾ ಉಪಾಧ್ಯಕ್ಷರಾದ ಓಬಳ ರೆಡ್ಡಿ, ರಾಧಾಕೃಷ್ಣ, ಇಸಿಓ ಗಳಾದ ಕಾರ್ತಿಕ್, ಗುರುರಾಜ್, ಮಮತಾ, ದೈಹಿಕ ಶಿಕ್ಷಣ ಸಂಯೋಜಕ ರಹಿಂ ಶರೀಫ್, ಶಾಲೆಯ ಮುಖ್ಯ ಶಿಕ್ಷಕಿ ರೆಡ್ಡಮ್ಮ, ಪರಂ ಪೌಂಡೇಶನ್ ನೌಕರರಾದ ಧನುಷ್, ಕಿಶನ್, ಅಭಿಷೇಕ್, ಅನಿರುದ್ಧ, ಶಿಕ್ಷಕರಾದ ಅಶೋಕ್ ,ಚಂದ್ರಶೇಖರ್, ಸುಬ್ರಮಣಿ, ರಂಗಸ್ವಾಮಿ ಗೀತಾ, ವಿ.ಎಸ್. ರಾಜಣ್ಣ , ಪ್ರಭಾವತಿ, ನಾರಾಯಣಸ್ವಾಮಿ ಮತ್ತು ವಿದ್ಯಾರ್ಥಿಗಳು ಪೋಷಕರು ಇದ್ದರು

# ಅರ್ಚಕ ವೃತ್ತಿ ಅತ್ಯಂತ ಪವಿತ್ರವಾದುದು: ವೆಂಕಟಾಚಲಯ್ಯ



**ಮಾಗಡಿ:** ಅರ್ಚಕ ವೃತ್ತಿ ಅತ್ಯಂತ ಪವಿತ್ರವಾದುದು, ತ್ಯಾಗಮಯಿಗಳು, ನಿತ್ಯ ಭಗವಂತನ ಸ್ಮರಣೆಯಿಂದ ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸುತ್ತಾರೆ ಎಂದು ರಾಜ್ಯ ಅರ್ಚಕರ ಸಂಘದ ವೆಂಕಟಾಚಲಯ್ಯ ತಿಳಿಸಿದರು.

ಪಟ್ಟಣದ ಸೋಮೇಶ್ವರ ಬಡಾವಣೆಯಲ್ಲಿನ ಶ್ರೀಮಾತಾ ಪಾರ್ಟಿ ಹಾಲ್‌ನಲ್ಲಿ ನಡೆದ ಅರ್ಚಕರ ಸಂಘದ ವಾರ್ಷಿಕೋತ್ಸವ ಮತ್ತು ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅರ್ಚಕರು ವೇದ, ಉಪನಿಷತ್ತುಗಳನ್ನು ಪಠಿಸಬೇಕು. ದೇವರ ಪೂಜೆ,ಪುರಸ್ಕಾರಗಳನ್ನು ಸಲ್ಲಿಸುವಾಗ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಜತೆಗೆ ಅತ್ಯಂತ ಶ್ರದ್ಧೆ,ಭಕ್ತಿ ಭಾವದಿಂದ ಪೂಜಿಸುವಂತ ಕಾರ್ಯಗಳು ನಡೆಯಬೇಕಿದೆ. ರಾಜ್ಯದಲ್ಲಿ 2340 ಮುಜರಾಯಿ ದೇವಸ್ಥಾನಗಳಿವೆ. ದೀಪಾರಾಧನೆಗೆ ಇದ್ದ 500 ರೂ ಈಗ 5 ಸಾವಿರಕ್ಕೆ ಏರಿಕೆಯಾಗಿದೆ. ಇದನ್ನು ಈವರ್ಷದಿಂದ ಪ್ರತಿತಿಂಗಳು 6 ಸಾವಿರಕ್ಕೆ ಹೆಚ್ಚಿಸಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದ್ದೇವೆ.

ಸೌಲತ್ತುಗಾಗಿ ಸಂಘಟಿತರಾಗಬೇಕು ; ಅರ್ಚಕ ವೃತ್ತಿ ಮಾಡುತ್ತಿರುವ ಜನರಿಗೆ ಸರ್ಕಾರ ಅನೇಕ ಸೌಲತ್ತುಗಳು ಒದಗಿಸುತ್ತದೆ. ಆದರೆ ಸಂಘಟನೆ ಕೊರತೆಯಿಂದ ಸೌಲತ್ತಿನಿಂದ ವಂಚಿತರಾಗುತ್ತಿದ್ದೇವೆ. ಹೀಗಾಗಿ ಅರ್ಚಕರೆಲ್ಲರೂ ಒಂದೇ ಎಂಬ ಭಾವನೆಯಿಂದ ಸಂಘಟನಾಶಕ್ತಿಯಿಂದ ಬೆಳಸಿಕೊಂಡರೆ ನಮ್ಮ ಶಕ್ತಿಯೂ ಹೆಚ್ಚಾಗುತ್ತದೆ. ಸರ್ಕಾರಕ್ಕೆ ನಮ್ಮ ಶಕ್ತಿಯನ್ನು ತೋರಿಸುವ ಮೂಲಕ ಧ್ವನಿ ಎತ್ತಿ ಸೌಲತ್ತುಗಳನ್ನು ಪಡೆದುಕೊಳ್ಳೋಣ ಎಂದರು.

ತಾಲೂಕು ಅರ್ಚಕರ ಸಂಘದ ಅಧ್ಯಕ್ಷ ವಿ.ಕೃಷ್ಣಯ್ಯ ಮಾತನಾಡಿ, ಅರ್ಚಕ ಸಂಘಟನೆಯೇ ಬಹುದೊಡ್ಡ ಶಕ್ತಿಯಾಗಿ ಹೊರಹೊಮ್ಮಬೇಕು. ಈಗಾಗಲೇ ಅರ್ಚಕರು ಲಕ್ಷಾಂತರ ಎಕರೆ ಭೂಮಿಯನ್ನು ಕಳೆದುಕೊಂಡು ಬಡತನದ ಬೇಗೆಯಲ್ಲಿ ಬದುಕು ಕಟ್ಟಿಕೊಳ್ಳುತ್ತಿದ್ದಾರೆ. ಇನ್ನಾದರೂ ಎಚ್ಚೆತ್ತು. ಎಷ್ಟೇ ಕಷ್ಟಬಂದರೂ ಸಹ ಇರುವ ಭೂಮಿಯನ್ನು ಮಾರಾಟ ಮಾಡಬಾರದು. ಭೂತಾಯಿಯನ್ನು ನಂಬಿದರೆ ಎಂದೆಂದೂ ಕೈಬಿಡುವುದಿಲ್ಲ, ಸಮ್ಮಿಶ್ರ ಸರ್ಕಾರದಲ್ಲಿ ಎಚ್ಡಿಕೆ ಸಿಎಂ ಆಗಿದ್ದಾಗ ಹೆಚ್ಚುವರಿಯಾಗಿ ತಸ್ತಿಕ್ ಹಣ 500 ಕ್ಕೆ ಏರಿಸಿ 1 ಸಾವಿರ ರೂ ಮಾಡಿದರು. ಬಿಎಸ್ವೈ ಸಿಎಂ ಆಗಿದ್ದಾಗ ಮತ್ತೆ 500 ರೂ ಏರಿಕೆ ಮಡಲಾಯಿತು. ಗೌರವಧನ ಹೆಚ್ಚಿಗೆ ಮಾಡಬೇಕಿದ್ದು, ಇದಕ್ಕಾಗಿ ಸಂಘ, ಸಂಘಟನೆ ಅನಿವಾರ್ಯವಾಗಿದೆ. ಸರ್ಕಾರ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಿದಂತೆ ಅರ್ಚಕರಿಗೂ ಗೌರವಧನ ಕೊಡಬೇಕು. ಸರ್ಕಾರ ಪ್ರಸ್ತುತ ಸಾಲಿನ ಬಜೆನಲ್ಲಿ ತಸ್ತಿಕ್ ಹಣವನ್ನು 6 ಸಾವಿರಕ್ಕೆ ಹೆಚ್ಚಿಸಬೇಕು. ಸರ್ಕಾರಕ್ಕೆ ಮನವಿ ಸಹ ಮಾಡಿಕೊಂಡಿದ್ದು, ನಾವೂ ಕೂಡ ನಿರೀಕ್ಷಣೆಯಲ್ಲಿದ್ದೇವೆ. ಸರ್ಕಾರದಲ್ಲಿರುವ ಜನಪ್ರತಿನಿಧಿಗಳು ಅರ್ಚಕರ ಪರವಾಗಿ ಕೆಲಸ ಮಾಡಬೇಕೆಂಬ ಮನಸ್ಸನ್ನು ಭಗವಂತ ಕುರುಣಿಸಿದ್ದಾನೆ ಎಂದ ಅವರು, ಅರ್ಚಕರು ಭಗವಂತನಿಗೆ ಶರಣಾಗಿ ಪೂಜೆ ಸಲ್ಲಿಸಿದರೆ ಸಾಕು. ಆ ಭಗವಂತನೇ ನಮ್ಮನ್ನು ಸದಾ ಕಾಯುತ್ತಾನೆ, ಕಾಪಾಡುತ್ತಾನೆ. ಕುಟುಂಬದ ರಕ್ಷಣೆಯನ್ನು ಸಹ ಮಾಡುತ್ತಾನೆ ಎಂದು ತಿಳಿಸಿದರು.

ಇದೇ ವೇಳೆ ಸಂಘದ ಪದಾಧಿಕಾರಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಹಿರಿಯ ಅರ್ಚಕರನ್ನು ನಿರ್ದೇಶಕರನ್ನು ಗೌರವಿಸಲಾಯಿತು.

ರಾಜೀನಾಮೆ ; ಕಳೆದ 30 ವರ್ಷಗಳಿಂದ ತಾಲೂಕು ಅರ್ಚಕರ ಸಂಘದ ಅಧ್ಯಕ್ಷರಾಗಿ ಉತ್ತಮಸೇವೆ ಸಲ್ಲಿಸಿ ಗೌರವಕ್ಕೆ ಪಾತ್ರರಾದ ವಿ.ಕೃಷ್ಣಯ್ಯ ಅವರು ತಮ್ಮ ರಾಜೀನಾಮೆ ಪತ್ರವನ್ನು ಸಂಘದ ಕಾರ್ಯದರ್ಶಿಗೆ ಅರ್ಪಿಸಿದರು. ರಾಜ್ಯ ಕಾರ್ಯದರ್ಶಿ ಗೋಪಿನಾಥ್, ರಾಜ್ಯ ಸಂಘದ ನಿರ್ದೇಶಕ ಕೃಷ್ಣಮೂರ್ತಿ, ಖಜಾಂಚಿ ರಘುನಂದನ್, ಕುಣಿಗಲ್ ಅಧ್ಯಕ್ಷ ಎನ್. ಮೋಹನ್ ಕಾರ್ಯದರ್ಶಿ ಕೃಷ್ಣಮೂರ್ತಿ, ಕುಣಿಗಲ್ ಕೆಂಪಸಾಗರದ ಕೆ.ಎನ್. ಕೃಷ್ಣಮುರ್ತಿ, ಮೋಹನ್ ಕುಮಾರು, ಕುತ್ತಾರಹಳ್ಳಿ ಗೋಪಿ, ಖಜಾಂಚಿ ವಿಜಯಕುಮಾರ್, ನಿವೃತ್ತ ಸರ್ಜನ್ ರಮೇಶ್, ಮಾಗಡಿ ತಾಲೂಕು ಸಂಘದ ಉಪಾಧ್ಯಕ್ಷ ಗೋಪಾಲಯ್ಯ, ಖಜಾಂಚಿ ನಾಗರಾಜು, ಸುಗುಣೇಶ್, ಗೊವರ್ಧನ್, ಸಂಪತ್, ಎಸ್.ಆರ್.ರಂಗನಾರಾವ್, ಆರ್.ವಿನಯ್, ಬಸವರಾಜು, ಕಾಂತರಾಜು,ಪರಮಶಿವಯ್ಯ, ಡಿ.ರಾಮಸ್ವಾಮಿ ಇತರರು ಭಾಗವಹಿಸಿದ್ದರು. ಹೆಚ್ಚಿನ ಸಂಖ್ಯೆಯಲ್ಲಿ ಅರ್ಚಕರ ವೃಂದದವರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ದೊಂಬರಹಳ್ಳಿ:ಸಹಕಾರ ಸಂಘಕ್ಕೆ ಅಧ್ಯಕ್ಷರ ಆಯ್ಕೆ



**ಮಾಲೂರು:** ತಾಲ್ಲೂಕಿನ ದೊಂಬರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ರಾಮನ ಭೋವಿ 9 ಮತಗಳು ಪಡೆದು ಅಧ್ಯಕ್ಷರಾಗಿ ವಿಜಯಗಳಿಸಿದ್ದಾರೆ.

ತಾಲೂಕಿನ ದೊಂಬರಹಳ್ಳಿ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳಿಗೆ ಬುಧವಾರ ಚುನಾವಣೆ ನಿಗದಿಯಾಗಿದ್ದು ಅದರಂತೆ ಚುನಾವಣಾಧಿಕಾರಿ ವೀಣಾ ಅವರು ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳಿಗೆ ಉಮೇದುವಾರಿಕೆ ಸ್ವೀಕರಿಸಿದರು

ಅಧ್ಯಕ್ಷ ಸ್ಥಾನಕ್ಕೆ ರಾಮನ ಭೋವಿ ಹಾಗೂ ಲಕ್ಷ್ಮಮ್ಮ ನಾಮಪತ್ರಗಳನ್ನು ಸಲ್ಲಿಕೆ ಮಾಡಿದ್ದರು ನಂತರ ನಡೆದ ಚುನಾವಣೆಯಲ್ಲಿ ರಾಮನ ಭೋವಿ 9 ಮತಗಳು ಪಡೆದು ಅಧ್ಯಕ್ಷರಾಗಿ ಆಯ್ಕೆ ಆದರೆ ಲಕ್ಷ್ಮಮ್ಮ ಮೂರು ಮತಗಳು ಪಡೆದು ಪರಾಭವಗೊಂಡರು.

ಉಪಾಧ್ಯಕ್ಷ ಸ್ಥಾನಕ್ಕೆ ಪ್ರಭಾಕರ್ ಸಿಂಗ್ ಒಬ್ಬರೇ ನಾಮಪತ್ರ ಸಲ್ಲಿಕೆ ಮಾಡಿದ ಕಾರಣ ಉಪಾಧ್ಯಕ್ಷರಾಗಿ ಪ್ರಭಾಕರ್ ಸಿಂಗ್ ಅವಿರೋಧಕ ವಾಗಿ ಆಯ್ಕೆಯಾಗಿರುವದಾಗಿ ಚುನಾವಣಾ ಅಧಿಕಾರಿ ಘೋಷಿಸಿದರು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ರಾಮನ ಬೋವಿ ಮಾತನಾಡಿ, ಇಲ್ಲಿನ ಹಾಲು ಉತ್ಪಾದಕ ಸಹಕಾರ ಸಂಘದ ನಿರ್ದೇಶಕರ ಸಹಕಾರದಿಂದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಒಕ್ಕೂಟದಿಂದ ಹಾಲು ಉತ್ಪಾದಕರಿಗೆ ಬರುವ ಸೌಲತ್ತುಗಳನ್ನು ಒದಗಿಸುವುದರ ಜೊತೆಗೆ ಹೆಚ್ಚುವರಿ ಹಾಗೂ ಗುಣಮಟ್ಟದ ಹಾಲನ್ನು ಹಾಲು ಉತ್ಪಾದಕ ಸಹಕಾರ ಸಂಘಕ್ಕೆ ಪಡೆಯುವುದರ ಮೂಲಕ ಕಾಲಕಾಲಕ್ಕೆ ಬಟವಾಡೆ ಬೋನಸ್ ನೀಡಿ ಸಂಘವನ್ನು ಬಲಿಷ್ಠ ಗೊಳಿಸಲಾಗುವುದು ಮುಂಬರುವ ದಿನಗಳಲ್ಲಿ ಶಾಸಕ ಕೆ ವೈ ನಂಜೇಗೌಡ ಹಾಗೂ ಎಲ್ಲಾ ನಿರ್ದೇಶಕರ ಸಹಕಾರ ಪಡೆದು ಒಕ್ಕೂಟ ಹಾಗೂ ಕೆಎಂಎಫ್ ಹಾಗೂ ಸಂಘದ ಹಣವನ್ನು ಬಳಸಿಕೊಂಡು ಸುಸಜ್ಜಿತ ಕಟ್ಟಡ ನಿರ್ಮಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ನಿರ್ದೇಶಕರಾ ವಿಜಯ್ ಕುಮಾರ್ ಸಿಂಗ್, ದೇವರಾಜ್, ಗೋಪಾಲ್, ಕೆಂಪಣ್ಣ ರಾಜಣ್ಣ, ಮುನಿಸ್ವಾಮಿ, ಸುಶೀಲಮ್ಮ, ಮಮತ, ಲಕ್ಷ್ಮಮ್ಮ ಗ್ರಾ.ಪಂ.ಸದಸ್ಯ ವೆಂಕಟಸ್ವಾಮಿ ವಿಸ್ತರಣಾಧಿಕಾರಿ ಶಾಲಿನಿ ಮುಖಂಡರಾದ ರಾಜಣ್ಣ, ಶ್ರೀನಿವಾಸ್ , ಮಂಜುನಾಥ್ ರವೀಂದ್ರ, ಕಾರ್ಯದರ್ಶಿ ಪ್ರಕಾಶ್ ಇನ್ನಿತರರು ಹಾಜರಿದ್ದರು.

# ಗ್ರಾಮಗಳಲ್ಲಿ ಸಾಮರಸ್ಯ ಮತ್ತು ಐಕ್ಯತೆ ಸದಾಕಾಲ ಇರಬೇಕು




**ಮುಳಬಾಗಿಲು:** ಭಾರತೀಯ ಕಿಸಾನ್ ಸಂಘ ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಗ್ರಾಮ ಸಂಪರ್ಕ ಸಭೆಗಳು ಏರ್ಪಡಿಸಿಕೊಂಡು ಬರುತ್ತಿದ್ದು ವಿಶೇಷವಾಗಿ ಭಾರತ ಮಾತಾ ಪೂಜೆಯನ್ನು ಜ– 26 ರಿಂದ ಮಹಾಶಿವರಾತ್ರಿವರೆಗೂ ಗ್ರಾಮಗಳಲ್ಲಿ ಆಚರಿಸಿಕೊಂಡುಬರುತ್ತಾ ಸಾಮರಸ್ಯ ಮತ್ತು ಐಕ್ಯತೆ ಗ್ರಾಮಗಳಲ್ಲಿ ಸದಾಕಾಲ ಇರಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ಸಂಘ ನೀಡುತ್ತಿದೆ ಎಂದು ಬಿಕೆಎಸ್ ಜಿಲ್ಲಾ ಕೋಶಾಧ್ಯಕ್ಷ ವಕೀಲ ವಿ. ಜಯಪ್ಪ ಹೇಳಿದರು.

ತಾಲೂಕಿನ ತಾಯಲೂರು ಹೋಬಳಿ ತಿಮ್ಮರಾವುತನಹಳ್ಳಿ ಗ್ರಾಮದ ಹೊರವಲಯದ ಶ್ರೀ ಸಂಗಮೇಶ್ವರ ದೇವಾಲಯದಲ್ಲಿ ಗ್ರಾಮ ಸಮಿತಿ ವತಿಯಿಂದ ಇತ್ತೀಚಿಗೆ ಟಿ. ಆರ್. ಹಳ್ಳಿ ಗ್ರಾ. ಪಂ. ವ್ಯಾಪ್ತಿಯ ಕಿಸಾನ್ ಸಂಘದ ಪದಾಧಿಕಾರಿಗಳು ಮತ್ತು ಗ್ರಾಮಸ್ಥರ ಸಭೆಯಲ್ಲಿ ಭಾರತಮಾತಾ ಪೂಜೆ, ಗಂಗಾಮಾತ ಪೂಜೆ, ಗೋಮಾತಾ ಪೂಜೆ, ಹಾಗೂ ಭೂಮಾತ ಪೂಜೆ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಮ್ಮ ಪೂರ್ವಿಕರು ಸಂರಕ್ಷಿಸಿಕೊಂಡು ಬಂದಿದ್ದ ನೆಲ ಜಲ ಗೋವು ಆಧಾರಿತ ಕೃಷಿ ಸಂರಕ್ಷಣೆ ಮಾಡಿಕೊಳ್ಳುವ ಮೂಲಕ ಸ್ವಾವಲಂಬಿ ಕೃಷಿ, ಸಂಪತ್ತುಭರಿತ ಗ್ರಾಮ, ಸದೃಢ ರಾಷ್ಟ್ರ ನಿರ್ಮಾಣದ ಸಂಕಲ್ಪ ಪ್ರತಿಯೊಬ್ಬ ರೈತರಲ್ಲಿ ಇರಬೇಕೆಂದು ಹೇಳಿದರು.

ಕಿಸಾನ್ ಸಂಘದ ದಕ್ಷಿಣ ಪ್ರಾಂತ ಕಾರ್ಯಕಾರಿ ಸದಸ್ಯ ಎ. ಅಪ್ಪಾಜಿ ಗೌಡ ಮಾತನಾಡಿ, ರಾಷ್ಟ್ರಭಕ್ತಿ ಜೊತೆಗೆ ಭೂಮಿಯ ಮಣ್ಣಿನ ರಕ್ಷಣೆ, ಜಲ ಸಂರಕ್ಷಣೆ, ದೇಶಿಯ ಗೋವುಗಳು ಕೃಷಿಕನ ಬದುಕು ಹಸನಗೊಳ್ಳಲು ಪೂರಕವಾಗಿದೆ, ಕಡಿಮೆ ಖರ್ಚಿನ ಕೃಷಿ ಮಾಡುವಂತ ಕೌಶಲ್ಯ ಅಳವಡಿಸಿಕೊಳ್ಳಬೇಕು, ನಾಯಕತ್ವ ಕೃಷಿಕನರಾಗಬೇಕು, ಅದಕ್ಕಾಗಿ ವ್ಯಕ್ತಿ ನಿರ್ಮಾಣ ಗ್ರಾಮ ಗ್ರಾಮಗಳಲ್ಲಿ ವಿಸ್ತಾರವಾಗಬೇಕು, ಕುಟುಂಬ ವ್ಯವಸ್ಥೆ, ಪರಿಸರ ಸಂರಕ್ಷಣೆ, ಸಾಮರಸ್ಯ, ಸ್ವದೇಶಿ ಬಳಕೆ, ಜೊತೆಗೆ ಪ್ರತಿಯೊಬ್ಬರೂ ನಾಗರಿಕ ಶಿಷ್ಟಾಚಾರವನ್ನು ಸ್ವ ಪ್ರೇರಣೆಯಿಂದ ಅಳವಡಿಸಿಕೊಳ್ಳುವ ಮೂಲಕ ಸದಾಚಾರವನ್ನು ಪಾಲನೆ ಮಾಡುವ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾಗ ಮಾತ್ರ ಎಲ್ಲರ ಹಿತ ಬಯಸಲು ಸಾಧ್ಯ ಈ ನಿಟ್ಟಿನಲ್ಲಿ ಚಿಂತನೆಗಳು ನಮ್ಮಲ್ಲಿ ಆರಂಭಗೊಳ್ಳಬೇಕಾಗಿದೆ ನಂತರ ಅದನ್ನು ಪಾಲನೆ ಮಾಡುವ ಮೂಲಕ ಸದೃಢ ಸಮಾಜ ನಾವು ಇರುವ ಕಡೆ ಕಟ್ಟಲು ಸಾಧ್ಯವಾಗುತ್ತದೆ ಎಂದರು.

ಭಾರತ ಮಾತೆ, ಮುತ್ತಿಗೆ ( ಮಣ್ಣಿನ ) ಪೂಜೆ, ಗಂಗಾ( ಜಲ) ಪೂಜೆ ಮತ್ತು ದೇಶಿಯ ಗೋವುಗಳ ಪೂಜೆಯನ್ನು ದೇವಾಲಯದ ಅರ್ಚಕರಾದ ಎನ್. ಶ್ರೀಧರ್ ಶಾಸ್ತ್ರಿ, ಎನ್. ಮಂಜುನಾಥ್ ಶಾಸ್ತ್ರಿ ನೆರವೇರಿಸಿ ಪೂಜೆಯ ಮಹತ್ವವನ್ನು ವಿವರಿಸಿದ್ದರು.

ಬಿಕೆಎಸ್ ತಾಲೂಕು ಕಾರ್ಯದರ್ಶಿ ಏತ್ತೂರಹಳ್ಳಿ ಆರ್. ಸತೀಶ್ ಕುಮಾರ್, ಗ್ರಾಮ ಸಮಿತಿ ಸದಸ್ಯರಾದ ರಾಮಚಂದ್ರಪ್ಪ, ಕೋಗಿಲೇರು ಗೋಪಾಲಪ್ಪ, ದಿಲೀಪ್, ಕರಿವಿರೆಡ್ಡಿಹಳ್ಳಿ ರಾಜೇಶ್, ರಾಜೇಶ್ವರಮ್ಮ, ಟಿ. ಆರ್. ಹಳ್ಳಿ ಮಂಜುಳಮ್ಮ ಮತ್ತಿತರರು ಪಾಲ್ಗೊಂಡಿದ್ದರು.

# ಸಾರ್ವಜನಿಕ ನಿಂದನೆ ಮಾಡುವುದು ಮೂರ್ಖತನ

**ಕೆ.ಆರ್.ಪೇಟೆ.:** ಶಾಸಕ ಹೆಚ್.ಟಿ.ಮಂಜು ಬಗ್ಗೆ ಹಗುರವಾಗಿ ಮಾತನಾಡುತ್ತಿರುವ ಮನ್ಮುಲ್ ನಿರ್ದೇಶಕರಾದ ಡಾಲುರವಿ ಹಾಗೂ ಎಂ.ಬಿ.ಹರೀಶ್ ವಿರುದ್ದ ಜೆಡಿಎಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಟ್ಟಣದ ಪ್ರವಾಸಿಮಂದಿರದ ಆವರಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜೆಡಿಎಸ್ ತಾಲೂಕು ಅಧ್ಯಕ್ಷ ಜಾನಕೀರಾಮು, ಚುನಾವಣೆಯಲ್ಲಿ ಹಳೆಯ ದ್ವೇಷದ ಹಿನ್ನಲೆಯಲ್ಲಿ ಯಾವುದೇ ವ್ಯಕ್ತಿಯನ್ನು ಸಾರ್ವಜನಿಕ ನಿಂದನೆ ಮಾಡುವುದು ಮೂರ್ಖತನ. ಜೆಡಿಎಸ್, ಬಿಜೆಪಿ ಸಹಕಾರದಿಂದ ನೀವಿಬ್ಬರು ಗೆಲವು ಸಾಧಿಸಿದ್ದೀರಿ. ಮುಂದಿನ ದಿನಗಳಲ್ಲಿ ಶಾಸಕರನ್ನ ಹಾಗೂ ಜೆಡಿಎಸ್ ಕಾರ್ಯಕರ್ತರನ್ನ ನಿಂದಿಸಿದರೆ ಸುಮ್ಮನಿರುವುದಿಲ್ಲ. ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಜೆಡಿಎಸ್ ಮುಖಂಡ ಹುಲ್ಲೇಗೌಡ ಮಾತನಾಡಿ, ಶಾಸಕರ ಮೇಲೆ ಅಪಪ್ರಚಾರ ತರವಲ್ಲ. ಹಿಂದೆ ಡಾಲು ರವಿ, ಎಂ.ಬಿ.ಹರೀಶ್ ಜತೆ ಸ್ಪರ್ಧಿಸಲ್ಲ. ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿ ಹೇಳಿದರು. ಆದರೆ ರವಿ ಆರೀತಿ ಮಾಡದೇ ಮಾತಿಗೆ ತಪ್ಪಿ ಕಾಂಗ್ರೆಸ್ ಸರ್ಕಾರ ಇದೆ, ಜಿಲ್ಲಾ ಉಸ್ತುವಾರಿ ಸಚಿವ ಆಪ್ತರಾಗಿದ್ದಾರೆ. ಅಧಿಕಾರದ ದುರಾಸೆಗಾಗಿ ಈ ರೀತಿ ನಡೆದುಕೊಳ್ಳುತ್ತಿದ್ದೀರಿ. ಹಾವು ಮುಂಗಿಸಿ ತರಹ ಇದ್ದ ಇಬ್ಬರು ಎಲ್ಲಿ ರಾಜಿ ಮಾಡಿಕೊಂಡರು. ಶಾಸಕರು ಒಬ್ಬ ಸುಸಂಸ್ಕೃತ ಮನೆತನದಿಂದ ಬಂದಿರುವ ವ್ಯಕ್ತಿ ಅವರಿಗೆ ಕೆಟ್ಟ ಪದಗಳನ್ನು ಬಳಸಿ ಮಾತನಾಡಿದರೆ ದಂಗೆ ಏಳುವುದಾಗಿ ಎಚ್ಚರಿಕೆ ನೀಡಿದರು. ಕಾಂಗ್ರೆಸ್ ಸೇರ್ಪಡೆಗಾಗಿ ನೀವುಗಳು ಈಗ ಶಾಸಕರ ಮೇಲೆ ಗೂಬೆ ಕೂರಿಸಿ ಹೋಗುತ್ತಿದ್ದಾರೆ.

ವಕೀಲ ಧನಂಜಯ ಮಾತನಾಡಿ ಹಣ, ಅಧಿಕಾರ ಶಾಶ್ವತವಲ್ಲ. ನೀರಿನ ಮೇಲೆ ಗುಳ್ಳೆ ಇದ್ದಂತೆ. ನೀವಿಬ್ಬರೂ ಏಕವಚನದಲ್ಲಿ ಮಾತಾಡೋದನ್ನ ಖಂಡಿಸುತ್ತೇನೆ. ಚುನಾವಣೆ ಕೆಲವು ದಿನಗಳಲ್ಲಿ ಜೆಡಿಎಸ್‌ಗೆ ಬಂದು ಶಾಸಕರನ್ನು ಗೆಲ್ಲಿಸಿರೋದಾಗಿ ಹೇಳುವವರು. ಕೆಬಿಸಿ ಅವರನ್ನ ಏಕೆ ಮೂರು ಬಾರಿ ಗೆಲ್ಲಿಸಲಿಲ್ಲ. ನಿಮ್ಮ ಪೌರಷ ಎಲ್ಲಿ ಹೋಗಿತ್ತು? ನೀವು ಜನನಾಯಕರಲ್ವೇ. ಕೆಬಿಸಿ ಅವರನ್ನೇಕೆ ಸೋಲಿಸಿದರೇ. ಗೆದ್ದ ಮೇಲೆ ಚಲುವರಾಯಸ್ವಾಮಿ ಜತೆ ಇವರಿಬ್ಬರು ಡಿಂಗ್‌ಡಾಂಗ್ ಆಡಿಕೊಂಡಿರುವುದು ಎಲ್ಲರಿಗೂ ತಿಳಿದಿದೆ. ಶಾಸಕರು ನಿಮ್ಮ ಹಾಗೆ ಚುನಾವಣೆಯಲ್ಲಿಕೀಳು ಮಟ್ಟದ ರಾಜಕಾರಣಮಾಡಲಿಲ್ಲ. ಮತದಾರರ ತೀರ್ಪನ್ನು ಗೌರವಿಸಿದ್ದಾರೆ. ನೀವುಗಳು ಬಹಿರಂಗವಾಗಿ ಶಾಸಕರಬಗ್ಗೆ ಅವಹೇಳನ ಕಾರಿಯಾಗಿ ಮಾತ ನಾಡುವುದನ್ನು ಮುಂದುವ ರಿಸಿದರೇ ನಿಮ್ಮ ರಾಜಕೀಯ ಅಂತ್ಯವಾದೀತು ಎಂದರು.

ಸಭೆಯಲ್ಲಿ ಹತ್ತಾರು ಜೆಡಿಎಸ್ ಮುಖಂಡರುಗಳು ಗ್ರಾಮ ಪಂಚಾಯಿತಿ ಸದಸ್ಯರಾಗಲೂ ಅರ್ಹತೆಯಿಲ್ಲದ ಹಾಗೂ ಹೆದರಿಸಿ, ಬೆದರಿಸಿ ವೀಡಿಯೋ ರೆಕಾರ್ಡ ಮಾಡಿಕೊಂಡು ವಾಮಮಾರ್ಗದ ಮೂಲಕ ಮತ ಪಡೆದವರು, ಎಂದೆಲ್ಲಾ ಮನ್ಮುಲ್ ನಿರ್ದೇಶಕರಾದ ಡಾಲುರವಿ ಮತ್ತು ಎಂಬಿ ಹರೀಶ್ ನಡುವಳಿಕೆಯ ಬಗ್ಗೆ ಹಿಗ್ಗಾಮಗ್ಗಾ ಮಾತಿನ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಟಿಯಲ್ಲಿ ಎಂಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್. ಕೆ.ಅಶೋಕ್, ಬೂಕನಕೆರೆ ಹೋಬಳಿ ಅಧ್ಯಕ್ಷ ನಂದೀಶ್, ರವಿಕುಮಾರ್, ನಾಟನಹಳ್ಳಿ ಮಹೇಶ್, ತಾಪಂ ಮಾಜಿ ಸದಸ್ಯ ಒರಿಬತಿಜಿರಿ, ಮಲ್ಲೇನಹಳ್ಳಿ ಮೋಹನ್, ಭೈರಾಪುರಹರೀಶ್ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.



# ವಸಂತಗೆ ಡಾಕ್ಟರೇಟ್ ಪುರಸ್ಕಾರ

**ಮಾಲೂರು:** ಕ್ರೇಮ್ ಬ್ರಿಡ್ಜ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಅಸೋಸಿಯೇಟ್ ಪ್ರೊಫೆಸರ್ ಆಗಿ ಕಾರ್ಯ ನಿರ್ವಸುತ್ತಿರುವ ಮಾಲೂರಿನ ಎಂ.ವಸಂತ ರವರು ಸಲ್ಲಿಸಿದ ಡೇಟಾ ಲೋಕಾಲಿಟ ಅವೇರ್ ವರ್ಚುಯಲ್ ಮಷೀನ್" ಅಲೋಕೇಷನ್ ಪಾರ್ ಡೇಟಾ ಇಂಟೆನ್ಸಿವ್ ಅಪ್ಲಿಕೇಶನ್ ಆನ್ ಕ್ಲೌಡ್ ಎನ್ವಿರಾನ್ಮೆಂಟ್ ಯೂಸಿಂಗ್ ಹಡೂಪ್ ಮ್ಯಾಪ್ ರೆಡ್ಯೂಸ್ ಎಂಬ ಸಂಶೋಧನಾ ಮಹಾಪ್ರಬಂಧಕ್ಕೆ ವಿಶ್ವೇಶ್ವರಯ್ಯ ತಂತ್ರಜ್ಞಾನ ವಿಶ್ವವಿದ್ಯಾಲಯ 3ನೇ ಘಟಕೋತ್ಸವದಲ್ಲಿ ಡಾಕ್ಟರೇಟ್ ಪದವಿ ಪ್ರಧಾನ ಮಾಡಿ ಗೌರವಿಸಿದೆ. ಡಾ.ವಸಂತ.ಎಂ ಅವರು ನಿವೃತ್ತ ಮುಖ್ಯೋಪಾಧ್ಯಾಯ ಹೆಚ್. ಮುನಿಯಪ್ಪ ಹಾಗೂ ಮುಖ್ಯೋಪಾಧ್ಯಾಯನಿ ಮುನಿತಾಯಮ್ಮ ಅವರ ಪುತ್ರಿ, ಪ್ರಾಥಮಿಕ ಪ್ರೌಢ ಶಿಕ್ಷಣವನ್ನು ಮಾಲೂರು ಪಟ್ಟಣದ ಜೆ.ಎಸ್.ಎಸ್ ವಿದ್ಯಾಸಂಸ್ಥೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಪಿ ಯು.ಸಿ ಯನ್ನು ಸರ್ಕಾರಿ ಪದವಿಪೂರ್ವ ಕಾಲೇಜು ವ್ಯಾಸಂಗ ಮಾಡಿರುತ್ತಾರೆ. ನಂತರ ಬಿ.ಇ ಹಾಗೂ ಎಂಟೆಕ್ ಬೆಂಗಳೂರಿನ ಬಿ.ಎಂ.ಎಸ್ ಕಾಲೇಜಿನಲ್ಲಿ ಪಡೆದಿರುತ್ತಾರೆ. ಪಿಎಚ್‌ಡಿ ಪದವಿಯನ್ನು ಪಡೆಯಲು ತಮ್ಮ ಈ ಸಾಧನೆಗೆ ಬೆಂಬಲವಾದ ತಮ್ಮ ಕುಟುಂಬದವರಿಗೂ ಹಾಗೂ ತನಗೆ ಪ್ರೋತ್ಸಾಹಿಸಿದ ಎಲ್ಲಾ ಗುರು ಹಿರಿಯರಿಗೆ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ.

# ಚುನಾವಣೆಯಲ್ಲಿ ನರಸಪ್ಪಗೆ ಜಯ



**ಮಾಲೂರು:** ತಾಲ್ಲೂಕಿನ ಜೋಡಿಪುರ ಗ್ರಾಮದ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆ ಯಲ್ಲಿ ನರಸಪ್ಪ 8 ಮತಗಳು ಪಡೆದು ಅಧ್ಯಕ್ಷರಾದರೇ ಮಂಜುನಾಥ್ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ತಾಲೂಕಿನ ಅಬ್ಬೇನಹಳ್ಳಿ ಗ್ರಾ.ಪಂ.ವ್ಯಾಪ್ತಿಯ ಜೋಡಿಪುರ ಗ್ರಾಮದ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ನರಸಪ್ಪ, ಉಪಾಧ್ಯಕ್ಷ ಸ್ಥಾನಕ್ಕೆ ನಾರಾಯಣಪ್ಪ ನಾಮಪತ್ರಗಳನ್ನು ಸಲ್ಲಿಕೆ ಮಾಡಿದ್ದರು ನಂತರ ನಡೆದ ಚುನಾವಣೆಯಲ್ಲಿ ನರಸಪ್ಪ 8 ಮತಗಳು ಪಡೆದು ಅಧ್ಯಕ್ಷರಾಗಿ ಆಯ್ಕೆಯಾದರೆ ನಾರಾಯಣಪ್ಪ 3 ಮತಗಳು ಪಡೆದು ಸೋಲನ್ನು ಅನುಭವಿಸಿದರು. ಒಂದು ಮತ ತಿರಸ್ಕೃತಗೊಂಡಿತು. ಉಪಾಧ್ಯಕ್ಷಸ್ಥಾನಕ್ಕೆ ಮಂಜುನಾಥ್ ಒಬ್ಬರೇ ನಾಮಪತ್ರ ಸಲ್ಲಿಕೆ ಮಾಡಿದಕಾರಣ ಮಂಜುನಾಥ್ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವುದಾಗಿ ಘೋಷಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಅಧ್ಯಕ್ಷ ನರಸಪ್ಪ ಎಲ್ಲಾ ನಿರ್ದೇಶಕರ ಸಹಕಾರದಿಂದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು ಹಾಲು ಉತ್ಪಕ ಸಹಕಾರ ಸಂಘದ ಅಭಿವೃದ್ಧಿಗೆ ಶ್ರಮಿಸುವುದರ ಜೊತೆಗೆ ಕಾಲಕಾಲಕ್ಕೆ ಹಾಲು ಉತ್ಪಾದಕರಿಗೆ ಒಕ್ಕೂಟಯಿಂದ ಬರುವ ಎಲ್ಲಾ ಸವಲತ್ತುಗಳನ್ನು ಪ್ರಾಮಾಣಿಕವಾಗಿ ತಲುಪಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ಮಾಜಿ ಗ್ರಾ.ಪಂ.ಅಧ್ಯಕ್ಷ ಕೃಷ್ಣನಾಯಕ್ ನಿರ್ದೇಶಕರಗಳಾದ ಆನಂದ್‌ರೆಡ್ಡಿ, ಆರಾಧ್ಯ, ರಾಜಶೇಖರ್, ಚಂದ್ರಪ್ಪ, ಗೋಪಾಲ್ ರೆಡ್ಡಿ, ಕೃಷ್ಣಾರೆಡ್ಡಿ, ಗೌರಮ್ಮ, ನಂಜಮ್ಮ, ಮುಖಂಡ ತಂಬಿಹಳ್ಳಿ ನಾರಾಯಣಸ್ವಾಮಿ, ಕಾರ್ಯದರ್ಶಿ ಮಂಜುನಾಥ್ ಇನ್ನಿತರರು ಹಾಜರಿದ್ದರು.

# ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ



**ಮಾಗಡಿ:** ತಿಪ್ಪಸಂದ್ರ ಹೋಬಳಿ ವ್ಯಾಪ್ತಿಯ ಸರಕಾರಿ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಿಸುವುದಾಗಿ ಕಾಂಗ್ರೆಸ್ ಮುಖಂಡ ಬಗಿನಗೆರೆ ಬಿ.ಎಸ್. ಕುಮಾರು ಹೇಳಿದರು.

ತಾಲೂಕಿನ ಸಂಕೀಘಟ್ಟ ಗ್ರಾಮ ಪಂಚಾಯಿತಿ ಸರಕಾರಿ ಪಂಚಾಯಿತಿ ಮಾದರಿ ಶಾಲೆಯಲ್ಲಿ ಆಯೋಜಿಸಲಾಗಿದ್ದ ಚಿಣ್ಣರ ತಾರಾ ಅಂಕಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮೌಲ್ಯಯುತ, ಶಕ್ತಿಯುತ ಸಮಾಜ ನಿರ್ಮಾಣ ಶಿಕ್ಷಣದಿಂದ ಮಾತ್ರ ಸಾಧ್ಯ, ಶಿಕ್ಷಣ ಬೆಲೆಕಟ್ಟಲಾಗದಂಥಹ, ಕದಿಯಲಾಗದ ವಸ್ತು. ಬುದ್ಧಿವಂತಿಕೆ ಜೊತೆಗೆ ಹೃದಯವಂತಿಕೆ ಇರುವ ಗುಣ ಬೆಳೆಯುವ ಮೌಲ್ಯವುಳ್ಳ ಶಿಕ್ಷಣ ಇಂದಿನ ವಿದ್ಯಾರ್ಥಿಗಳಿಗೆ ಬೇಕಿದ್ದು ಅದರು ಸರಕಾರಿ ಶಾಲೆಯಲ್ಲಿ ಸಿಗುತ್ತಿದೆ. ವಿದ್ಯಾರ್ಥಿಗಳು ಸಂಕಲ್ಪ ಮಾಡಿ ಸಮಾಜದಲ್ಲಿ ಉನ್ನತ ಸ್ಥಾನಗಳಿಸಿ ತಮ್ಮ ತಂದೆ,ತಾಯಿ, ವ್ಯಾಸಂಗ ಮಾಡಿದ ಶಾಲೆ ಹಾಗೂ ಪಾಠಮಾಡಿದ ಗುರುಗಳಿಗೆ ಕೀರ್ತಿ ತಂದುಕೊಡುವ ನಿಟ್ಟಿನಲ್ಲಿ ನಡೆದುಕೊಂಡಾಗ ಮಾತ್ರ ಶಿಕ್ಷಣದ ಮಹತ್ವ ಸಾರ್ಥಕವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸಂಕೀಘಟ್ಟ ಪ್ರೌಢ ಶಾಲೆಯಲ್ಲಿ ಸುಸಜ್ಜಿತ ಗ್ರಂಥಾಲಯ, ವಿಜ್ಞಾನ ಪ್ರಯೋಗಾಲಯ ನಿರ್ಮಾಣವಾಗಬೇಕು ಮತ್ತು ಸರಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಕಡಿಮೆ ಇಲ್ಲದಂತೆ ಶಿಕ್ಷಣಕ್ಕೆ ಮತಷ್ಟು ಆದ್ಯತೆಯನ್ನು ನೀಡಲು ಸಹಕಾರ ನೀಡುವುದಾಗಿ ಬಿ.ಎಸ್.ಕುಮಾರು ತಿಳಿಸಿದರು.

ಬಿಎಂಆರ್‌ಡಿಎ ಮಾಜಿ ಅಧ್ಯಕ್ಷ ಚಿಗಳೂರು ಗಂಗಾಧರ್ ಮಾತನಾಡಿ, ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಎಲ್ಲವನ್ನು ಸಾಧಿಸಬಹುದು, ಹಿಂದಿನ ದಿನಗಳಲ್ಲಿ ಯಾವುದೇ ಸೌಲಭ್ಯಗಳು ಸಿಗದೇ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕಷ್ಟಪಡುತ್ತಿದ್ದರು. ಆದರೆ ಈಗಿನ ವಿದ್ಯಾರ್ಥಿಗಳಿಗೆ ಸರಕಾರ ಎಲ್ಲಾ ಸೌಲಭ್ಯಗಳು ಸಿಗುತ್ತಿವೆ ಇದನ್ನು ಸದುಪಯೋಗ ಮಾಡಿಕೊಂಡು ವ್ಯಾಸಂಗಮಾಡಿ ಗುರಿ ಮುಟ್ಟಬೇಕು ಆಗ ಸರಕಾರ ನೀಡುವ ಸೌಲತ್ತುಗಳಿಗೆ ಬೆಲೆ ಸಿಗಲಿದೆ. ಶಾಲೆ ದೇವಾಲಯ ಮಕ್ಕಳೇ ದೇವರು ಎಂಬ ಕಲ್ಪನೆ ಮೂಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿಗಳು ಸತ್ಪಜೆಗಳಾಗಲು ಸಾಧ್ಯ. ಸಂಕೀಘಟ್ಟ ಗ್ರಾಮದಲ್ಲಿ ಪ್ರೌಢಶಾಲೆ ಇಲ್ಲದೆ ಬಗಿನಗೆರೆ ಮತ್ತು ತಿಪ್ಪಸಂದ್ರ ಹೋಬಳಿ ಕೇಂದ್ರಕ್ಕೆ ನಡೆದು ಹೋಗುವ ಅನಿವಾರ್ಯವಿತ್ತು ಈಗ ಇಲ್ಲಿ ಪ್ರೌಢಶಾಲೆ ಮತ್ತು ಪಂಚಾಯಿತಿ ಮಾದರಿ ಶಾಲೆ ಆಗಿರುವುದು ಇಲ್ಲಿನ ಜನರಿಗೆ ಅನುಕೂಲಕರವಾಗಲಿದೆ ಎಂದರು.


ಬಿಜೆಪಿ ಮುಖಂಡ ಚಿಕ್ಕಹಳ್ಳಿ ಶ್ರೀಧರ್, ಮಾತನಾಡಿ ಚಿಕ್ಕಕಲ್ಯ ಬಳಿಯಲ್ಲಿ ನಿರ್ಮಾಣವಾಗಿರುವ ಸರಕಾರದ ಜಿಟಿಟಿಸಿ ತರಬೇತಿ ಕೇಂದ್ರದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿಯಾಗುತ್ತಿದ್ದಾರೆ ಈ ಭಾಗಕ್ಕೆ ತರಬೇತಿ ಕೇಂದ್ರ ಅನುಕೂಲಕರವಾಗಿದೆ ಎಂದರು.

ಗಮನ ಸೆಳೆದ ಸಂಸ್ಕೃತಿಕ ಕಾರ್ಯಕ್ರಮಗಳು: ಸಂಕೀಘಟ್ಟ ವಿದ್ಯಾರ್ಥಿಗಳು ದೇಶಭಕ್ತಿ ಗೀತೆ, ಭಕ್ತಿ ಗೀತೆ ಮತ್ತು ಕನ್ನಡ ಭಾಷಾಭಿಮಾನ ಮೂಡಿಸುವ ಗೀತಗಳಿಗೆ ನೃತ್ಯ ಮಾಡಿ ಗಮನ ಸೆಳೆದರು.

ತಾಲೂಕು ರೈತಸಂಘದ ಅಧ್ಯಕ್ಷ ಗೋವಿಂದರಾಜು, ಮುಖ್ಯ ಶಿಕ್ಷಕರಾದ ವೀರಣ್ಣ, ಕೃಷ್ಣಪ್ಪ, ರೂಪೇಶ್, ಚಿಕ್ಕಕಲ್ಯ ಶ್ರೀಧರ್, ಗ್ರಾಪಂ ಅಧ್ಯಕ್ಷೆ ಗಂಗಾದೇವಿ ಕುಮಾರ್, ಚಂದ್ರಶೇಖರ್, ಶ್ರೀನಿವಾಸ ಮೂರ್ತಿ, ಚಿಕ್ಕಣ್ಣ, ಸೂರ್ಯ ಕುಮಾರ್, ನಿವೃತ್ತ ಮುಖ್ಯ ಶಿಕ್ಷಕ ವಿಜಯಸಿಂಹ, ರೇಣುಕಮ್ಮ ಅಧ್ಯಕ್ಷರಾದ ಮಂಜುನಾಥ್, ಹೆಬ್ಬಳು ರಂಗಸ್ವಾಮಯ್ಯ, ವಕೀಲ ಕೃಷ್ಣಮೂರ್ತಿ ಇತರರು ಇದ್ದರು.

# ಇ–ಖಾತಾ ಅಂದೋಲನದಲ್ಲಿ ಭಾಗವಹಿಸಿ

**ಮುಳಬಾಗಿಲು:** ಮುಳಬಾಗಿಲು ನಗರಸಭಾ ವ್ಯಾಪ್ತಿಯಲ್ಲಿ ಇ–ಖಾತಾ ಅಂದೋಲನಾ ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ/126/ಜೆಇಎಲ್/ 2023(ಇ) ದಿನಾಂಕ 11–02–2025 ರಂತೆ ಕರ್ನಾಟಕ ಪುರಸಭಾ ತೆರಿಗೆ(ತಿದ್ದುಪಡಿ) ನಿಯಮ–2025 ನಿಯಮಾವಳಿ ಗಳಂತೆ, ನಗರ ಸ್ಥಳೀಯ ಸಂಸ್ಥೆಗಳ ಎಲ್ಲಾ ಅಧಿಕೃತ ಆಸ್ತಿಗಳ ವಿವರಗಳನ್ನು ಎ–ರಿಜಿಸ್ಟರ್‌ನಲ್ಲಿ ನಮೂನೆ–3ರ ಪ್ರತಿಗಳು ಹಾಗೂ ಅನಧಿಕ ಆಸ್ತಿಗಳನ್ನು ಬಿ– ರಿಜಿಸ್ಟರ್‌ನಲ್ಲಿ ನಮೂದಿಸಿ, ನಮೂನೆ–2ಎ/3ಎ ಪ್ರತಿಗಳನ್ನು ಆಸ್ತಿಗಳ ಮಾಲೀಕರುಗಳಿಗೆ ನೀಡಲು ಸರ್ಕಾರ ಅಧಿಕೃತವಾಗಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ಮುಳಬಾಗಿಲು ನಗರಸಭಾ ವ್ಯಾಪ್ತಿಯಲ್ಲಿ ವಾಸವಿರುವ ಎಲ್ಲಾ ಆಸ್ತಿ ಮಾಲೀಕರಿಗೆ ಹಾಗೂ ಅನುಭೋಗದಾರಿಗೆ ಇ– ಖಾತೆ ಮಾಡಿಕೊಳ್ಳಲು ಮೂರು ತಿಂಗಳು ಕಾಲವಾಕಾಶ ನೀಡಿದ್ದು ದಿನಾಂಕ 20– 02–2025ರಿಂದ 10–05–2025ರವರೆಗೆ ನಗರಸಭಾ ವ್ಯಾಪ್ತಿಯಲ್ಲಿ ನಡೆಯುವ ಇ– ಖಾತಾ ಆಂದೋಲನದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರುಗಳಿಗೆ/ ಸಾರ್ವಜನಿಕರು ಅಂದೋಲನದಲ್ಲಿ ಭಾಗವಹಿಸುವಂತೆ ಜಾಗೃತಿಯನ್ನು ಮೂಡಿಸಲಾಯಿತು.



ಈ ಸಂದರ್ಭದಲ್ಲಿ ನಗರಸಭಾ ಅಧ್ಯಕ್ಷ ಶಭಾನ ಬೇಗಂ, ನಗರಸಭೆಯ ಸದಸ್ಯ ಸೋಮಣ್ಣ, ಗರಡಿ ಶಂಕರ್, ಜಭಿವುಲ್ಲ, ಗ್ಯಾಸ್ ರಘು, ಸಂದೀಪ್, ರಿಯಾಜ್ ಅಹ್ಮದ್, ಮುನಿರಾಜು, ವಜೀರ್ ಹಾಗೂ ಪೌರಾಯುಕ್ತ ವಿ.ಶ್ರೀಧರ್, ಕಂದಾಯಾಧಿಕಾರಿ ತ್ಯಾಗರಾಜ್ ಮತ್ತು ನಗರಸಭಾ ಸಿಬ್ಬಂದಿ ವರ್ಗದವರು ,ಸಾರ್ವಜನಿಕರು ಹಾಜರಿದ್ದರು.

# ಶ್ರೀಉರಿಲಿಂಗೇಶ್ವರ ಸ್ವಾಮಿ ಜಾತ್ರಾಮಹೋತ್ಸವ



**ಮಾಗಡಿ:** ತಾಲೂಕಿನ ಗಡಿ ಶ್ರೀಬೆಟ್ಟಹಳ್ಳಿ ಮಠದಲ್ಲಿ ಶಿವರಾತ್ರಿ ಪ್ರಯುಕ್ತ ಶ್ರೀಉರಿಲಿಂಗೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಫೆ.26ರಿಂದ 27ರವರೆಗೆ ಅದ್ದೂರಿಯಾಗಿ ನಡೆಯಲಿದೆ ಎಂದು ಬೆಟ್ಟಹಳ್ಳಿ ಮಠದ ಶ್ರೀಚಂದ್ರಶೇಖರ ಶಿವಾಚಾರ್ಯ ಮಹಾ ಸ್ವಾಮೀಜಿ ತಿಳಿಸಿದರು.

ಪಟ್ಟಣದಲ್ಲಿ ಬುಧವಾರ ಜಾತ್ರಾಮಹೋತ್ಸವದ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಫೆ.26 ರ ಬುಧವಾರ ಸ್ವಸ್ತಿವಾಚನಾದಿಗಳು, ಧ್ವಜಾರೋಹಣ, ಶ್ರೀವಿನಾಯಕ ಸ್ವಾಮಿಗೆ ಅಭಿಷೇಕ, ಹೂವಿನ ಪಲ್ಲಕಿ ಉತ್ಸವ, ಶ್ರೀಉರಿಲಿಂಗೇಶ್ವರ ಗದ್ದುಗೆಗೆ ಕ್ಷೀರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಹೂವಿನ ಪಲ್ಲಕಿ ಉತ್ಸವ, ಪುಷ್ಪಾಲಂಕಾರ, ಶ್ರೀಮಠದ ಹಳೆಯ ವಿದ್ಯಾರ್ಥಿಗಳಿಂದ ರಾತ್ರಿ 9ಗಂಟೆಗೆ ದಕ್ಷಯಜ್ಞ ಪೌರಾಣಿಕ ನಾಟಕ ನಡೆಯಲಿದೆ.

ಫೆ. 27 ರಂದು ಶಿವಪಾರ್ವತಿ ಕಲ್ಯಾಣ, ರುದ್ರಾಭಿಷೇಕ, ಅರವಟಿಂಕೆ ಉತ್ಸವ, ಮಧ್ಯಾಹ್ನ 1 ಗಂಟೆಗೆ ಶ್ರೀಉರಿಲಿಂಗೇಶ್ವರ ರಥೋತ್ಸವ ಮತ್ತು ರಾತ್ರಿ 7 ಗಂಟೆಗೆ ಬೆಳ್ಳಿಪಲ್ಲಕಿ ಉತ್ಸವನಡೆಯಲಿದೆ. ರಾತ್ರಿ 7–30ಕ್ಕೆ ಉಯ್ಯಾಲೋತ್ಸವ,ಶಯನೋತ್ಸವ ನಡೆಯಲಿದ್ದು ಜಾತ್ರಾಮಹೋತ್ಸವಕ್ಕೆ ಆಗಮಿಸುವ 10 ಸಾವಿರಕ್ಕೂ ಹೆಚ್ಚು ಭಕ್ತರಿಗೆ ನಿರಂತರ ಅನ್ನದಾಸೋಹ ಏರ್ಪಡಿಸಲಾಗಿದೆ ಎಂದರು.

ಜಾತ್ರಾಮಹೋತ್ಸವ ಕಾರ್ಯಕ್ರಮವನ್ನು ಕುಣಿಗಲ್ ಶಾಸಕ ಡಾ.ರಂಗನಾಥ್ ಉದ್ಘಾಟಿಸಲಿದ್ದು, ದಾವಣಗೆರೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ,ಬಿ.ಎಸ್.ಪುಟ್ಟರಾಜು, ಮಾಜಿ ಸಚಿವ ನಾಗರಾಜಯ್ಯ ಸೇರಿದಂತೆ ನಾಡಿನ ಹರಗುರು–ಚರಮೂರ್ತಿಗಳು, ಸಾಹಿತಿಗಳು, ಚುನಾಯಿತ ಪ್ರತಿನಿಧಿಗಳು, ಸಂಘ, ಸಂಸ್ಥೆಗಳ ಮುಖಂಡರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಪದ್ಮನಾಭ,ನಾರಾಯಣಮೂರ್ತಿ, ವೀರಶೈವ ಬ್ಯಾಂಕ್ ನಿರ್ದೇಶಕ ಎಂ.ಎಸ್.ಸಿದ್ದಲಿಂಗೇಶ್ವರ,ಡಿ.ಬಿ.ಯಶೋಧ, ರೂಪೇಶ್, ಶುಭೋದಯ ಮಹೇಶ್, ದೊಡ್ಡಿ ನಾಗೇಶ್ ಇತರರು ಇದ್ದರು.



# ‘ಬಿಲ್ಲಾ ರಂಗ ಭಾಷಾ’ ಸಿನಿಮಾ ಶುರು

ಸುದೀಪ್ ಪ್ರಸ್ತುತ ‘ಸಿಸಿಎಲ್’ ಕ್ರಿಕೆಟ್ ಟೂರ್ನಿಮೆಂಟ್‌ನಲ್ಲಿ ಬ್ಯುಸಿಯಾಗಿದ್ದಾರೆ. ಕರ್ನಾಟಕ ಬುಲ್ಡೋಜರ್ಸ್ ತಂಡ ಈವರೆಗೆ ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡುತ್ತಾ ಬಂದಿದೆ. ಸುದೀಪ್ ಸೇರಿದಂತೆ ಡಾರ್ಲಿಂಗ್ ಕೃಷ್ಣ, ಗೋಲ್ಡನ್ ಸ್ಟಾರ್ ಗಣೇಶ್ ಹಾಗೂ ಇನ್ನೂ ಕೆಲವು ಆಟಗಾರರು ಬಹಳ ಒಳ್ಳೆಯ ಪ್ರದರ್ಶನ ನೀಡುತ್ತಿದ್ದಾರೆ. ಸಿಸಿಎಲ್ ಟೂರ್ನಿಯಲ್ಲಿ ಬ್ಯುಸಿಯಾಗಿರುವ ಹೊತ್ತಿನಲ್ಲಿಯೇ ಸುದೀಪ್ ತಮ್ಮ ಮುಂದಿನ ಸಿನಿಮಾದ ಬಗ್ಗೆ ಪ್ರಮುಖವಾದ ಅಪ್‌ಡೇಟ್ ಒಂದನ್ನು ನೀಡಿದ್ದಾರೆ.

ಸುದೀಪ್ ನಟನೆಯ ‘ಮ್ಯಾಕ್ಸ್’ ಸಿನಿಮಾ ಭಾರಿ ದೊಡ್ಡ ಹಿಟ್ ಆಗಿದೆ. 2024ರ ಬ್ಲಾಕ್ ಬಸ್ಟರ್ ಕನ್ನಡ ಸಿನಿಮಾ ಎನಿಸಿಕೊಂಡಿದೆ ‘ಮ್ಯಾಕ್ಸ್’. ‘ಮ್ಯಾಕ್ಸ್’ ಜೊತೆಗೆ ಹೆಸರಿಡದ ಸಿನಿಮಾ ಒಂದರಲ್ಲಿ ಸುದೀಪ್ ನಟಿಸುತ್ತಿದ್ದು, ಸಿನಿಮಾಕ್ಕೆ ಕೆಆರ್‌ಜಿ ಪ್ರೊಡಕ್ಷನ್ಸ್ ಬಂಡವಾಳ ಹೂಡಿದ್ದಾರೆ. ಇದರ ಜೊತೆಗೆ ಸುದೀಪ್ ನಟಿಸಲಿರುವ ‘ಬಿಲ್ಲಾ ರಂಗ ಭಾಷಾ’ ಸಿನಿಮಾಕ್ಕಾಗಿ ಅಭಿಮಾನಿಗಳು ಬಹಳ ಸಮಯದಿಂದಲೇ ಕಾಯುತ್ತಿದ್ದರು. ‘ಮ್ಯಾಕ್ಸ್’ ಸಿನಿಮಾದ ಚಿತ್ರೀಕರಣಕ್ಕೆ ಮುಂಚೆಯೇ ‘ಬಿಲ್ಲಾ ರಂಗ ಭಾಷಾ’ ಸಿನಿಮಾ ಘೋಷಣೆ ಆಗಿತ್ತು. ಆದರೆ ಆ ಸಿನಿಮಾದ ಯಾವುದೇ ಅಪ್‌ಡೇಟ್ ಹೊರಬಿದ್ದಿರಲಿಲ್ಲ. ಇದೀಗ ಸುದೀಪ್, ‘ಬಿಲ್ಲಾ ರಂಗ ಭಾಷಾ’ ಸಿನಿಮಾದ ಚಿತ್ರೀಕರಣ ಯಾವಾಗ ಶುರುವಾಗುತ್ತದೆ ಎಂಬ ಪ್ರಶ್ನೆಗೆ ಉತ್ತರ ನೀಡಿದ್ದಾರೆ.


ಸಿಸಿಎಲ್‌ನಲ್ಲಿ ಬ್ಯುಸಿಯಾಗಿರುವ ಸುದೀಪ್ ನಿನ್ನೆಯಷ್ಟೆ ಟ್ವೀಟ್ ಒಂದನ್ನು ಮಾಡಿ, ‘ಸಿಸಿಎಲ್ ಮೈಸೂರಿಗೆ ಬರುತ್ತಿದೆ. ಎರಡು ಸೆಮಿಫೈನಲ್ಸ್ ಮತ್ತು ಒಂದು ಫೈನಲ್ಸ್ ಮಾರ್ಚ್ 1 ಮತ್ತು 2 ರಂದು ಮೈಸೂರಿನಲ್ಲಿ ನಡೆಯಲಿದೆ. ಈ ವಿಷಯ ಘೋಷಿಸುತ್ತಿರುವುದಕ್ಕೆ ಬಹಳ ಸಂತೋಷವಾಗುತ್ತಿದೆ’ ಎಂದು ಟ್ವೀಟ್ ಮಾಡಿದ್ದರು. ನಂತರ ಅದೇ ಟ್ವೀಟ್ ಅನ್ನು ರೀಟ್ವೀಟ್ ಮಾಡುತ್ತಾ, ‘ಅಂದಹಾಗೆ ಬಿಬಿಆರ್ (ಬಿಲ್ಲಾ ರಂಗ ಭಾಷಾ) ಸಿನಿಮಾ ಮಾರ್ಚ್ 2ನೇ ವಾರದಿಂದ ಚಿತ್ರೀಕರಣ ಆರಂಭ ಆಗಲಿದೆ’ ಎಂದು ಬರೆದಿದ್ದಾರೆ.

ಸುದೀಪ್‌ರ ಟ್ವೀಟ್‌ಗೆ ಅಭಿಮಾನಿಗಳು ಖುಷಿಯಿಂದ ಪ್ರತಿಕ್ರಿಯೆ ನೀಡಿದ್ದಾರೆ. ‘ಬಿಲ್ಲಾ ರಂಗ ಭಾಷಾ’ ಸಿನಿಮಾವನ್ನು ಅನುಪ್ ಭಂಡಾರಿ ನಿರ್ದೇಶನ ಮಾಡಲಿದ್ದಾರೆ. ಈ ಹಿಂದೆ ಸುದೀಪ್ ನಟನೆಯ ‘ವಿಕ್ರಾಂತ್ ರೋಣ’ ಸಿನಿಮಾವನ್ನು ಇದೇ ಅನುಪ್ ಭಂಡಾರಿ ನಿರ್ದೇಶನ ಮಾಡಿದ್ದರು. ಸುದೀಪ್‌ಗೆ ‘ಬಿಲ್ಲಾ ರಂಗ ಭಾಷಾ’ ಮತ್ತು ‘ಅಶ್ವತ್ಥಾಮ’ ಎರಡು ಕತೆಯನ್ನು ಅನುಪ್ ಭಂಡಾರಿ ಹೇಳಿದ್ದರು. ಮೊದಲಿಗೆ ‘ಬಿಲ್ಲಾ ರಂಗ ಭಾಷಾ’ ಪ್ರಾರಂಭವಾಗುತ್ತಿದ್ದು, ಈ ಸಿನಿಮಾ ಮುಗಿದ ಬಳಿಕ ಇದೇ ಜೋಡಿ ‘ಅಶ್ವತ್ಥಾಮ’ ಸಿನಿಮಾ ಪ್ರಾರಂಭ ಆಗಲಿದೆ.

ಸುದೀಪ್ ಪ್ರಸ್ತುತ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕೆಆರ್‌ಜಿ ಪ್ರೊಡಕ್ಷನ್ಸ್‌ನ ಹೊಸ ಸಿನಿಮಾದಲ್ಲಿ ಸುದೀಪ್ ನಟಿಸುತ್ತಿದ್ದಾರೆ. ಮಾರ್ಚ್ ತಿಂಗಳಲ್ಲಿ ‘ಬಿಲ್ಲಾ ರಂಗ ಭಾಷಾ’ ಸಿನಿಮಾ ಪ್ರಾರಂಭ ಮಾಡಲಿದ್ದಾರೆ. ಅದಾದ ಬಳಿಕ ತಮಿಳಿನ ಚೇರನ್ ನಿರ್ದೇಶನದ ಸಿನಿಮಾದಲ್ಲಿ ನಟಿಸಲಿದ್ದಾರೆ. ತಮಿಳಿನ ಮತ್ತೊಬ್ಬ ನಿರ್ದೇಶಕರ ಸಿನಿಮಾದಲ್ಲಿಯೂ ಸುದೀಪ್ ನಟಿಸಲಿದ್ದಾರೆ.

# ರಿಷಬ್ ಶೆಟ್ಟಿ ಅಭಿನಯದ ಚಿತ್ರದಿಂದ ಪೋಸ್ಟರ್ ರಿಲೀಸ್

ದೇಶದಲ್ಲಿಂದು ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತಿ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಬಹುನಿರೀಕ್ಷಿತ 'ಭಾರತದ ಹೆಮ್ಮೆ: ಛತ್ರಪತಿ ಶಿವಾಜಿ ಮಹಾರಾಜ' ಚಿತ್ರದ ನಿರ್ಮಾಪಕರು ಮರಾಠಾ ರಾಜನ ಮೊದಲ ನೋಟವನ್ನು ಅನಾವರಣಗೊಳಿಸಿದ್ದಾರೆ. ಈ ಪೋಸ್ಟರ್ ಮಹಾನ್ ಯೋಧನ ಶಕ್ತಿ, ಭಕ್ತಿ ಮತ್ತು ಶೌರ್ಯದ ಪ್ರತೀಕದಂತಿದೆ.



‘ದಿ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್’ ನಿರ್ದೇಶಕ ಸಂದೀಪ್ ಸಿಂಗ್ ಅವರು ಚಿತ್ರದ ಮೊದಲ ನೋಟವನ್ನು ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್‌ನಲ್ಲಿ ಬಿಡುಗಡೆ ಮಾಡಿದ್ದಾರೆ. ಪೋಸ್ಟರ್‌ನಲ್ಲಿ ಮರಾಠಾ ರಾಜ ಭವಾನಿ ದೇವಿಯ ಎದುರು ನಿಂತಿರುವುದನ್ನು ಕಾಣಬಹುದು. ಆದ್ರೆ ಅವರ ಮುಖವನ್ನು ಗೌಪ್ಯವಾಗಿಡಲಾಗಿದೆ. ಹಿಮ್ಮುಖದ ಫೋಟೋ ಇದಾಗಿದ್ದು, ಮುಂದಿನ ಪೋಸ್ಟರ್ಸ್ ನೋಡುವ ಸಿನಿಪ್ರಿಯರ ಕಾತರ ಹೆಚ್ಚಿದೆ. ಈ ಪೋಸ್ಟರ್ ಆಧ್ಯಾತ್ಮಿಕ ಶಕ್ತಿ ಮತ್ತು ಐತಿಹಾಸಿಕ ಭವ್ಯತೆಯನ್ನು ಪ್ರತಿಬಿಂಬಿಸುತ್ತಿದೆ. ಎಪಿಕ್ ಪೀರಿಯಾಡಿಕಲ್ ಡ್ರಾಮಾ ರೆಡಿಯಾಗುತ್ತಿದೆ ಎಂಬುದರ ಸುಳಿವನ್ನು ಪೋಸ್ಟರ್ ಬಿಟ್ಟುಕೊಟ್ಟಿದೆ.

ಫಸ್ಟ್ ಲುಕ್ ರಿಲೀಸ್ ಮಾಡಿದ ಸಂದೀಪ್ ಸಿಂಗ್, 'ಜೈ ಭವಾನಿ, ಜೈ ಶಿವಾಜಿ, ಹರ್ ಹರ್ ಮಹಾದೇವ್' ಎಂದು ಬರೆದುಕೊಂಡಿದ್ದಾರೆ. ಜೊತೆಗೆ, ಭಾರತದ ಹೆಮ್ಮೆಯ, ಶ್ರೇಷ್ಠ ಯೋಧ ರಾಜ ಛತ್ರಪತಿ ಶಿವಾಜಿ ಮಹಾರಾಜರ 395ನೇ ಜನ್ಮ ವಾರ್ಷಿಕೋತ್ಸವದಂದು, ಇಡೀ ಖಂಡದ ವಿಧಿಯನ್ನೇ ಬದಲಿಸಿದ ಮಹಾನ್ ರಾಜನ ಶಕ್ತಿ ಮತ್ತು ಭಕ್ತಿಯನ್ನು ಚಿತ್ರಿಸುವ ಮೊದಲ ನೋಟವನ್ನು ನಾವು ಬಹಳ ಹೆಮ್ಮೆಯಿಂದ ಪ್ರಸ್ತುತಪಡಿಸುತ್ತಿದ್ದೇವೆ. ಪರಿಣಿತ ತಂಡದೊಂದಿಗೆ ಅಸಾಧಾರಣ ಶೌರ್ಯ, ಗೌರವಕರ ಮತ್ತು ಸ್ವಆಡಳಿತದ ಕಥೆಯನ್ನು ತೆರೆ ಮೇಲೆ ತರುತ್ತಿರುವುದು ಒಂದು ಅತ್ಯುನ್ನತ ಗೌರವ. ಸಿನಿಮಾ ಜನವರಿ 21, 2027ರಂದು ವಿಶ್ವಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಲಿದೆ ಎಂದು ತಿಳಿಸಿದ್ದಾರೆ.

# ಧರ್ಮ ತೊರೆದು ಮುಸ್ಲಿಂ ರಾಜ ಮನೆತನದ ಸೊಸೆಯಾದ ಖ್ಯಾತ ನಟಿ

**ಬಾ**ಲಿವುಡ್ ಕಂಡ ಚೆಂದದ ನಟಿಯರಲ್ಲಿ ಇವರು ಸಹ ಒಬ್ಬರಾಗಿದ್ದಾರೆ. ಡಿ.2ರಂದು ಬ್ರಾಹ್ಮಣ ಕುಟುಂಬದಲ್ಲಿ ಜನಿಸಿದ ಈ ನಟಿ ಹಿಂದಿ ಮತ್ತು ಬೆಂಗಾಲಿ ಸೇರಿದಂತೆ ಹಲವು ಭಾಷೆಯ ಸಿನಿಮಾಗಳಲ್ಲಿ ನಟಿಸಿದ್ದಾರೆ. ಮದುವೆ ಬಳಿಕ ಇಸ್ಲಾಂ ಸ್ವೀಕರಿಸಿ ಬೇಗಂ ಆಯೇಷಾ ಎಂದು ತಮ್ಮ ಹೆಸರು ಬದಲಿಸಿಕೊಂಡರು.

2013ರಲ್ಲಿ ಭಾರತದ ಮೂರನೇ ಅತ್ಯುನ್ನತ ಪ್ರಶಸ್ತಿ ಪದ್ಮಭೂಷಣ ನೀಡಿ ಭಾರತ ಸರ್ಕಾರ ಇವರನ್ನು ಗೌರವಿಸಿದೆ. 14ನೇ ವಯಸ್ಸಿನಲ್ಲಿ ನಟನೆ ಆರಂಭಿಸಿದ ನಟಿ, 1969 ಮತ್ತು 1973ರ ಕಾಲಘಟ್ಟದ ಬಾಕ್ಸ್ ಆಫಿಸ್ ಕ್ವೀನ್ ಆಗಿದ್ದರು. ನಿರ್ಮಾಪಕರು ಈ ನಟಿಯ ಮನೆ ಮುಂದೆ ಕ್ಯೂ ನಿಲ್ಲುತ್ತಿದ್ದರು. ನಟಿಯ ಮಗ ಸಹ ಇಂದು ಬಾಲಿವುಡ್‌ನ ಟಾಪ್ ನಟರಲ್ಲಿ ಒಬ್ಬರಾಗಿದ್ದಾರೆ. ಮಗನ ಜೊತೆಯಲ್ಲಿಯೂ ಈ ನಟಿ ಸ್ಕ್ರೀನ್ ಶೇರ್ ಮಾಡಿಕೊಂಡಿದ್ದಾರೆ.

70ರ ದಶಕದಲ್ಲಿ ಶರ್ಮಿಳಾ ಟ್ಯಾಗೋರ್ ಬಾಲಿವುಡ್ ಅಂಗಳದ ಟಾಪ್ ನಟಿಯರಲ್ಲಿ ಒಬ್ಬರಾಗಿದ್ದರು. ರಾಜೇಶ್ ಖನ್ನಾ, ಧರ್ಮೇಂದ್ರ, ಸಂಜೀವ್ ಕುಮಾರ್, ಉತ್ತಮ್ ಕುಮಾರ್, ಶಮ್ಮಿ ಕಪೂರ್ ಸೇರಿದಂತೆ ಹಲವು ಲೆಜೆಂಡ್ ಜೊತೆಯಲ್ಲಿ ಶರ್ಮಿಳಾ ಟ್ಯಾಗೋರ್ ಕೆಲಸ ಮಾಡಿದ್ದಾರೆ. ರಾಜೇಶ್ ಖನ್ನಾ ಮತ್ತು ಉತ್ತಮ್ ಕುಮಾರ್ ಜೊತೆಗಿನ ಶರ್ಮಿಳಾ ಟ್ಯಾಗೋರ್ ಅವರ ತೆರೆ ಮೇಲಿನ ಕೆಮಿಸ್ಟ್ರಿ ಮೋಡಿ ಮಾಡುತ್ತಿತ್ತು. ಈ ಕಾರಣದಿಂದಲೇ ಈ ಮೂವರ ಕಾಂಬಿನೇಷನ್‌ನಲ್ಲಿ ಹೆಚ್ಚು ಸಿನಿಮಾಗಳು ಬಂದವು.

ನಟ ರಾಜೇಶ್ ಖನ್ನಾ ಜೊತೆಗಿನ ಆರಾಧಾನ, ಚೋಟಿ ಬಹು, ಸಫರ್, ರಾಜಾ ರಾಣಿ, ದಾಗ್, ಅವಿಶಂಕರ್, ಮಾಲೀಕ್ ಸಿನಿಮಾಗಳು ಬಾಕ್ಸ್ ಆಫಿಸ್‌ನಲ್ಲಿ ದಾಖಲೆ ಬರೆದಿದ್ದವು. ಹಾಗೆ ಉತ್ತಮ್ ಕುಮಾರ್ ಜೊತೆಗೆ ನಟಿಸಿದ್ದ ಅಮಾಂಶು, ಆನಂದ್ ಆಶ್ರಮ್ ಮತ್ತು ದೂರಿಯಾಂ ಸಿನಿಮಾಗಳು ಸೂಪರ್ ಹಿಟ್ ಪಟ್ಟಿಗೆ ಸೇರಿದ್ದವು. ಸಾಲು ಸಾಲು ಹಿಟ್ ಸಿನಿಮಾಗಳನ್ನು ನೀಡುತ್ತಿರುವ ಸಂದರ್ಭದಲ್ಲಿ ಪಟೌಡಿ ಕುಟುಂಬದ ನವಾಬ್, ಅಂದಿನ ಕ್ರಿಕೆಟ್ ಟೀಂ ಇಂಡಿಯಾದ ನಾಯಕ ಮನ್ಸೂರ್ ಅಲಿ ಖಾನ್ ಪಟೌಡಿ ಅವರೊಂದಿಗೆ ಪ್ರೇಮಾಂಕುರವಾಗುತ್ತದೆ. ಇಸ್ಲಾಂ ಧರ್ಮಕ್ಕೆ ಮತಾಂತರಗೊಂಡು ಬೇಗಂ ಆಯೇಶಾ ಸುಲ್ತಾನ ಎಂದು ಹೆಸರು ಬದಲಿಸಿಕೊಳ್ಳುತ್ತಾರೆ. ಆನಂತರ ಮನ್ಸೂರ್ ಅಲಿ ಖಾನ್ ಅವರನ್ನು ವಿವಾಗವಾಗುತ್ತಾರೆ. ಮನ್ಸೂರ್ ಅಲಿ ಖಾನ್ ಮತ್ತು ಶರ್ಮಿಳಾ ಟ್ಯಾಗೋರ್ ದಂಪತಿಗೆ ಸೈಫ್ ಅಲಿ ಖಾನ್, ಸಬಾ ಅಲಿ ಖಾನ್ ಮತ್ತು ಸೋಹಾ ಅಲಿ ಖಾನ್ ಎಂಬ ಮೂರು ಮಕ್ಕಳಿದ್ದಾರೆ. ಮಗ ಸೈಫ್ ಅಲಿ ಖಾನ್ ಸಹ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸೈಫ್ ಅಲಿ ಖಾನ್ ಸಹ ಎರಡು ಮದುವೆಯಾಗಿದ್ದು, ನಾಲ್ಕು ಮಕ್ಕಳ ತಂದೆಯಾಗಿದ್ದಾರೆ.

ಶರ್ಮಿಳಾ ಟ್ಯಾಗೋರ್ 1960–1970ರ ಕಾಲಘಟ್ಟದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯಾಗಿದ್ದರು. ಮೌಸಮ್ ಸಿನಿಮಾದ ನಟನೆಗಾಗಿ ನ್ಯಾಷನಲ್ ಫಿಲಂ ಅವಾರ್ಡ್, ಆರಾಧಾನ ಚಿತ್ರಕ್ಕೆ ಫಿಲಂಫೇರ್ ಅವಾರ್ಡ್ ಪಡೆದುಕೊಂಡಿದ್ದರು. ಆಶಿಕ್ ಅವಾರ, ಮನ್, ವಿರುದ್ಧ್ , ಏಕಲವ್ಯ, ಬ್ರೇಕ್ ಕೇ ಬಾದ್ ಸೇರಿದಂತೆ ಹಲವು ಸೂಪರ್ ಹಿಟ್ ಸಿನಿಮಾಗಳನ್ನು ಶರ್ಮಿಳಾ ಟ್ಯಾಗೋರ್ ನೀಡಿದ್ದಾರೆ. 70ರ ದಶಕದಲ್ಲಿಯೇ ಸ್ವಿಮ್ ಸೂಟ್ ಧರಿಸುವ ಮೂಲಕ ಸಿನಿಮಾ ಅಂಗಳದಲ್ಲಿ ಸಂಚಲನ ಸೃಷ್ಟಿಸಿದ್ದರು. ಮದುವೆ ಬಳಿಕ ಬ್ರೇಕ್ ತೆಗೆದುಕೊಂಡಿದ್ದ ಶರ್ಮಿಳಾ ಟ್ಯಾಗೋರ್ 2023ರಲ್ಲಿ ಬಿಡುಗಡೆಯಾದ ಗುಲ್ ಮೊಹರ್ ಸಿನಿಮಾ ಮೂಲಕ ಕಮ್ ಬ್ಯಾಕ್ ಮಾಡಿದ್ದರು. ಸದ್ಯ ಸಿನಿಮಾಗಳಿಂದ ದೂರವಿರೋ ಶರ್ಮಿಳಾ ಟ್ಯಾಗೋರ್, ಆಗಾಗ ರಿಯಾಲಿಟಿ ಶೋಗಳಿಗೆ ಅತಿಥಿಯಾಗಿ ಆಗಮಿಸುತ್ತಿರುತ್ತಾರೆ. ಬೇಗಂ ಆಯೇಶಾ ಸುಲ್ತಾನ ಎಂದು ಹೆಸರು ಬದಲಿಸಿಕೊಂಡರು ಭಾರತ ಮಾತ್ರ ಇವರನ್ನು ಶರ್ಮಿಳಾ ಟ್ಯಾಗೋರ್ ಅಂತಾನೇ ಗುರುತಿಸುತ್ತದೆ.



# ಘೋಷಾಲ್ ಹಾರ್ಟ್ ಓಲ್ಡ್



ಭಾರತದ ಜನಪ್ರಿಯ ಸಿಂಗರ್ ಶ್ರೇಯಾ ಘೋಷಾಲ್ ತುಂಬಾ ಹಳೆಯದಾದ ಹೃದಯ ಹೊಂದಿದ್ದಾರೆಯೇ? ಅವರ ಪ್ರಕಾರ ಹೌದು..!

ಗಾಯಕಿ ಶ್ರೇಯಾ ಘೋಷಾಲ್ ಮೂಲತಃ ರಾಜಸ್ಥಾನದವರು. ಆದರೆ, ಮುಂಬೈನಲ್ಲಿ ಗಾಯಕಿಯಾಗಿ ಸೆಟ್ಲ್ ಆಗಿದ್ದಾರೆ. ಭಾರತದ ಬಹಳಷ್ಟು ಭಾಷೆಗಳಲ್ಲಿ ಹಾಡಿರುವ ಶ್ರೇಯಾ ಘೋಷಾಲ್ ಹಿಂದಿ ಗೀತೆಗಳನ್ನು ಹೆಚ್ಚು ಹಾಡಿದ್ದಾರೆ. ಆದರೆ, ಕನ್ನಡ ಸೇರಿದಂತೆ ದಕ್ಷಿಣ ಭಾರತದ ಭಾಷೆಗಳ ಬಹಳಷ್ಟು ಚಿತ್ರಗೀತೆಗಳಿಗೂ ಶ್ರೇಯಾ ಧ್ವನಿ ನೀಡಿದ್ದಾರೆ. ಅದೆಲ್ಲಾ ಓಕೆ, ಆದರೆ ಶ್ರೇಯಾ ಘೋಷಾಲ್ ಓಲ್ಡ್ ಹಾರ್ಟ್ ಕಥೆ ಏನು? ಸಹಜವಾಗಿಯೇ ಯಾರಿಗಾದರೂ ಕುತೂಹಲ ಇದ್ದೇ ಇರಲಿದೆ. ಸಂದರ್ಶನವೊಂದರಲ್ಲಿ ಗಾಯಕಿ ಶ್ರೇಯಾ ಘೋಷಾಲ್ ಅವರಿಗೆ 'ನಿಮ್ಮ ಫೇವರೆಟ್ ನಟಿ ಯಾರು? ಯಾವ ನಟಿಗೆ ನಿಮ್ಮ ಧ್ವನಿ ಹೆಚ್ಚು ಸ್ಯೂಟ್ ಆಗುತ್ತೆ ಅಂತ ನಿಮಗೆ ಅನ್ನಿಸುತ್ತೆ..?' ಅಂತ ಪ್ರಶ್ನೆ ಕೇಳಲಾಗಿದೆ. ಅದಕ್ಕೆ ಶ್ರೇಯಾ ಕೊಟ್ಟ ಉತ್ತರ ತಮಾಷೆ ಎನ್ನಿಸಿದರೂ ಅವರು ಅವರ ಉತ್ತರ ಹಾಗೂ ಅವರಿಷ್ಟಕ್ಕೆ ಸಂಬಂಧಿಸಿದ್ದು ಎನ್ನಲೇಬೇಕಲ್ಲ!

ಹೌದು, ಆ ಪ್ರಶ್ನೆಗೆ ಉತ್ತರಿಸಿರುವ ಶ್ರೇಯಾ ಘೋಷಾಲ್, 'ನಾನು ಈಗಿನ ಜನರೇಶನ್ನಿನ ಎಲ್ಲಾ ನಟಿಯರಿಗೂ ಹಾಡಿದ್ದೇನೆ. ಆದರೆ, ನಾನು ಒಮ್ಮೆ ಹಳೆಯ ನಟಿಯರಿಗೆ ಹಾಡಲು ಸಾಧ್ಯವಾದರೆ, ಆ ಕಾಲಕ್ಕೆ, ಅಂದರೆ ಬ್ಲಾಕ್ & ವೈಟ್ ಕಾಲಕ್ಕೆ ಹೋಗಲು ಸಾಧ್ಯವಾದರೆ, ನಾನು ವಹೀದಾ ರೆಹಮಾನ್‌ಜಿ ಹಾಗೂ ಮಧು ಬಾಲಾಜಿ ಅವರಿಗೆ ಹಾಡಲು ಇಷ್ಟಪಡುತ್ತೇನೆ' ಎಂದಿದ್ದಾರೆ. ಅಷ್ಟೇ ಅಲ್ಲ, ನಾನು ಬಹುಶಃ ಓಲ್ಡ್ ಹಾರ್ಟ್ ಹೊಂದಿದ್ದೇನೆ ಅಂತ ಅನ್ನಿಸುತ್ತೆ..' ಅಂತ ತಮಾಷೆ ಮಾಡಿದ್ದಾರೆ.

ಜೊತೆಗೆ, ಈಗಿನ ಜನರೇಶನ್ ನಟಿಯರಲ್ಲಿ ನಾನು ಎಲ್ಲರಿಗೂ ಹಾಡಿದ್ದೇನೆ. ಆದರೆ, ಸಂಗೀತ ಗೊತ್ತಿರುವ ಗಾಯಕಿಯರಿಗೆ ಹಾಡಲು ನನಗೆ ಹೆಚ್ಚು ಅನುಕೂಲ ಆಗುತ್ತೆ, ಅದು ಹೆಚ್ಚು ಇಷ್ಟ ಆಗುತ್ತೆ.. ಉದಾಹರಣೆಗೆ ವಿದ್ಯಾ ಬಾಲನ್.. ಅವರಿಗೆ (ಗಿುಜಥಿಚಿ ಃಚಿಟಚಿಟ) ಸಂಗೀತ ಗೊತ್ತು, ಜೊತೆಗೆ ಅವರು ಸ್ವತಃ ಹಾಡಬಲ್ಲರು. ಆಗ ಲಿಪ್ ಸಿಂಕ್ ಕೂಡ ಈಸಿ ಆಗುತ್ತೆ.. ಆದರೆ, ನನಗೆ ನಟಿ ಐಶ್ವರ್ಯಾ ರೈ (ಋಿತಿಚಿಡಿಥಿಚಿ ಖಚು) ಕೂಡ ತುಂಬಾ ಇಷ್ಟ ಹಾಗೂ ಅವರ ಮೇಲೆ ಅಭಿಮಾನ ಜಾಸ್ತಿ.

ಕಾರಣ, ನಟಿ ಐಶ್ವರ್ಯಾ ರೈ ಅವರು ಹಾಡಿಗೆ ಚೆನ್ನಾಗಿ ಎಕ್ಸ್‌ಪ್ರೆಶನ್ ಕೊಡುತ್ತಾರೆ. ಜೊತೆಗೆ, ಅವರು ಲಿಪ್ ಸಿಂಕ್ ಕೂಡ ಚೆನ್ನಾಗಿ ಮಾಡ್ತಾರೆ. ಒಂದು ಹಾಡು ಎಷ್ಟೇ ಚೆನ್ನಾಗಿ ಹಾಡಿದ್ರೂ ಕೂಡ ಅದು ಪರಿಪೂರ್ಣ ಅಂತ ಸಿನಿಮಾದಲ್ಲಿ ಅನ್ನಿಸಬೇಕಾದ್ರೆ, ಆ ಹಾಡಿಗೆ ನಟಿಸುವ ನಟಿ ಚೆನ್ನಾಗಿ ಲಿಪ್ ಸಿಂಕ್ ಮಾಡ್ಬೇಕು. ಅದನ್ನು ಐಶ್ವರ್ಯಾ ರೈ ತುಂಬಾ ಚೆನ್ನಾಗಿ ಮಾಡ್ತಾರೆ. ಜೊತೆಗೆ, ನಾನು ಹಾಡಿದ ಮೊದಲ ಹಾಡಿಗೆ ಆಕ್ಟ್ ಮಾಡಿರೋ ನಟಿ ಐಶ್ವರ್ಯಾ ರೈ. ಸೋ, ಅವ್ರು ನನ್ ಆಲ್ ಟೈಮ್ ಫೇವರೆಟ್..' ಎಂದಿದ್ದಾರೆ ಗಾಯಕಿ ಶ್ರೇಯಾ ಘೋಷಾಲ್.

# ತಮ್ಮದೇ ದಾಖಲೆ ಮುರಿದ ಸಾಯಿ ಪಲ್ಲವಿ-ನಾಗ ಚೈತನ್ಯ

ನಟ ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ಒಟ್ಟಿಗೆ ನಟಿಸಿರುವ ‘ತಂಡೇಲ್’ ಸಿನಿಮಾ ಫೆಬ್ರವರಿ 7 ರಂದು ಬಿಡುಗಡೆ ಆಗಿದ್ದು ಬ್ಲಾಕ್ ಬಸ್ಟರ್ ಎನಿಸಿಕೊಂಡಿದೆ. ಸತತ ನಾಲ್ಕು ಸಿನಿಮಾ ಫ್ಲಾಪ್ ಕೊಟ್ಟ ನಾಗ ಚೈತನ್ಯ, ‘ತಂಡೇಲ್’ ಸಿನಿಮಾದ ಮೂಲಕ ಕೊನೆಗೂ ಒಂದು ಹಿಟ್ ಸಿನಿಮಾ ನೀಡಿದ್ದಾರೆ.

‘ತಂಡೇಲ್’ ಸಿನಿಮಾ ಸ್ವತಃ ನಾಗ ಚೈತನ್ಯ ನಿರೀಕ್ಷೆಗೂ ಮೀರಿ ಹಿಟ್ ಆಗಿದೆ. ನಾಗ ಚೈತನ್ಯರ ಈ ವರೆಗಿನ ಸಿನಿಮಾಗಳಲ್ಲಿಯೇ ಅತಿ ಹೆಚ್ಚು ಹಣ ಗಳಿಸಿದ ಸಿನಿಮಾ ಎನಿಸಿಕೊಂಡಿದೆ. ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ಜೋಡಿ ತಮ್ಮದೇ ಹಳೆ ದಾಖಲೆಯನ್ನು ಮುರಿದು ಹೊಸ ದಾಖಲೆ ಬರೆದಿದ್ದಾರೆ.

ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ಒಟ್ಟಿಗೆ ನಟಿಸಿದ್ದ ‘ಲವ್ ಸ್ಟೋರಿ’ ಸಿನಿಮಾ, ನಾಗ ಚೈತನ್ಯ ನಟನೆಯ ಈವರೆಗಿನ ಅತಿ ಹೆಚ್ಚು ಗಳಿಸಿದ ಸಿನಿಮಾ ಎನಿಸಿಕೊಂಡಿತ್ತು. ಶೇಖರ್ ಕಮ್ಮುಲ ನಿರ್ದೇಶಿಸಿದ್ದ ಈ ಸಿನಿಮಾ 2021 ರಲ್ಲಿ ಬಿಡುಗಡೆ ಆಗಿ ಕೋವಿಡ್ ಮಧ್ಯದಲ್ಲೂ ಸುಮಾರು 60 ಕೋಟಿ ಹಣ ಗಳಿಸಿತ್ತು. ಇದೀಗ ‘ತಂಡೇಲ್’ ಸಿನಿಮಾ ಆ ದಾಖಲೆಯನ್ನು ಮುರಿದಿದ್ದು ನೂರು ಕೋಟಿ ಕಲೆಕ್ಷನ್ ಅನ್ನು ದಾಟಿ ಮುಂದೆ ಹೋಗಿದೆ.

‘ಲವ್ ಸ್ಟೋರಿ’ ಸಿನಿಮಾ ಅಂತರ್ಜಾತಿಯ ಪ್ರೇಮ ವಿವಾಹದ ಬಗ್ಗೆ ಕತೆ ಒಳಗೊಂಡಿತ್ತು. ಸಿನಿಮಾದ ಹಾಡುಗಳು, ಕತೆ, ಸಾಯಿ ಪಲ್ಲವಿ ಮತ್ತು ನಾಗ ಚೈತನ್ಯ ನಡುವಿನ ಕೆಮಿಸ್ಟ್ರಿ ಸಖತ್ ಆಗಿ ವರ್ಕ್ ಆಗಿತ್ತು. ಇದೀಗ ಮತ್ತೊಮ್ಮೆ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಒಟ್ಟಿಗೆ ನಟಿಸಿ ಮತ್ತೊಂದು ಬ್ಲಾಕ್ ಬಸ್ಟರ್ ನೀಡಿದ್ದಾರೆ. ಆ ಮೂಲಕ ನಾಗ ಚೈತನ್ಯಗೆ ಸಾಯಿ ಪಲ್ಲವಿ ಅದೃಷ್ಟದ ನಾಯಕಿ ಎಂಬುದನ್ನು ಸಾಬೀತುಪಡಿಸಿದ್ದಾರೆ.

‘ತಂಡೇಲ್’ ಸಿನಿಮಾ ಬಿಡುಗಡೆ ಆದ ಎರಡು ವಾರಕ್ಕೆ 80 ಕೋಟಿಗೂ ಹೆಚ್ಚು ಮೊತ್ತ ಕಲೆ ಹಾಕಿದೆ. ಸೀಮಿತ ಬಜೆಟ್‌ನಲ್ಲಿ ನಿರ್ಮಾಣ ಮಾಡಿದ ಈ ಸಿನಿಮಾ ಚಿತ್ರಮಂದಿರದಲ್ಲಿಯೇ 100 ಕೋಟಿ ಕಲೆಕ್ಷನ್ ದಾಟಲಿದೆ ಎಂದು ನಿರ್ಮಾಪಕ ಅಲ್ಲು ಅರವಿಂದ್ ಹೇಳಿದ್ದಾರೆ. ಚಿತ್ರಮಂದಿರದಲ್ಲಿ ಸಿನಿಮಾ ಹಿಟ್ ಆಗಿರುವ ಕಾರಣಕ್ಕೆ ಒಟಿಟಿಯಲ್ಲಿಯೂ ಸಿನಿಮಾಕ್ಕೆ ಡಿಮ್ಯಾಂಡ್ ಸೃಷ್ಟಿಯಾಗಿದ್ದು ಅಲ್ಲಿಯೂ ಸಹ ಉತ್ತಮ ಲಾಭವನ್ನೇ ಈ ಸಿನಿಮಾ ಪಡೆದುಕೊಳ್ಳುವುದು ಪಕ್ಕಾ.

2021 ರಲ್ಲಿ ಬಿಡುಗಡೆ ಆದ ‘ಲವ್ ಸ್ಟೋರಿ’ ಸಿನಿಮಾದ ಬಳಿಕ ನಾಗ ಚೈತನ್ಯ ನಟನೆಯ ನಾಲ್ಕು ಸಿನಿಮಾಗಳು ಒಂದರ ಹಿಂದೊಂದರಂತೆ ಫ್ಲಾಪ್ ಆಗಿದ್ದವು. ‘ಬಂಗಾರ್ರಾಜ’, ‘ಥ್ಯಾಂಕ್ ಯು’, ‘ಲಾಲ್ ಸಿಂಗ್ ಛಡ್ಡ’ ಮತ್ತು ‘ಕಸ್ಟಡಿ’ ಸಿನಿಮಾಗಳು ಬಾಕ್ಸ್ ಆಫೀಸ್‌ನಲ್ಲಿ ಮಕಾಡೆ ಮಲಗಿದ್ದವು. ‘ತಂಡೇಲ್’ ಸಿನಿಮಾ ಸಹ ಸೋತಿದ್ದರೆ ನಾಗ ಚೈತನ್ಯ ಭವಿಷ್ಯದ ಬಗ್ಗೆ ಪ್ರಶ್ನೆಗಳು ಏಳುತ್ತಿದ್ದವು. ಅಂಥಹಾ ಸಮಯದಲ್ಲಿ ಈ ಹಿಟ್ ಸಿಕ್ಕಿರುವುದು ನಾಗ ಚೈತನ್ಯಗೆ ದೊಡ್ಡ ಹುರುಪು ತುಂಬಿದೆ. ಇದೀಗ ತಂಡೇಲ್ ನಿರ್ದೇಶನ ಮಾಡಿರುವ ಚಂದೂ ಮೊಂಡೇಟಿ ಜೊತೆಗೆ ತೆನಾಲಿ ರಾಮಕೃಷ್ಣನ ಜೀವನ ಆಧರಿಸಿದ ಕತೆಯಲ್ಲಿ ನಟಿಸಲಿದ್ದಾರೆ ನಾಗ ಚೈತನ್ಯ.




ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **944807487**